ದಶಮಾನ ಕಂಡ ಜಿಲ್ಲೆಯ ಮೊದಲ ಪ್ರಾದೇಶಿಕ ದಿನ ಪತ್ರಿಕೆ

ದಾವಣಗೆರೆ, ಉಡುಪಿ, ಶಿವಮೊಗ್ಗ, ಹಾಸನ, ಚಿಕ್ಕಮಗಳೂರು, ಗದಗ, ಬೆಂಗಳೂರು ಗ್ರಾಮಾಂತರ

KB 12 YEARS 2013

# ಕನ್ನಡ ಭಾರತಿ

ನೊಂದವರ ನೈಜ ಕನ್ನಡಿ

ಸಂಪಾದಕರು : ಮಲ್ಲಿಕಾರ್ಜುನ್ ಕಬ್ಬೂರು

ಸಂಪುಟ : 13 ಸಂಚಿಕೆ : 78

9–9–2025 ಮಂಗಳವಾರ

₹1 KA/SK/DVG-006/2023-2025 KARKAN/2013/50807 KANNADA BHARATHI REGIONAL DALIY DAVANAGERE dvgkanndabharathi@gmail.com Page : 6 VOLUME : 13 ISSUE : 78

## ಮದ್ದೂರು ಕೋಮು ಹಿಂಸಾಚಾರಕ್ಕೆ ಸಿಎಂ ಸಿದ್ದರಾಮಯ್ಯ ರಾಜ್ಯದ ಜನತೆ ಕ್ಷಮೆಯಾಚಿಸಬೇಕು: ಆರ್. ಅಶೋಕ್

**ಬೆಂಗಳೂರು:** ಮದ್ದೂರಿನ ಕೋಮು ಹಿಂಸಾಚಾರದ ಬಗ್ಗೆ ಸಿಎಂ ಸಿದ್ದರಾಮಯ್ಯ



ಅವರು ಕ್ಷಮೆಯಾಚಿಸಬೇಕೆಂದು ವಿಧಾನಸಭೆ ವಿರೋಧ ಪಕ್ಷದ ನಾಯಕ ಆರ್ ಅಶೋಕ್ ಒತ್ತಾಯಿಸಿದ್ದಾರೆ.

ಕಳೆದ ರಾತ್ರಿ ಮದ್ದೂರಿನಲ್ಲಿ ಗಣೇಶ ಮೆರವಣಿಗೆಯ ಸಂದರ್ಭದಲ್ಲಿ ಮದ್ದೂರು ಪಟ್ಟಣದಲ್ಲಿ ನಡೆದ ಕೋಮು ಹಿಂಸಾಚಾರದ ಬಗ್ಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ರಾಜ್ಯದ ಜನರಿಗೆ ಕ್ಷಮೆಯಾಚಿಸಬೇಕೆಂದು ಎಂದರು.

ಕಾಂಗ್ರೆಸ್ ಸರ್ಕಾರದ ತುಷ್ಟೀಕರಣ ರಾಜಕೀಯದಿಂದ ದುಷ್ಕರ್ಮಿಗಳಿಗೆ ಗಲಾಟೆ ಮಾಡಲು ಧೈರ್ಯ ಬರುತ್ತಿದೆ. ಹಿಂದೂಗಳನ್ನು ಎರಡನೇ ದರ್ಜೆಯ ಪ್ರಜೆಗಳಾಗಿ ಪರಿಗಣಿಸುವ ಒಂದು ವಿಶಿಷ್ಟ ಪರಿಸ್ಥಿತಿ ಸೃಷ್ಟಿಯಾಗುತ್ತಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಧರ್ಮಸ್ಥಳ ದೇವಾಲಯ, ನಂತರ ಮೈಸೂರು ಚಾಮುಂಡೇಶ್ವರಿ ದೇವಿ ಈಗ ಮದ್ದೂರು ಘಟನೆ ಮೂಲಕ ದೇವರಿಗೆ ಅವಮಾನ ಮಾಡಿದ್ದಾರೆ, ಇದಕ್ಕೆ ಕ್ಷಮೆಯಾಚಿಸಬೇಕು ಎಂದರು.

ಮದ್ದೂರಿನಲ್ಲಿ ಗಣೇಶ ಮೆರವಣಿಗೆಯಲ್ಲಿ ಕಲ್ಲು ತೂರಿಸಿದ ಘಟನೆ ದೊಡ್ಡ ಪಿತೂರಿ. ಕಾಂಗ್ರೆಸ್ ತನ್ನ ನೀತಿಗಳು ಮತ್ತು ಹೇಳಿಕೆಗಳ ಮೂಲಕ ಇಂತಹ ಕೃತ್ಯಗಳನ್ನು ಪರೋಕ್ಷವಾಗಿ ಬೆಂಬಲಿಸುತ್ತಿದೆ ಎಂದು ಅವರು ಆರೋಪಿಸಿದರು.

ಇದು ಒಂದು ಘೋರ ಕೃತ್ಯ. ಜನರು ಇದು ಕರ್ನಾಟಕವೇ ಅಥವಾ ಪಾಕಿಸ್ತಾನವೇ ಎಂಬ ಗೊಂದಲದ ಸ್ಥಿತಿಯಲ್ಲಿದ್ದಾರೆ. ಇದು ಕಳೆದ ಎರಡು ವರ್ಷಗಳಿಂದ ನಡೆಯುತ್ತಿದೆ. ಧರ್ಮಸ್ಥಳ ಮತ್ತು ಚಾಮುಂಡೇಶ್ವರಿ ದೇವಸ್ಥಾನದ ನಂತರ ಈಗ ಮದ್ದೂರು ಪಟ್ಟಣ ಸರದಿ ಎಂದು ಅಶೋಕ್ ಆರೋಪಿಸಿದರು.

ಗಣೇಶ ಮೆರವಣಿಗೆ ಸಾಗುವ ರಸ್ತೆ ಸಾರ್ವಜನಿಕರದ್ದು, ಇದು ಕರ್ನಾಟಕದ ಜನರಿಗೆ ಸೇರಿದ ರಸ್ತೆ, ಇದು ತೆರಿಗೆದಾರರ ರಸ್ತೆ, ಘರ್ಷಣೆಯನ್ನು ತಡೆಗಟ್ಟಲು ಸರ್ಕಾರ ಮುಂಜಾಗ್ರತಾ ಕ್ರಮ ಕೈಗೊಳ್ಳಬೇಕಿತ್ತು. ಇಲ್ಲಿ ಪೊಲೀಸರನ್ನು ದೂಷಿಸುವ ಅಗತ್ಯವಿಲ್ಲ ಎಂದರು.

# ಮದ್ದೂರು ಪ್ರಕ್ಷುಬ್ಧ, ನಿಷೇಧಾಜ್ಞೆ

**ಮಂಡ್ಯ:** ಮದ್ದೂರಿನಲ್ಲಿ ನಿನ್ನೆ ರಾತ್ರಿ ನಡೆದ ಗಣಪತಿ ವಿಸರ್ಜನಾ ಮೆರವಣಿಗೆ ಮೇಲೆ ಕಲ್ಲು ತೂರಾಟ ನಡೆಸಿದ್ದ ಕಿಡಿಗೇಡಿಗಳನ್ನು ಬಂಧಿಸುವಂತೆ ಆಗ್ರಹಿಸಿ ಇಂದು ಬೆಳಗ್ಗೆ ಮಹಿಳೆಯರು–ಮಕ್ಕಳು ಸೇರಿದಂತೆ ನೂರಾರು ಮಂದಿ ಪ್ರತಿಭಟನೆ ನಡೆಸಿದ್ದು, ಪ್ರತಿಭಟನಾಕಾರರನ್ನು ಚದುರಿಸಲು ಪೊಲೀಸರು ಲಾಠಿ ಪ್ರಹಾರ ನಡೆಸಿದ್ದಾರೆ. ಇದರಿಂದ ಮದ್ದೂರಿನಲ್ಲಿ ಉದ್ವಿಗ್ನ ಪರಿಸ್ಥಿತಿ ರೂಪುಗೊಂಡಿದ್ದು, ಅಂಗಡಿ ಮುಂಗಟ್ಟುಗಳು ಬಂದ್ ಆಗಿ, ಒಂದು ರೀತಿ ಅಘೋಷಿತ ಬಂದ್ ವಾತಾವರಣ ಇದ್ದು, ಪರಿಸ್ಥಿತಿಯನ್ನು ನಿಯಂತ್ರಿಸಲು ಪೊಲೀಸರು ನಿಷೇಧಾಜ್ಞೆ ಜಾರಿ ಮಾಡದ್ದಾರೆ.

ನಿನ್ನೆ ಗಣೇಶ ಮೂರ್ತಿ ಮೇಲೆ ಕಲ್ಲೆಸೆದ ಅನ್ಯ ಕೋಮಿನವರನ್ನು ಬಂಧಿಸುವಂತೆ ಆಗ್ರಹಿಸಿ ಹಿಂದೂ ಕಾರ್ಯಕರ್ತರು ಇಂದು ಬೆಳಗ್ಗೆ ಮದ್ದೂರು ಪಟ್ಟಣದ ಮಸೀದಿ ಮುಂದೆ ಪ್ರತಿಭಟನೆ ನಡೆಸಿ ಕರ್ಪೂರ ಹಚ್ಚಿ, ಹಸಿರು ಬಾವುಟಗಳನ್ನು ಕಿತ್ತುಹಾಕಿ ಆಕ್ರೋಶ ವ್ಯಕ್ತಪಡಿಸಿದರು. ಹಾಗೆಯೇ ಗಣೇಶಮೂರ್ತಿ ಮೇಲೆ ಕಲ್ಲು ಎಸೆದ ಕಿಡಿಗೇಡಿಗಳ ವಿರುದ್ಧ ಕ್ರಮ ಕೈಗೊಳ್ಳುವಂತೆ ಪಟ್ಟು ಹಿಡಿದು ಘೋಷಣೆಗಳನ್ನು ಕೂಗಿದರು. ಪರಿಸ್ಥಿತಿ ನಿಯಂತ್ರಣ ತಪ್ಪುತ್ತಿರುವುದನ್ನು ಅರಿತ ಪೊಲೀಸರು ತಕ್ಷಣ ಲಾಠಿಪ್ರಹಾರ ನಡೆಸಿ ಪ್ರತಿಭಟನಾಕಾರರನ್ನು ಚದುರಿಸಿದರು. ಈ ಪ್ರತಿಭಟನೆಯಲ್ಲ ಮಹಿಳೆಯರು ಮಕ್ಕಳು ಇದ್ದು, ಅವರಿಗೂ ಸಹ ಪೊಲೀಸರ ಲಾಠಿ ಬೀಸಿಯಿಂದ ಮುಟ್ಟಿಸಿದರು. ಸದ್ಯ ಮದ್ದೂರಿನಲ್ಲಿ ನಿಷೇಧಾಜ್ಞೆ ಜಾರಿ ಮಾಡಿ ಹೆಚ್ಚಿನ




ಪೊಲೀಸ್ ಬಂದೋಬಸ್ತ್ ಜಾರಿ ಮಾಡಿ ಪರಿಸ್ಥಿತಿ ಪ್ರಕ್ಷುಬ್ಧಗೊಂಡಿದೆ. ಹೊರಗಡೆಯಿಂದ ಹೆಚ್ಚಿನ ಪೊಲೀಸ್ ಪಡೆಯನ್ನು ಕರೆಸಿ ಬಂದೋಬಸ್ತ್ ವ್ಯವಸ್ಥೆಯನ್ನು ಮಾಡಲಾಗಿದೆ.

ಮದ್ದೂರು ಪಟ್ಟಣದ ರಾಮ್‌ರಹಿಂ ನಗರ–ಕ್ಕೆ ಹೊಂದಿಕೊಂಡಿರುವ ಚನ್ನೇಗೌಡ ಬಪಡಾವಣೆಯಲ್ಲಿ ಗಣೇಶ ಮೂರ್ತಿಯನ್ನು ಪ್ರತಿಷ್ಠಾಪಿಸಲಾಗಿತ್ತು. ನಿನ್ನೆ ರಾತ್ರಿ ಗಣೇಶ ಮೂರ್ತಿಯ ವಿಸರ್ಜನಾ ಮೆರವಣಿಗೆ ವೇಳೆ ಅನ್ಯಕೋಮಿನ ಯುವಕರು ಕಲ್ಲು ತೂರಾಟ ನಡೆಸಿದ್ದರು. ಆಗ ಪೊಲೀಸರು ಲಾಠಿ ಪ್ರಹಾರ ನಡೆಸಿ ಎಲ್ಲರನ್ನು ಚದುರಿಸಿ ಪರಿಸ್ಥಿತಿಯನ್ನು ನಿಯಂತ್ರಿಸಿ ಗಣೇಶಮೂರ್ತಿ ವಿಸರ್ಜನೆಗೆ ಅವಕಾಶ ಮಾಡಿಕೊಟ್ಟಿದ್ದರು.

ಇಂದು ಬೆಳಗ್ಗೆ ಮಹಿಳೆಯರು ಮಕ್ಕಳು ಸೇರಿದಂತೆ ನೂರಾರು ಮಂದಿ ಹಿಂದೂಪರ ಕಾರ್ಯಕರ್ತರು ಗಣೇಶ ಮೂರ್ತಿ ಮೇಲೆ ಕಲ್ಲು ತೂರಿದ್ದವರನ್ನು ಬಂಧಿಸುವಂತೆ ಆಗ್ರಹಿಸಿ ಪ್ರತಿಭಟನಾ ಮೆರವಣಿಗೆ ನಡೆಸಿದ್ದರು. ಮೆರವಣಿಗೆ ಮದ್ದೂರು ಪಟ್ಟಣದ ಜಾಮೀಯಾ ಮಸೀದಿ ಬಳಿ ಬರುತ್ತಿದ್ದಂತೆಯೇ ಪ್ರತಿಭಟನಾನಿರತರು ರಸ್ತೆಯಲ್ಲೇ ಕರ್ಪೂರ ಹಚ್ಚಿ ಗಣೇಶ ಮೂರ್ತಿ ಮೇಲೆ ಕಲ್ಲು ತೂರಿದನ್ನು ಪ್ರತಿಭಟಿಸಿ ಘೋಷಣೆಗಳನ್ನು ಕೂಗಿ ಆಕ್ರೋಶ ವ್ಯಕ್ತಪಡಿಸಿ ಮಸೀದಿ ಮುಂದೆ ಡಿಜೆ ಹಾಕಿ ನೃತ್ಯ ಮಾಡಲು ಆರಂಭಿಸಿದರು.

ಪೊಲೀಸರು ಮಸೀದಿ ಬಿಟ್ಟು ಮುಂದೆ ಹೋಗುವಂತೆ ಹೇಳಿದರೂ ಪ್ರತಿಭಟನಾಕಾರರು ಕಿಡಿಗೇಡಿಗಳನ್ನು ಬಂಧಿಸುವವರೆಗೂ ಜಾಗ ಬಿಟ್ಟು ಕದಲುವುದಿಲ್ಲ ಎಂದು ಪಟ್ಟು ಹಿಡಿದರು. ಇದರಿಂದ ಘರ್ಷಣೆಯ ವಾತಾವಣ ರೂಪುಗೊಂಡಿತು. ಪೊಲೀಸರು ತಕ್ಷಣ ಲಾಠಿ ಬೀಸಿ ಪ್ರತಿಭಟನಾಕಾರರನ್ನು ಚದುರಿಸಿದರು.

ಇದರಿಂದ ಮದ್ದೂರಿನಲ್ಲಿ ಉದ್ವಿಗ್ನ ಪರಿಸ್ಥಿತಿ ಉಂಟಾಗಿದ್ದು, ನಿಷೇಧಾಜ್ಞೆಯನ್ನು ಜಾರಿ ಮಾಡಲಾಗಿದೆ. ಪೊಲೀಸ್ ಬಂದೋಬಸ್ತ್‌ನ್ನು ಬಿಗಿಗೊಳಿಸಿ ಹೆಚ್ಚುವರಿ ಪಡೆಗಳನ್ನು ಕರೆಸಿ ಪಟ್ಟಣದ ಸೂಕ್ಷ್ಮ ಮತ್ತು ಅತಿಸೂಕ್ಷ್ಮ ಪ್ರದೇಶದ ನಿಯೋಜಿಸಿ ಯಾವುದೇ ಅಹಿತಕರ ಘಟನೆ ನಡೆಯದಂತೆ ಪೊಲೀಸರು ಮುಂಜಾಗ್ರತೆ ಕ್ರಮ ಕೈಗೊಂಡಿದ್ದು ನಾಳೆ ಬೆಳಗ್ಗೆವರೆಗೂ ನಿಷೇಧಾಜ್ಞೆಯನ್ನು ಜಾರಿ ಮಾಡಲಾಗಿದೆ.

ಮದ್ದೂರಿನಲ್ಲಿ ಅಂಗಡಿ ಮುಂಗಟ್ಟುಗಳು ಬಂದ್ ಆ ಅಘೋಷಿತ ಬಂದ್ ವಾತಾವರಣ ರೂಪುಗೊಂಡಿದೆ. ಪೊಲೀಸರ ಗಸ್ತು ಹೆಚ್ಚಿಸಲಾಗಿದೆ. ನಿನ್ನೆ ರಾತ್ರಿ ಮೆರವಣಿಗೆ ವೇಳೆ ಕಲ್ಲು ತೂರಾಟದಿಂದ ಗಾಯಗೊಂಡಿರುವ ನಾಲ್ವರು ಹೋಂಗಾರ್ಡ್‌ಗಳು ಸೇರಿದಂತೆ 8 ಮಂದಿಯನ್ನು ಸ್ಥಳೀಯ ಆಸ್ಪತ್ರೆಗೆ ದಾಖಲಿಸಲಾಗಿದ್ದು ಎಲ್ಲರೂ ಪ್ರಾಣಾಪಾಯದಿಂದ ಪಾರಾಗಿದ್ದಾರೆ ಎನ್ನಲಾಗಿದೆ.

**ನಿನ್ನೆ ಘಟನೆ ವಿವರ:** ಚನ್ನೇಗೌಡ ಬಡಾವಣೆಯಲ್ಲಿ ರಾತ್ರಿ ಬೀದಿಯಲ್ಲಿ ಮೆರವಣಿಗೆ ಮೂಲಕ ಬಂದ ಗಣಪ ಮಸೀದಿ ಮುಂದೆ ಹಾದು ಹೋಗುತ್ತಿದ್ದಾಗ ಸ್ಥಳದಲ್ಲಿ ದಿಢೀರ್ ಲೈಟ್ ಆಫ್ ಮಾಡಿ ಮಸೀದಿಯಿಂದ ಕಲ್ಲು ತೂರಾಟ ನಡೆಸಿದ್ದಾರೆ. ಅಲ್ಲದೇ ದೊಣ್ಣೆಗಳನ್ನು ಕೂಡ ಎಸೆದಿದ್ದಾರೆ ಎಂದು ಸ್ಥಳದಲ್ಲಿದ್ದವರು ದೂರಿದ್ದಾರೆ. ಮಸೀದಿ ಬಳಿ ಬಂದಾಗ ಯಾವುದೇ ಘೋಷಣೆ ಕೂಗಬಾರದು. ಮೈಕ್ ಹಾಕಬಾರದು ಎಂದು ಮೊದಲೇ ಎಚ್ಚರಿಕೆ ನೀಡಲಾಗಿತ್ತು. ಅದರಂತೆ ಮೈಕ್ ಆಫ್ ಮಾಡಿ ಮೆರವಣಿಗೆ ಮಾಡಲಾಗುತ್ತಿತ್ತು. ಇದಾದ ಬಳಿಕ ಏಕಾಏಕಿ ಲೈಟ್ ಆಫ್ ಮಾಡಿ ಗಣಪತಿ ಮೆರವಣಿಗೆ ಮೇಲೆ ಮಸೀದಿಯಿಂದ ಕಲ್ಲು ತೂರಾಟ ಮಾಡಲಾಗಿದೆ ಎಂದು ಹಿಂದೂಗಳು ಆರೋಪಿಸಿದ್ದಾರೆ.

## ಯುವಕರು ಮದ್ಯ ಮತ್ತು ಮಾದಕ ವಸ್ತುಗಳಿಂದ ದೂರವಿರಿ

### ವ್ಯಸನ ಮುಕ್ತ ಕರ್ನಾಟಕ ಕಾರ್ಯಾಗಾರದಲ್ಲಿ ಸಿಇಓ ಗಿತ್ತೆ ಮಾಧವ ವಿಠ್ಠಲ ರಾವ್ ಹೇಳಿಕೆ

**ದಾವಣಗೆರೆ :** ಯುವಕರು ಈ ದೇಶದ ಶಕ್ತಿ, ಇತ್ತೀಚಿನ ದಿನಗಳಲ್ಲಿ ಯುವಕರು ಮದ್ಯ ಹಾಗೂ ಮಾದಕ ವಸ್ತುಗಳಿಗೆ ಬಲಿಯಾಗುತ್ತಿರುವುದು ಮಾನವ ಸಂಪನ್ಮೂಲ ಅಭಿವೃದ್ಧಿಗೆ ಕುಂದುಂಟಾಗುತ್ತಿದೆ. ಈ ನಿಟ್ಟಿನಲ್ಲಿ ಯುವಕರು ಇಂತಹ ಮದ್ಯ, ಮಾದಕ ವಸ್ತುಗಳ ವ್ಯಸನದಿಂದ ದೂರವಿರಬೇಕು ಎಂದು ಜಿಲ್ಲಾ ಪಂಚಾಯತ್ ಮುಖ್ಯಕಾರ್ಯನಿರ್ವಹಣಾಧಿಕಾರಿ ಗಿತ್ತೆ ಮಾಧವ ವಿಠ್ಠಲರಾವ್ ತಿಳಿಸಿದರು.

ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಸೋಮವಾರ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ, ಜೀವನೋಪಯ ಇಲಾಖೆ ಹಾಗೂ ರಾಷ್ಟ್ರೀಯ ಜೀವನೋಪಾಯ ಇಲಾಖೆ ಸಹಯೋಗದಲ್ಲಿ ಏರ್ಪಡಿಸಲಾದ ಮಾದಕ ಮುಕ್ತ ಕರ್ನಾಟಕ ಕಾರ್ಯಗಾರ ಉದ್ಘಾಟಿಸಿ ಅವರು ಮಾತನಾಡಿದರು.

ಯುವಕರು ಪ್ರಾರಂಭದಲ್ಲಿ ಕುತೂಹಲಕ್ಕಾಗಿ ಸೇವಿಸುವ ಮದ್ಯ ಮತ್ತು ಮಾದಕ ವಸ್ತುಗಳು, ತಂಬಾಕು ಮುಂತಾದವುಗಳಿಗೆ ಬಲಿಯಾಗಿ ಕ್ರಮೇಣ ಅವುಗಳಿಗೆ ದಾಸರಾಗಿ ಭವಿಷ್ಯದ ಜೀವನವನ್ನೇ ನಾಶಪಡಿಸಿಕೊಳ್ಳುತ್ತಾರೆ. ಅಷ್ಟೇ ಅಲ್ಲದೇ ಇದರಿಂದ ದೈಹಿಕ ಮತ್ತು ಮಾನಸಿಕವಾಗಿ ದುಷ್ಪರಿಣಾಮ ಬೀರುವುದರ ಜೊತೆಗೆ ಮಾರಣಾಂತಿಕ ಖಾಯಿಲೆಗೆ ತುತ್ತಾಗುವ ಸಂಭವ ಹೆಚ್ಚಿದ್ದು ಇದ–




ರಿಂದ ಕುಟುಂಬಗಳು ಆರ್ಥಿಕವಾಗಿ ಸಂಕಷ್ಟ ಎದುರಿಸಿ ಬೀದಿಗೆ ಬರುತ್ತವೆ.

ಸರ್ಕಾರ ಮಾದಕ ವಸ್ತುಗಳ ಮಾರಾಟ, ಸಾಗಣೆ ನಿಯಂತ್ರಿಸಲು ನಾರ್ಕೊ, ಕೋಟ್ಪಾ, ಎನ್‌ಡಿಪಿಎಸ್ ಕಾಯ್ದೆ ಹೀಗೆ ಹಲವಾರು ಕಾಯ್ದೆಗಳನ್ನು ರೂಪಿಸಿದೆ. ಜವಾಬ್ದಾರಿಯುತ ನಾಗರೀಕರಾಗಿ ನಾವೆಲ್ಲರೂ ನೆರೆ ಹೊರೆಯವರಿಗೆ, ಮಕ್ಕಳಿಗೆ ಈ ಬಗ್ಗೆ ಅರಿವು ಮೂಡಿಸಬೇಕಿದೆ. ಸಾರ್ವಜನಿಕ ಸ್ಥಳಗಳಲ್ಲಿ ಮದ್ಯ, ಮಾದಕ ವಸ್ತುಗಳ ಬಳಕೆ, ಮಾರಾಟ ಮಾಡುವುದು ಕಂಡು ಬಂದಲ್ಲಿ ಸಂಬಂಧಿಸಿದ ಇಲಾಖೆ ಅಥವಾ ಪೊಲೀಸ್ ಇಲಾಖೆಗೆ ಮಾಹಿತಿ ನೀಡಿ, ಇದರ ನಿರ್ಮೂಲನೆಗೆ ಸಹಕರಿಸಬೇಕು. ಕೇವಲ ಸಂಬಂಧಪಟ್ಟ ಇಲಾಖೆಯಷ್ಟೇ ಶ್ರಮಿಸಿದರೆ ಸಾಲದು. ಇದು ಪ್ರತಿಯೊಬ್ಬ ನಾಗರೀಕನ ಜವಾಬ್ದಾರಿಯೂ ಕೂಡ. ಶಾಲಾ ಕಾಲೇಜ್, ವಿದ್ಯಾರ್ಥಿನಿಲಯ, ವೈದ್ಯಕೀಯ ಕಾಲೇಜ್‌ಗಳಲ್ಲಿ ಈ ಬಗ್ಗೆ ಹೆಚ್ಚಿನ ಜಾಗೃತಿ ಮೂಡಿಸಿ ಮಾದಕ ಮುಕ್ತ ಕರ್ನಾಟಕ ಜಿಲ್ಲೆಗೆ ಶ್ರಮಿಸಬೇಕು ಎಂದರು.

ಜಿಲ್ಲಾ ಪಂಚಾಯತ್ ಯೋಜನಾ ನಿರ್ದೇಶಕಿ ರೇಷ್ಮಾ ಕೌಸರ್ ಮಾತನಾಡಿ, ಕೇವಲ ಮದ್ಯ, ಮಾದಕ ವ್ಯಸನಗಳಷ್ಟೇ ಅಲ್ಲದೇ ಇಂದು ಅತಿಯಾದ ಮೊಬೈಲ್ ಬಳಕೆಯೂ ಮಾನಸಿಕ ಆರೋಗ್ಯ–ಕ್ಕೆ ಮಾರಕವಾಗಿದೆ. ಇನ್ನೂ ಕೆಲಸದ ಒತ್ತಡ ಎಂಬ ಕಾರಣಗಳಿಗೆ ದುಶ್ಚಟಗಳಿಗೆ ದಾಸರಾಗುತ್ತಿರುವುದು ಶೋಚನೀಯ. ಇಂತಹ ದುಶ್ಚಟಗಳಿಗೆ ಬಲಿಯಾದಲ್ಲಿ ದೇಶ ಅಭಿವೃದ್ಧಿ ಕಷ್ಟ ಸಾಧ್ಯ. ದುಶ್ಚಟಗಳಿಂದ ಒತ್ತಡ, ಸಮಸ್ಯೆಗಳು ನಿವಾರಣೆಯಾಗುವುದಿಲ್ಲ. ಇದನ್ನರಿತು ಸುಧಾರಿತ ಮತ್ತು ಉತ್ತಮ ಸಮಾಜ ನಿರ್ಮಾಕ್ಕೆ ಪ್ರತಿಯೊಬ್ಬರು ಕೈಜೋಡಿಸಬೇಕು ಎಂದರು. ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಜಿಲ್ಲಾ ಸರ್ವೇಕ್ಷಣಾಧಿಕಾರಿ ಡಾ.ಜಿ.ಡಿ.ರಾಘವನ್ ಹಾಗೂ ತಪೋವನ ಆಯುರ್ವೇದಿಕ್ ಪ್ರಾಧ್ಯಾಪಕಿ ಡಾ.ಶಿಲ್ಪಾ ಹುಲಿಕಟ್ಟೆ ಮದ್ಯ ಮತ್ತು ಮಾದಕ ವಸ್ತುಗಳಿಂದ ಉಂಟಾಗುವ ದುಷ್ಪರಿಣಾಮಗಳ ಕುರಿತು ಉಪನ್ಯಾಸ ನೀಡಿ–ದರು. ಇದೇ ಸಂದರ್ಭದಲ್ಲಿ ಜಿಲ್ಲಾ ಪಂಚಾಯತ್ ಸಿಇಓ ಗಿತ್ತೆ ಮಾಧವ ವಿಠಲ ರಾವ್ ಅವರು ಮದ್ಯ ಮತ್ತು ಮಾದಕ ವಸ್ತುಗಳ ವ್ಯಸನ ಮುಕ್ತತೆ ಕುರಿತ ಪ್ರತಿಜ್ಞಾ ವಿಧಿ ಭೋಧಿಸಿದರು.

ಕಾರ್ಯಗಾರದಲ್ಲಿ ಡಿಡಿಪಿಐ ಕೊಟ್ರೇಶ್, ಅಬಕಾರಿ ಉಪಾಯುಕ್ತ ಸಿ.ಎನ್.ಜುಸ್ಕಿ ಸೇರಿದಂತೆ ವಿವಿಧ ಇಲಾಖೆಯ ಜಿಲ್ಲಾ ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

## ಪ್ರತಿ ಗ್ರಾ.ಪಂನಲ್ಲಿ ಕ್ರೀಡಾಕೂಟಕ್ಕೆ ಶೇ 2 ರಷ್ಟು ಮೀಸಲಿಡಲು ಅವಕಾಶ ಇದೆ: ಅರುಣ್‌ಕುಮಾರ್

**ಹೊನ್ನಾಳಿ :** ಪ್ರತಿ ಗ್ರಾ.ಪಂನಲ್ಲಿ ಕ್ರೀಡಾಕೂಟಕ್ಕೆ ಶೇ 2 ರಷ್ಟು ಮೀಸಲಿಡಲು ಅವಕಾಶ ಇದೆ, ಈ ಬಗ್ಗೆ ಸರಕಾರದ ಸುತ್ತೋಲೆಯೂ ಇದೆ. ಈಗ ಮುಗಿಯಿತು ಮುಂದಿನ ವರ್ಷ ಬಜೆಟ್ ತಯಾರಿಕೆಯಲ್ಲಿ ಶೇ 2 ರಷ್ಟು ಕ್ರೀಡೆಗೂ ಮಿಸಲಿರಸಲಿಕ್ಕೆ ಆಯಾಯ ಶಾಲೆಯ ದೈಹಿಕ ಶಿಕ್ಷಕರುಗಳು ಗ್ರಾ.ಪಂ.ಗೆ ಮನವಿ ನೀಡಿ ಎಂದು ರಾಜ್ಯ ಸರಕಾರಿ ನೌಕರರ ಸಂಘದ ತಾಲೂಕು ಅಧ್ಯಕ್ಷ ಕೆ.ಅರುಣ್‌ಕುಮಾರ್ ತಿಳಿಸಿದರು.




ಹೊನ್ನಾಳಿ ತಾಲೂಕು ಕ್ರೀಡಾಂಗಣದಲ್ಲಿ ಸೋಮವಾರ ಪ್ರೌಢಶಾಲೆ ವಿಧ್ಯಾರ್ಥಿಗಳಿಗೆ ಏರ್ಪಡಿಸಿದ್ದ ತಾಲೂಕು ಮಟ್ಟದ ಕ್ರೀಡಾಕೂಟವನ್ನು ಉದ್ಘಾಟಿಸಿ ಅವರು ಮಾತನಾಡಿದರು. ಇದುವರೆವಿಗೂ ಯಾವುದೇ ದೈಹಿಕ ಶಿಕ್ಷಕರಾಗಲಿ ಅಥವಾ ಮುಖ್ಯೋಪಾಧ್ಯಾಯರಾಗಲಿ ಯಾರೂ ಈ ಬಗ್ಗೆ ಗ್ರಾ.ಪಂಗಳಲ್ಲಿ ವಿಚಾರಿಸಿಲ್ಲ ಹಾಗಾಗಿ ನಿಮಗೆ ಅನುದಾನ ಸಿಕ್ಕಿಲ್ಲ,ಮುಂದಿನ ವರ್ಷದಿಂದ ಬಜೆಟ್‌ನಲ್ಲಿ ಸೇರ್ಪಡೆ ಮಾಡಿದರೆ ಅನುದಾನ ಸಿಗುತ್ತೆ ಎಂದರು.

ವಿಧ್ಯಾರ್ಥಿಗಳು ಕೇವಲ ಪಾಠ ಪ್ರವಚನಕ್ಕೆ ಸೀಮಿತವಾಗದೆ ಕ್ರೀಡೆಯಲ್ಲೂ ಆಸಕ್ತಿ ಬೆಳಸಿಕೊಂಡರೆ ನೀವು ಅಂತರಾಷ್ಟ್ರೀಯ ಮಟ್ಟದ ಕ್ರೀಡೆಯಲ್ಲೂ ಭಾಗವಹಿಸಿಗೆದ್ದು ತಮ್ಮ ಶಾಲೆಗೆ,ಪಾಲಕರಿಗೆ ಹಾಗೂ ತಮ್ಮ ತಾಲೂಕಿಗೆ ಕೀರ್ತಿ ತರಬಹುದು ಎಂದರು. ಕೇವಲ ಅಂಕಗಳಿಕೆಯಲ್ಲಿ ಮಾತ್ರ ತೊಡಗಿಸಿ ಕೊಂಡರೆ ಸಾಲದು ಅದಕ್ಕೆ ತಕ್ಕಂತೆ ಕ್ರೀಡೆಯಲ್ಲೂ ಭಾಗವಹಿಸಿದರೆ ನಿಮ್ಮ ದೇಹ ಸದೃಡ ಹಾಗೂ ಆರೋಗ್ಯದಿಂದ ಇರುಲಿದೆ ನಿತ್ಯ ಯೋಗ,ವ್ಯಾಯಾಮ ಮಾಡಿದರೆ ಏಕಾಗ್ರತೆಯನ್ನು ಬೆಳಸಿಕೊಳ್ಳಬಹುದು, ಇದರಿಂದ ಮನಸ್ಸಿನ ಚಂಚಲತೆ ದೂರ ಆಗುತ್ತದೆ ಎಂದರು.ಪುರಸಭೆ ಅಧ್ಯಕ್ಷ ಮೈಲಪ್ಪ ಮಾತನಾಡಿ, ಕ್ರೀಡೆ ದೈಹಿಕ ಸಮಾರ್ಥ್ಯದ ಜತೆಗೆ ಮಾನಸಿಕವಾಗಿ ಸದೃಡತೆ ಮಾಡುತ್ತದೆ,ಅದಕ್ಕಾಗಿ ಕ್ರೀಡೆಯಲ್ಲಿ ಹೆಚ್ಚು ಸಾಧನೆ ಮಾಡಲು ಪ್ರತಿನಿತ್ಯ ತರಬೇತಿಯಲ್ಲಿತೊಡಗಿಸಿಕೊಳ್ಳಿ ಎಂದು ಕ್ರೀಡಾಪಟುಗಳಿಗೆ ಕಿವಿಮಾತು ಹೇಳಿದರು. ಕ್ರೀಡೆಗೆ ಅನುದಾನ ನೀಡುವ ಬಗ್ಗೆ ನಮ್ಮ ಮುಖ್ಯಾಧಿಕಾರಿಗಳ ಜತೆ ಚರ್ಚಿಸುತ್ತೇನೆ,ಅನುದಾನ ನೀಡಲು ಬರುತ್ತದೆ ಎಂದಾದರೆ ನಾನೂ ಕೂಡ ಮುಂದಿನ ಬಜೆಟ್‌ನಲ್ಲಿ ಕ್ರೀಡೆಗ ಶೇ 2 ರಷ್ಟು ಅನುದಾನ ನೀಡಲು ಸೇರಿಸುತ್ತೇನೆ ಎಂದರು.

### ದಶಲಕ್ಷಣ ಮಹಾಪರ್ವ–ವಿಶೇಷ ಪೂಜಾ ಕಾರ್ಯಕ್ರಮ

## ಶ್ರೀ ಅನಂತನಾಥ ಸ್ವಾಮಿ ಜಿನಬಿಂಬ ಮೆರವಣಿಗೆ

**ಹಾವೇರಿ:** ಹಾವೇರಿ ನಗರದ ಭಗವಾನ್ ನೇಮಿನಾಥ ದಿಗಂಬರ ಜೈನ ಮಂದಿರದಲ್ಲಿ ದಶಲಕ್ಷಣ ಮಹಾಪರ್ವದ ಕೊನೆಯ ದಿನ ರವಿವಾರ ಬೆಳಿಗ್ಗೆಯಿಂದ ವಿಶೇಷ ಪೂಜಾ ಕಾರ್ಯಕ್ರಮಗಳು ಜರುಗಿದವು. ನಂತರ ಸಾರೋಟಿನಲ್ಲಿ ಶ್ರೀ ಭಗವಾನ್ ಅನಂತನಾಥ ಸ್ವಾಮಿ ಜಿನಬಿಂಬ ಮೆರವಣಿಗೆ ನಗರದ ಪ್ರಮುಖ ಬೀದಿಗಳಲ್ಲಿ ಅತ್ಯಂತ ಸಡಗರ ಹಾಗೂ ಸಂಭ್ರಮದಿಂದ ಜರುಗಿ–ತು.

ಮೆರವಣಿಗೆಯಲ್ಲಿ ಭಾಗವಹಿಸಿದ ಸಮಸ್ತ ಶ್ರಾವಕರು ಹಾಗೂ ಶ್ರಾವಕಿಯರು ಶ್ವೇತವರ್ಣದ ವಸ್ತ್ರಧರಿಸಿದ್ದರು ಹಾಗೂ ಭಗವಾನಗರ ಜಯಘೋಷಣೆ ಮಾಡುತ್ತ ಸಾಗಿದರು.

ಮುನಿಶ್ರೀ 108 ವಿಧಿತಸಾಗರಜಿ ಮಹಾರಾಜರ ಸಾನಿಧ್ಯದಲ್ಲಿ ಹಾಗೂ ಅವರ ಮಾರ್ಗದರ್ಶನದಲ್ಲಿ ದಶಲಕ್ಷಣ ಮಹಾಪರ್ವವನ್ನು ಅರ್ಥಪೂರ್ಣವಾಗಿ ಆಚರಿಸಲಾಯಿತು. ಪ್ರತಿದಿನ ಬೆಳಿಗ್ಗೆ 6 ಗಂಟೆಯಿಂದ ಪೂಜಾ ಕಾರ್ಯಕ್ರಮಗಳು, ಮುನಿಗಳ ಪ್ರವಚನ, ಉಪನ್ಯಾಸ ಸೇರಿದಂತೆ ಸಂಜೆಯವರೆಗೆ





ಕಾರ್ಯಕ್ರಮಗಳು ನಿರಂತರವಾಗಿ ಜರುಗಿದವು.

**ಸಿದ್ಧಚಕ್ರ ಆರಾಧನೆ:** ಮುನಿಶ್ರೀ 108 ವಿಧಿತಸಾಗರಜಿ ಮಹಾರಾಜರ ಸಾನಿಧ್ಯದಲ್ಲಿ ಮಧ್ಯಾಹ್ನ ನಡೆದ ಧರ್ಮ ಸಭೆಯಲ್ಲಿ, ದಿನಾಂಕ 29–10–2025 ರಿಂದ ದಿ.06–11–2025ರವರೆಗೆ ಹಾವೇರಿ ನಗರದಲ್ಲಿ ಜರುಗುವ ಸಿದ್ಧಚಕ್ರ ಆರಾಧನೆ ಮಹೋತ್ಸವದಲ್ಲಿ ಪಾಲ್ಗೊಳ್ಳಲು ಇಂದ್ರ–ಇದ್ರಾಣಿ, ಕುಬೇರ ಸೇರಿದಂತೆ ವಿವಿಧ ಪದವಿಗಳ ಹರಾಜು ಕಾರ್ಯಕ್ರಮ ಜರುಗಿತು.

**ಪ್ರತಿಭಾ ಪುರಸ್ಕಾರ:** ಇದೇ ಸಂದರ್ಭದಲ್ಲಿ ಹಾವೇರಿಯ ಶ್ರೀಮತಿ ವೀಣಾ ಚಂದ್ರನಾಥ ಕಳಸೂರ ಚಾರಿಟೇಬಲ್ ಟ್ರಸ್ಟ್‌ನಿಂದ 2024–25ನೇ ಸಾಲಿನಲ್ಲಿ ಎಸ್.ಎಸ್.ಎಲ್.ಸಿ. ಹಾಗೂ ಪಿಯುಸಿ ವಾರ್ಷಿಕ ಪರೀಕ್ಷೆಯಲ್ಲಿ ಶೇ.80ಕ್ಕಿಂತ ಅಧಿಕ ಅಂಕಪ ಪಡೆದ ಜಿಲ್ಲೆಯ 40ಕ್ಕೂ ಅಧಿಕ ವಿದ್ಯಾರ್ಥಿಗಳನ್ನು ಸನ್ಮಾನಿಸಿ, ನಗದು ಬಹುಮಾನ ನೀಡಲಾಯಿತು.

ಈ ಎಲ್ಲ ಕಾರ್ಯಕ್ರಮಗಳು ಮುನಿಶ್ರೀ 108 ವಿಧಿತಸಾಗರಜಿ ಮಹಾರಾಜರ ಸಾನಿಧ್ಯದಲ್ಲಿ ಜರುಗಿದವು. ಪ್ರತಿಷ್ಠಾಚಾರ್ಯರು, ಪ್ರತಿಮಾಧಾರಿಗಳು, ಸಮಾಜದ ಮುಖಂಡರು ಉಪಸ್ಥಿತರಿದ್ದರು.

## ಹಿಂದೂಗಳ ಮೇಲೆ ಪೊಲೀಸರ ಅಟ್ಟಹಾಸ

### ಅಶ್ವತ್ಥ ನಾರಾಯಣ ಆಕ್ರೋಶ

**ಬೆಂಗಳೂರು,ಸೆ.8–** ಮಂಡ್ಯ ಜಿಲ್ಲೆ ಮದ್ದೂರು ಪಟ್ಟಣದಲ್ಲಿ ಗಣಪತಿ ವಿಸರ್ಜನೆ ವೇಳೆ ಅನ್ಯಕೋಮಿನವರು ಕಲ್ಲು ಎಸೆದು ಹಲ್ಲೆ ನಡೆಸಿದ್ದರೂ ಪೊಲೀಸರು ಮಾತ್ರ ಹಿಂದೂಗಳ ಮೇಲೆ ಲಾಠಿಚಾರ್ಜ್ ನಡೆಸಿ ಪೌರುಷ ತೋರಿದ್ದಾರೆ ಎಂದು ಮಾಜಿ ಸಚಿವ ಅಶ್ವತ್ಥ ನಾರಾಯಣ ಸರ್ಕಾರದ ವಿರುದ್ಧ ಕೆಂಡ ಕಾರಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ನಿಜವಾಗಿಯೂ ನಿಮಗೆ ಅಷ್ಟೊಂದು ಆಕ್ರೋಶವಿದ್ದರೆ ಗಣಪತಿ ಮೆರವಣಿಗೆ ಸಂದರ್ಭದಲ್ಲಿ ಕಲ್ಲು ಎಸೆದ ಮತಾಂಧರರ ಮೇಲೆ ಲಾಠಿಚಾರ್ಜ್ ನಡೆಸಿ ಪೌರುಷ ತೋರಿಸಿ, ಶಾಂತಿಯುತವಾಗಿ ಮೆರವಣಿಗೆ ನಡೆಸುತ್ತಿದ್ದವರ ಮೇಲೆ ಮಹಿಳೆಯರು ಮತ್ತು ಮಕ್ಕಳ ಮೇಲೆ ಒಣ ಪೌರುಷ ತೋರಿಸಿರುವುದು ಬೇಡ ಎಂದು ಎಚ್ಚರಿಕೆ ಕೊಟ್ಟರು.

ನಾವು ಏನು ಬೇಕಾದರೂ ಮಾಡಬಹುದೆಂಬ ಮನಸ್ಥಿತಿಯಲ್ಲಿರುವ ಒಂದು ಸಮುದಾಯ ಮಚ್ಚು, ಲಾಂಗು ಹಿಡಿದು ಅಟ್ಟಹಾಸ ಮೆರೆಯುತ್ತಿದ್ದಾರೆ. ಶಾಂತಿಯುತವಾಗಿ ನಡೆಯುತ್ತಿದ್ದ ಮೆರವಣಿಗೆ ಮೇಲೆ ಕಲ್ಲು ಎಸೆಯುವ ಅಗತ್ಯವಾದರೂ ಏನಿತ್ತು? ಪೊಲೀಸ್ ಇಲಾಖೆ ಸರ್ಕಾರದ ಓಲೈಕೆಗೆ ಸೀಮಿತವಾಗಿದೆ. ಪೋಸ್ಟಿಂಗ್‌ಗೋಸ್ಕರ ಇಲಾಖೆ ಓಲೈಕೆಗಿಳಿದಿದೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

## ಬ್ರಹ್ಮಶ್ರೀ ನಾರಾಯಣ ಗುರು ಜ್ಞಾನದ ಹಣತೆ ಹಚ್ಚಿದವರು: ಸಿ.ಟಿ.ರವಿ

**ಚಿಕ್ಕಮಗಳೂರು, ಸೆ.8:** ಬ್ರಹ್ಮಶ್ರೀ ನಾರಾಯಣ ಗುರುಗಳು ಜಾತೀಯತೆಯ ವಿರುದ್ಧ ಖಡ್ಗವನ್ನು ಹಿಡಿಯಲಿಲ್ಲ. ಬದಲಾಗಿ ಜನರ ಹೃದಯದಲ್ಲಿ ಜ್ಞಾನದ ಹಣತೆಯನ್ನು ಹಚ್ಚಿದರು ಎಂದು ವಿಧಾನ ಪರಿಷತ್ ಸದಸ್ಯ ಸಿ.ಟಿ.ರವಿ ತಿಳಿಸಿದರು.

ಜಿಲ್ಲಾಡಳಿತ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಯೋಗದಲ್ಲಿ ನಗರದ ಕುವೆಂಪು ಕಲಾಮಂದಿರದಲ್ಲಿ ನಿನ್ನೆ ನಡೆದ ಬ್ರಹ್ಮಶ್ರೀ ನಾರಾಯಣ ಗುರುಗಳ ಜಯಂತಿ ಮಹೋತ್ಸವವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಪ್ರತಿಯೊಂದು ವಸ್ತುಗಳು ಪಂಚಭೂತಗಳಿಂದಾಗಿವೆ. ಮನುಷ್ಯ ದೇವರ ಸೃಷ್ಟಿಯಾಗಿದ್ದು, ದೇವರು ಜಾತಿಯನ್ನು ಸೃಷ್ಟಿಸಲಿಲ್ಲ. ಜನ್ಮದಿಂದ ಬ್ರಾಹ್ಮಣನಾಗಿದ್ದರೂ ಗುಣಗ್ರಾಹಿಯಾಗಿರದಿದ್ದರೆ ಆತ ಶೂದ್ರನೇ ಆಗುತ್ತಾನೆ. ಶೂದ್ರನಾಗಿದ್ದು, ವಿದ್ವತ್ತನ್ನು ಗಳಿಸಿದ್ದರೆ ಆತ ಶ್ರೇಷ್ಠ ವಿದ್ವಾಂಸನಾಗುತ್ತಾನೆ ಎಂದು ಹೇಳಿದರು.

ನಾರಾಯಣ ಗುರುಗಳು ಕೆಳಜಾತಿಯಲ್ಲಿ ಹುಟ್ಟಿದ್ದರೂ ಸಂಸ್ಕೃತ, ಮಲಯಾಳಂ, ತಮಿಳು ಮೂಲಕ ಅಪಾರ ಜ್ಞಾನವನ್ನು ಸಂಪಾದಿಸಿ ಬ್ರಹ್ಮಶ್ರೀಗಳಾದರು. ಯಾವುದೇ ಮಹಾನು ಭಾವರನ್ನು ಒಂದು ಜಾತಿಗೆ ಸೀಮಿತಗೊಳಿಸ ಬಾರದು. ಹಾಗೆ ಸೀಮಿತಗೊಳಿಸಿದರೆ ಆ ಜಾತಿಗೆ ಅಪಚಾರ ಮಾಡಿದಂತಾಗುತ್ತದೆ. ದೇವರನಾಡು ಎಂದೇ ಹೆಸರಾದ ಕೇರಳದಲ್ಲಿ ಮತಾಂತರ ಮಾಯಾಜಾಲವಾಗಿ ಹಬ್ಬಿಕೊಂಡಿದ್ದ ಸಂದರ್ಭದಲ್ಲಿ ಕೆಳ ವರ್ಗದವರು ಮತಾಂತರಗೊಳ್ಳದಂತೆ ಪಾರು ಮಾಡಿದವರೇ ನಾರಾಯಣ ಗುರುಗಳು ಎಂದು ತಿಳಿಸಿದರು.

ಶಾಸಕ ಹೆಚ್.ಡಿ.ತಮ್ಮಯ್ಯ ಅಧ್ಯಕ್ಷತೆ ವಹಿಸಿ



ಮಾತನಾಡಿ, ವೈವಿಧ್ಯತೆಯಲ್ಲಿ ಏಕತೆಯನ್ನು ಕಂಡ ಸಂಸ್ಕಾರವಂತ ದೇಶ ನಮ್ಮದು. ಶೋಷಿತ ಸಮಾಜದ ಗುರುಗಳು ಬುದ್ಧ, ಬಸವ, ಅಂಬೇಡ್ಕರರಂತೆ ವಿಶ್ವ ಕ್ರಾಂತಿ ಮಾಡಿದರು. ವಿವಿಧತೆಯಲ್ಲಿ ಏಕತೆ ಇರುವ, ಸಂಸ್ಕಾರವಿರುವ ದೇಶವೆಂದರೆ ಅದು ಭಾರತ. ಒಟ್ಟು ಕುಟುಂಬದಲ್ಲಿ ಒಗ್ಗಟ್ಟು, ಸಾಮರಸ್ಯವಿರುತ್ತದೆ ಎಂದು ಕೂಡು ಕುಟುಂಬದ ಬಗ್ಗೆ ತಿಳಿಸಿದರು.

ಬ್ರಹ್ಮಶ್ರೀ ನಾರಾಯಣ ಗುರುಗಳ ಬಗ್ಗೆ ಸಾಹಿತಿ ಬಿ.ತಿಪ್ಪೇರುದ್ರಪ್ಪ ಉಪನ್ಯಾಸ ನೀಡಿ, ಮಹನೀಯರ ಜೀವನ, ಸಾಧನೆ ಮೆಲುಕು ಹಾಕುವುದರ ಮೂಲಕ ನಮ್ಮ ಬದುಕನ್ನು ಉನ್ನತೀಕರಿಸಿಕೊಳ್ಳುವುದೇ ಆಗಿದೆ. ಭರತ ಭೂಮಿಯಲ್ಲಿ ಸಮಾಜದ ಅನಿಷ್ಠ, ಅಂಟು ಜಾಡ್ಯಗಳಾದ ಜಾತೀಯತೆ, ಅಸ್ಪೃಶ್ಯತೆ, ಅಸಮಾನತೆ, ಸಾಮಾಜಿಕ ಅನ್ಯಾಯ ತುರಿಯಾವಸ್ಥೆಯಲ್ಲಿದ್ದಾಗ ಬಸವ, ಬುದ್ಧ, ಅಂಬೇಡ್ಕರ್ ಅವುಗಳನ್ನು ನಿವಾರಿಸಲು ಶ್ರಮಿಸಿದರು. ಅದೇ ಸಾಲಿನಲ್ಲಿ ನಿಲ್ಲುವವರು ನಾರಾಯಣ ಗುರುಗಳು ಎಂದು ಹೇಳಿದರು.

ಬ್ರಹ್ಮಶ್ರೀ ಎಂದರೆ ಬ್ರಹ್ಮಜ್ಞಾನವನ್ನು ಪಡೆದವರು ಎಂದು ಅರ್ಥ. ಯಾವಾಗ ಜಗತ್ತಿನಲ್ಲಿ ಅಧರ್ಮ, ಅಶಾಂತಿ ತಾಂಡವವಾಡುತ್ತೊ ಆಗ ಜಗತ್ತನ್ನು ಉದ್ಧರಿಸಲು ಮಹಾತ್ಮರು ಜನಿಸುತ್ತಾರೆ. ನಾರಾಯಣ ಗುರುಗಳು ಜನರ ಮನಸ್ಸಿನಲ್ಲಿ ಉತ್ಪತ್ತಿಯಾದ ಜಾತೀಯತೆಯ ಕಸವನ್ನು ಗುಡಿಸುವ ಕೆಲಸ ಮಾಡಿದರು. ವಿಧವೆಯ ಕಣ್ಣೀರನ್ನು ಒರೆಸದ, ಹಸಿದವರಿಗೆ ಅನ್ನವನ್ನು ನೀಡದ ಧರ್ಮ ಧರ್ಮವಲ್ಲ, ಒಂದೇ ಜಾತಿ, ಒಂದೇ ಧರ್ಮ, ಒಬ್ಬನೇ ದೇವರು ಎಂದು ಪ್ರತಿಪಾದಿಸಿ ಶೋಷಿತ ವರ್ಗದವರಿಗೂ ದೇವರಿದ್ದಾನೆ ಎಂದು ತೋರಿಸಿಕೊಡುವ ಮೂಲಕ ಅನೇಕ ದೇವಾಲಯಗಳನ್ನು ನಿರ್ಮಿಸಿದರು. ಶಂಕರಾಚಾರ್ಯರ ಅದ್ವೈತ ಸಿದ್ಧಾಂತವನ್ನು ಅನುಸರಿಸಿ ಅದ್ವೈತ ಗುರು ಎಂದೆನಿಸಿದ್ದಾರೆ. ಯೋಗದಲ್ಲಿ ಪತಂಜಲಿ, ಜ್ಞಾನದಲ್ಲಿ ಶಂಕರ, ಅಹಿಂಸೆಯಲ್ಲಿ ಬುದ್ಧ, ಮಾನವೀಯತೆಯಲ್ಲೂ ಏಸುವಿನಂತಿದ್ದವರು ನಾರಾಯಣ ಗುರುಗಳು ಎಂದು ಹೇಳಿದರು.

## ಇಂದಿನ ರಾಶಿ ಭವಿಷ್ಯ

### ಮೇಷ ರಾಶಿ

ನಿಮ್ಮ ದೈಹಿಕ ರಚನೆಯನ್ನು ಕಾಯ್ದುಕೊಳ್ಳಲು ನೆರವಾಗುವ ಕೆಲವು ಕ್ರೀಡಾ ಚಟುವಟಿಕೆಗಳನ್ನು ನೀವು ಇಂದು ಆನಂದಿಸಬಹುದು. ಇತರರ ಮೇಲೆ ಪ್ರಭಾವ ಬೀರಲು ತುಂಬಾ ವೆಚ್ಚ ಮಾಡಬೇಡಿ. ನಿಮ್ಮ ಜ್ಞಾನ ಮತ್ತು ಒಳ್ಳೆಯ ಹಾಸ್ಯ ನಿಮ್ಮ ಬಳಿಯಿರುವ ಜನರನ್ನು ಆಕರ್ಷಿಸಬಹುದು. ನಿಮ್ಮ ಶಾಶ್ವತವಾದ ಪ್ರೀತಿ ನಿಮ್ಮ ಪ್ರೀತಿಪಾತ್ರರಿಗೆ ಒಂದು ಸೆಲೆಯಾಗಿದೆ.ನೀವು ಕೆಲಸ ಮಾಡುವ ಬಗ್ಗೆ ಖಚಿತವಾಗಿಲ್ಲದಿದ್ದರೆ ಯಾವ ಭರವಸೆಯನ್ನೂ ನೀಡಬೇಡಿ.

### ವೃಷಭ ರಾಶಿ

ನಿಮ್ಮ ಪ್ರಚಂಡ ಪ್ರಯತ್ನ ಹಾಗೂ ಕುಟುಂಬದ ಸದಸ್ಯರ ಸಕಾಲಿಕ ಬೆಂಬಲ ಬಯಸಿದ ಫಲಿತಾಂಶಗಳು ತರುತ್ತದೆ. ಆದರೆ ಪ್ರಸ್ತುತ ಚೇತನವನ್ನು ಕಾಯ್ದುಕೊಳ್ಳಲು ಶ್ರಮಿಸುತ್ತಿರಿ. ದೀರ್ಘಕಾಲದವರೆಗೆ ಆರ್ಥಿಕ ಬಿಕ್ಕಟ್ಟಿನಲ್ಲಿ ಸಿಲುಕಿದ್ದವರು, ಅವರು ಇಂದು ಎಲ್ಲಿಂದಲಾದರೂ ಹಣವನ್ನು ಪಡೆಯಬಹುದು, ಇದು ಜೀವನದ ಅನೇಕ ಸಮಸ್ಯೆಗಳನ್ನು ತೆಗೆದುಹಾಕುತ್ತದೆ. ಒಬ್ಬ ಸ್ನೇಹಿತ ತನ್ನ ವೈಯಕ್ತಿಕ ಸಮಸ್ಯೆಗಳನ್ನು ಪರಿಹರಿಸುವಲ್ಲಿ ನಿಮ್ಮ ಸಲಹೆ ಪಡೆದುಕೊಳ್ಳುತ್ತಾರೆ.

### ಮಿಥುನ ರಾಶಿ

ನಿಮ್ಮ ಆರೋಗ್ಯದ ಬಗ್ಗೆ ವಿಶೇಷವಾಗಿ ರಕ್ತದೊತ್ತಡ ರೋಗಿಗಳ ಬಗ್ಗೆ ಸ್ವಲ್ಪ ಜಾಗ್ರತೆಯಿಂದಿರಿ. ಹಣಕ್ಕೆ ಸಂಬಂಧಿಸಿದ ಯಾವುದೇ ಸಮಸ್ಯೆಯನ್ನು ಇಂದು ಪರಿಹರಿಸಬಹುದು ಮತ್ತು ನೀವು ಹಣದಿಂದ ಲಾಭ ಪಡೆಯಬಹುದು. ಸ್ನೇಹಿತರು ಮತ್ತು ಹತ್ತಿರದವರು ನಿಮಗೆ ತಮ್ಮ ಸಹಾಯ ಹಸ್ತ ಚಾಚುತ್ತಾರೆ. ನಿಮ್ಮ ಪ್ರೀತಿಪಾತ್ರರು ನಿಮ್ಮನ್ನು ದ್ವೇಷಿಸಿದರೂ ನೀವು ಪ್ರೀತಿ ತೋರಿಸಬೇಕು. ಸಹೋದ್ಯೋಗಿಗಳನ್ನು ನಿರ್ವಹಿಸುವಾಗ ಜಾಣತನದ ಅಗತ್ಯವಿದೆ. ಯಾವುದೇ ಹೊಸ ಕೆಲಸವನ್ನು ಪ್ರಾರಂಭಿಸುವ ಮೊದಲು ಅದರ ಬಗ್ಗೆ ಅನುಭವಿ ಜನರೊಂದಿಗೆ ಮಾತನಾಡಬೇಕು

### ಕರ್ಕ ರಾಶಿ

ನಿಮ್ಮ ಅಪಾರ ವಿಶ್ವಾಸ ಮತ್ತು ಸುಲಭದ ಕೆಲಸದ ವೇಳಾಪಟ್ಟಿ ಇಂದು ವಿಶ್ರಾಂತಿಗೆ ಸಾಕಷ್ಟು ಸಮಯ ನೀಡುತ್ತದೆ. ಸಣ್ಣ ಉದ್ಯೋಗವನ್ನು ಮಾಡುವ ಜನರು, ಇಂದು ತಮ್ಮ ಆಪ್ತರಿಂದ ಯಾವುದೇ ಸಲಹೆಯನ್ನು ಪಡೆಯಬಹುದು. ಇದರಿಂದ ಅವರಿಗೆ ಆರ್ಥಿಕವಾಗಿ ಲಾಭ ಪಡೆಯುವ ಸಾಧ್ಯತೆ ಇದೆ. ಒಂದು ಕುಟುಂಬದ ಒಟ್ಟಾಗುವಿಕೆಯಲ್ಲಿ ನೀವೇ ಕೇಂದ್ರಬಿಂದುವಾಗಿರುತ್ತೀರಿ. ನೀವು ಹಾಗೂ ನಿಮ್ಮ ಪ್ರೀತಿಪಾತ್ರರು ಒಬ್ಬರೊನ್ನಬ್ಬರು ಚೆನ್ನಾಗಿ ಅರ್ಥಮಾಡಿಕೊಳ್ಳಲು ಸಮಯ ವ್ಯಯಿಸಬೇಕು.

### ಸಿಂಹ ರಾಶಿ

ನಿಮ್ಮ ಪೋಷಕರನ್ನು ನಿರ್ಲಕ್ಷಿಸುವುದು ನಿಮ್ಮ ಭವಿಷ್ಯವನ್ನು ಕೆಡಿಸಬಹುದು. ಉತ್ತಮ ಸಮಯಗಳು ತುಂಬಾ ಕಾಲ ಇರುವುದಿಲ್ಲ. ಮನುಷ್ಯನ ಕಾರ್ಯಗಳು ಶಬ್ದದ ಅಲೆಗಳಿದ್ದ ಹಾಗೆ. ಇವಗಳು ಒಂದು ಮಧುರವಾದ ಅಥವಾ ಒಂದು ಕರ್ಕಶವಾದ ಶಬ್ದವನ್ನು ಉತ್ಪಾದಿಸಲು ಮತ್ತೆ ಬರುತ್ತವೆ. ಅವುಗಳು ಬೀಜಗಳಿದ್ದ ಹಾಗೆ –ನಾವು ಬಿತ್ತಿದ್ದನ್ನು ಕೊಯ್ಯುತ್ತವೆ.

### ಕನ್ಯಾ ರಾಶಿ

ನಿಮ್ಮ ಆರೋಗ್ಯದ ಬಗ್ಗೆ ಚಿಂತಿಸುವುದು ನಿಮ್ಮ ಕಾಯಿಲೆಯನ್ನು ಇನ್ನಷ್ಟು ಉಲ್ಬಣಿಸಬಹುದಾದ್ದರಿಂದ ಹಾಗೆ ಮಾಡಬೇಡಿ. ನಿಮ್ಮ ವೆಚ್ಚಗಳನ್ನು ನಿಯಂತ್ರಿಸಲು ಪ್ರಯತ್ನಿಸಿ ಮತ್ತು ಇಂದು ತುಂಬಾ ಖರ್ಚು ಮಾಡಬೇಡಿ. ನಿಮ್ಮ ಕುಟುಂಬದ ಸದಸ್ಯರು ಕಡ್ಡಿಯನ್ನು ಗುಡ್ಡ ಮಾಡುವ ಸಾಧ್ಯತೆಯಿದೆ. ಸರೋವರದಲ್ಲಿನ ಸೊಗಸಾದ ಮೀನನ್ನು ಸಂಧಿಸುವ ಅವಕಾಶಗಳು ಸಾಧ್ಯತೆಗಳು ಇಂದು ಹೆಚ್ಚಿವೆ. ಹೊಸ ಉದ್ಯಮಗಳು ಆಕರ್ಷಕವಾಗಿರುತ್ತವೆ ಮತ್ತು ಒಳ್ಳೆಯ ಆದಾಯದ ಭರವಸೆ ಕಾಣಿಸುತ್ತದೆ.

### ತುಲಾ ರಾಶಿ

ನಿಮ್ಮ ಶೀಘ್ರ ಕ್ರಮ ನಿಮ್ಮನ್ನು ಪ್ರೇರೇಪಿಸುತ್ತದೆ. ಯಶಸ್ಸು ಸಾಧಿಸಲು–ಸಮಯದ ಜೊತೆ ನಿಮ್ಮ ಆಲೆಲೋಚನೆಗಳನ್ನು ಬದಲಾಯಿಸಿಕೊಳ್ಳಿ–ಇದು ನಿಮ್ಮ ದೃಷ್ಟಿಯನ್ನು ವಿಸ್ತಾರಗೊಳಿಸುತ್ತದೆ ನಿಮ್ಮ ವ್ಯಕ್ತಿತ್ವವನ್ನು ವೃದ್ಧಿಸುತ್ತದೆ– ನಿಮ್ಮ ವ್ಯಕ್ತಿತ್ವವನ್ನು ಸುಧಾರಿಸುತ್ತದೆ ಮತ್ತು ನಿಮ್ಮ ಮನಸ್ಸನ್ನು ಪಕ್ವಗೊಳಿಸುತ್ತದೆ. ಹೊಸ ಹಣಗಳಿಕೆಯ ಅವಕಾಶಗಳು ಲಾಭದಾಯಕವಾಗಿರುತ್ತವೆ.

### ವೃಶ್ಚಿಕ ರಾಶಿ

ಇಂದು ನೀವು ಭರವಸೆಯ ಮಾಯಾಜಾಲದಲ್ಲಿದ್ದೀರಿ. ನೀವು ಇಂದು ಗಣನೀಯ ಪ್ರಮಾಣದ ಹಣವನ್ನು ಸಹ ಹೊಂದಿರುತ್ತೀರಿ ಮತ್ತು ಅದರೊಂದಿಗೆ ಮನಸ್ಸಿನ ಶಾಂತಿ ಇರುತ್ತದೆ. ಗುಂಪಿನಲ್ಲಿದ್ದಾಗ ನೀವೇನು ಹೇಳುತ್ತೀರೆಂದು ಎಚ್ಚರ ವಹಿಸಿ–ನಿಮ್ಮ ಹಠಾತ್ ಟೀಕೆಗಳಿಗೆ ನೀವು ತೀವ್ರವಾಗಿ ಟೀಕೆ ಎದುರಿಸಬೇಕಾಗಬಹುದು. ನಿಮ್ಮ ಸಂಗಾತಿಯ ಕೆಟ್ಟ ಆರೋಗ್ಯದಿಂದಾಗಿ ಇಂದು ಪ್ರಣಯಕ್ಕೆ ಧಕ್ಕೆಯಾಗುತ್ತದೆ.

### ಧನು ರಾಶಿ

ನಿಮ್ಮ ಹೆಂಡತಿಯ ಜೊತೆ ಕುಟುಂಬದ ಸಮಸ್ಯೆಗಳನ್ನು ಹಂಚಿಕೊಳ್ಳಿ. ನಮ್ಮನ್ನು ನೀವೇ ಒಂದು ಪ್ರೀತಿಯ ಪೋಷಿಸುವ ಜೋಡಿಯೆನ್ನುವುದನ್ನು ಪುನಃ ಕಂಡುಹಿಡಿಯಲು ಸ್ವಲ್ಪ ಸಮಯ ಖರ್ಚು ಮಾಡಿ. ನಿಮ್ಮ ಮಕ್ಕಳೂ ಕೂಡ ಮನೆಯಲ್ಲಿನ ಶಾಂತಿ ಸಾಮರಸ್ಯದ ವಾತಾವರಣವನ್ನು ಆವಾಹಿಸಿಕೊಳ್ಳುತ್ತಾರೆ. ಇದು ಪರಸ್ಪರ ಸಂಪರ್ಕದಲ್ಲಿ ನಿಮ್ಮ ಮಾತುಕತೆಗೆ ನಿಮಗೆ ಹೆಚ್ಚಿನ ಸ್ವಾಭಾವಿಕತೆ ಮತ್ತು ಸ್ವಾತಂತ್ರ್ಯನೀಡುತ್ತದೆ.

### ಮಕರ ರಾಶಿ

ಒಂದು ಲಾಭಕರ ದಿನ ಮತ್ತು ನೀವು ದೀರ್ಘಕಾಲದ ಅನಾರೋಗ್ಯಕ್ಕೆ ಪರಿಹಾರ ಹುಡುಕಲು ಸಾಧ್ಯವಾಗಬಹುದು. ಇಂದು ನಿಮಗೆ ಹಣದ ಲಾಭವಾಗುವ ಪೂರ್ತಿ ಸಾಧ್ಯತೆ ಇದೆ, ಆದರೆ ಇದರೊಂದಿಗೆ ನೀವು ದಾನವನ್ನು ಸಹ ಮಾಡಬೇಕು ಏಕೆಂದರೆ ಇದರಿಂದ ನಿಮಗೆ ಮಾನಸಿಕ ಶಾಂತಿ ಸಿಗುತ್ತದೆ. ನೀವು ಪಾರ್ಟಿ ನೀಡಲು ಯೋಜಿಸುತ್ತಿದ್ದಲ್ಲಿ ನಿಮ್ಮ ಎಲ್ಲಾ ಒಳ್ಳೆಯ ಸ್ನೇಹಿತರನ್ನು ಆಮಂತ್ರಿಸಿ  ನಿಮ್ಮನ್ನು ಅಸ್ತುಷ್ಟಗೊಳಿಸುವ ಬಹಳಷ್ಟು ಜನರಿರುತ್ತಾರೆ.

### ಕುಂಭ ರಾಶಿ

ನಿಮ್ಮ ನಿರಂತರ ಸಕಾರಾತ್ಮಕ ಚಿಂತನೆಯನ್ನು ಪ್ರಶಂಸಿಸಲಾಗುತ್ತದೆ. ನಿಮ್ಮ ಪ್ರಯತ್ನದಲ್ಲಿ ನೀವು ಯಶಸ್ವಿಯಾಗಬಹುದು. ಎಲ್ಲಾ ಬದ್ಧತೆಗಳು ಮತ್ತು ಆರ್ಥಿಕ ವ್ಯವಹಾರಗಳನ್ನು ಎಚ್ಚರಿಕೆಯಿಂದ ನಿರ್ವಹಿಸಬೇಕು. ಇತರರಿಗೆ ಪ್ರತಿಫಲಗಳು ತರುವ ನಿಮ್ಮ ಸಾಮರ್ಥ್ಯ ಪ್ರತಿಫಲ ತರುತ್ತದೆ. ನಿಮ್ಮ ಸಂಗಾತಿಯು ಇಂದು ಇಡೀ ದಿನ ನಿಮ್ಮ ಬಗ್ಗೆ ಚಿಂತಿಸುತ್ತೀರಿ.

### ಮೀನ ರಾಶಿ

ಸ್ವತಃ ಔಷಧಿ ತೆಗೆದುಕೊಳ್ಳುವುದು ಔಷಧ ಅವಲಂಬನೆಯನ್ನು ಉಂಟುಮಾಡಬಹುದು. ಯಾವುದೇ ಔಷಧ ತೆಗೆದುಕೊಳ್ಳುವ ಮೊದಲು ವೈದ್ಯರ ಸಲಹೆ ಪಡೆಯಿರಿ. ಇಲ್ಲದಿದ್ದಲ್ಲಿ ಔಷಧ ಅವಲಂಬನೆಯ ಸಾಧ್ಯತೆ ಅಧಿಕವಾಗಿದೆ. ಹಣಕಾಸು ಸ್ಥಿತಿ ಊಹಾಪೋಹ ಅಥವಾ ಅನಿರೀಕ್ಷಿತ ಲಾಭದ ಮೂಲಕ ಸುಧಾರಿಸುತ್ತವೆ. ಥಿಯೇಟರ್ ಅಥವಾ ನಿಮ್ಮ ಸಂಗಾತಿಯ ಜೊತೆಗಿನ ಊಟ ನಿಮ್ಮನ್ನು ಒಂದು ಶಾಂತವಾದ ಮತ್ತು ಅದ್ಭುತ ಲಹರಿಯಲ್ಲಿರಿಸುವಂತೆ ತೋರುತ್ತದೆ.

---

ಶರಣ ಸಾಹಿತ್ಯವನ್ನು ಜಗತ್ತಿನಾದ್ಯಂತ ಪ್ರಚಾರ ಮಾಡಬೇಕೆಂಬ ಹಂಬಲ ಲಿಂ. ಹಿರಿಯ ಜಗದ್ಗುರುಗಳದಾಗಿತ್ತು.

# ಲಿಂ.ಶಿವಕುಮಾರ ಶ್ರೀಗಳ ಶ್ರದ್ಧಾಂಜಲಿ ಕಾರ್ಯಕ್ರಮದ ಭಕ್ತಿ ಸಮರ್ಪಣೆಯಲ್ಲಿ ಡಾ. ಶಿವಮೂರ್ತಿ ಶಿವಾಚಾರ್ಯ ಮಹಾಸ್ವಾಮಿಗಳು

**ದಾವಣಗೆರೆ:** ಸಿರಿಗೆರೆ ಶ್ರೀ ತರಳಬಾಳು ಜಗದ್ಗುರು ಬೃಹನ್ಮಠದ 20ನೇ ಜಗದ್ಗುರುಗಳಾಗಿದ್ದ ಲಿಂ. ಶ್ರೀ ಶಿವಕುಮಾರ ಶಿವಾಚಾರ್ಯ ಸ್ವಾಮೀಜಿ ಅವರು ಶರಣ ಸಾಹಿತ್ಯವನ್ನು ಜಗತ್ತಿನಾದ್ಯಂತ ಪ್ರಚಾರ ಮಾಡಬೇಕೆಂಬ ಆಶಯ ಹೊಂದಿದ್ದರು. ಅವರ ದೂರದೃಷ್ಟಿಗೆ ಅನುಗುಣವಾಗಿ ನಾವು 'ಗಣಕ ವಚನ ಸಂಪುಟ' ವನ್ನು ಸಿದ್ಧಪಡಿಸಿದ್ದೇವೆ ಈಗ ಬಸವಾದಿ ಶಿವ ಶರಣರ 22 ಸಾವಿರ ವಚನಗಳು ಮೊಬೈಲ್ ಅಪ್ಲಿಕೇಶನ್ ನಲ್ಲಿ ಲಭ್ಯವಾಗುವಂತೆ ಮಾಡಿದ್ದೇವೆ ಎಂದು ತಿಳಿಸಿದರು.

ಶನಿವಾರ ಸಂಜೆ ನಗರದ ಶಾಮನೂರು ಶಿವಶಂಕರಪ್ಪ ಪಾರ್ವತಮ್ಮ ಕಲ್ಯಾಣ ಮಂಟಪದಲ್ಲಿ ನಗರದ ಸಮಸ್ತ ಭಕ್ತಾದಿಗಳು ಹಮ್ಮಿಕೊಳ್ಳಲಾಗಿದ್ದ ಲಿಂಗೈಕ್ಯ ಶ್ರೀ ಶಿವಕುಮಾರ ಶಿವಾಚಾರ್ಯ ಮಹಾ ಸ್ವಾಮೀಜಿಯವರ 34ನೇ ಶ್ರದ್ಧಾಂಜಲಿ ಕಾರ್ಯಕ್ರಮದ ದಾಸೋಹಕ್ಕೆ ಭಕ್ತಾದಿಗಳಿಂದ ಭಕ್ತಿ ಸಮರ್ಪಣ ಕಾರ್ಯಕ್ರಮದ ಸಾನಿಧ್ಯವಹಿಸಿ ಶ್ರೀಗಳು ಆಶೀರ್ವಚನ ನೀಡಿದರು.

ಶಿವಶರಣರ ವಚನಗಳನ್ನು ಈಗಾಗಲೇ ಆಂಗ್ಲ, ತಮಿಳು, ಮತ್ತು ಮರಾಠಿ ಭಾಷೆಗಳಿಗೂ ಅನುವಾದ ಮಾಡಲಾಗಿದೆ. ಜೊತೆಗೆ ಹೀಬ್ರೂ, ಜರ್ಮನ್ ಮತ್ತು ರಷ್ಯನ್ ಭಾಷೆಗಳಿಗೂ ವಚನಗಳನ್ನು ಭಾಷಾಂತರ ಗೊಳಿಸುವ ಪ್ರಕ್ರಿಯೆ ನಡೆಯುತ್ತಿದೆ. ಹೀಗೆ ಹಿರಿಯ ಜಗದ್ಗುರುಗಳ ಆಶಯಕ್ಕೆ ಒಂದು ವೇದಿಕೆಯನ್ನು ಸಿದ್ಧಪಡಿಸಲಾಗಿದೆ ಎಂದು ಹೇಳಿದರು.



ಇತ್ತೀಚೆಗೆ ಇಂಗ್ಲಿಷ್ ವ್ಯಾಮೋಹ ಹೆಚ್ಚಾಗುತ್ತಿದೆ ಕರ್ನಾಟಕದಲ್ಲಿನ ಮಕ್ಕಳೇ ಕನ್ನಡ ಭಾಷೆ ಮಾತನಾಡುತ್ತಿಲ್ಲ. ಇಂದು ನಮ್ಮ ಮಕ್ಕಳಿಗೆ ಕನ್ನಡ ಬರುವುದಿಲ್ಲ ಎಂದು ಹೆಮ್ಮೆಪಡುವ ಪೋಷಕರಿದ್ದಾರೆ. ಇದು ನಾಚಿಕೆಗೇಡು. ಇಂತಹ ವರಿಗಾಗಿ ವಚನಗಳನ್ನು ಓದಿ ಹೇಳುವ ವ್ಯವಸ್ಥೆಯನ್ನು ಮೊಬೈಲ್ ಅಪ್ಲಿಕೇಶನ್ ನಲ್ಲಿ ಸಿದ್ಧಪಡಿಸಲಾಗಿದೆ ಎಂದು ಹೇಳಿದರು.

ಮುಂದುವರೆದು ಗಣೇಶನ ಹಬ್ಬದ ನಂತರ ಗಣೇಶನ ಮೂರ್ತಿಯನ್ನು ಕಲುಷಿತ ನೀರಿನಲ್ಲಿ ವಿಸರ್ಜನೆ ಮಾಡುತ್ತಿರುವುದು ವಿಷಾದನೀಯ. ಮೊದಲಿದ್ದ ನಮ್ಮ ಸಂಪ್ರದಾಯಗಳು ಇಂದು ಬದಲಾಗಿವೆ. ಧಾರ್ಮಿಕ ನಂಬಿಕೆಗಳು ಮತ್ತು ಶ್ರದ್ದೆಗಳು ವಿಚಾರ ಪೂರ್ಣವಾಗಿರಬೇಕು. ಪೂಜೆಗೆ ಶುದ್ಧ ನೀರನ್ನು ಬಳಸುವ ನಾವು ವಿಸರ್ಜನೆಯ ಸಮಯದಲ್ಲಿ ಕೊಳಚೆ ನೀರನ್ನು ಬಳಸುವ ಬಗ್ಗೆ ಚಿಂತಿಸಬೇಕು ಎಂದರು.

ದಕ್ಷಿಣ ಫ್ಲೋರಿಡಾ ವಿಶ್ವವಿದ್ಯಾನಿಲಯದ ಪ್ರಾಧ್ಯಾಪಕರಾದ ಗಿಲ್ ಬೆನ್ ಹೆರಟ್ ಅವರು ಕನ್ನಡ ಸಾಹಿತ್ಯದ ಸೌಂದರ್ಯ ಮತ್ತು ಅದರ ಆಳವಾದ ಬೇರುಗಳ ಬಗ್ಗೆ ಮಾತನಾಡುತ್ತಾ ಕನ್ನಡ ಸಾಹಿತ್ಯವನ್ನು ಅತ್ಯಂತ ಪ್ರಾಚೀನ,ಗಂಭೀರ, ಮತ್ತು ಸೂಕ್ಷ್ಮ ಎಂದು ಬಣ್ಣಿಸಿದರು. ನನಗೆ ಇಪ್ಪತ್ತು ವರ್ಷಗಳ ಹಿಂದೆ ಕನ್ನಡದ ಬಗ್ಗೆ ಆಸಕ್ತಿ ಬಂದಿದ್ದು,ಕಳೆದೊಂದು ವರ್ಷದಿಂದ ಕನ್ನಡ ಭಾಷೆ ಕಲಿಯುತ್ತಿದ್ದೇನೆ ಎಂದರು.

ಶರಣರ ವಚನ ಸಾಹಿತ್ಯ ವಿಶ್ವದಲ್ಲಿಯೇ ವಿಶಿಷ್ಟವಾದ ವಿಚಾರಗಳನ್ನು ಹೊಂದಿದೆ. ವಚನಗಳ ಶ್ರೇಷ್ಠತೆಯನ್ನು ಜಗತ್ತಿಗೆ ತಲುಪಿಸುವಲ್ಲಿ ಡಾ. ಶಿವಮೂರ್ತಿ ಶಿವಾಚಾರ್ಯ ಸ್ವಾಮಿಜಿ ಗಳ ಕೊಡುಗೆ ಅಪಾರವಾಗಿದೆ. ಶ್ರೀಗಳು ವಚನಗಳನ್ನು ಇತರ ಭಾಷೆಗಳಿಗೆ ಅನುವಾದಿಸುವ ಮೂಲಕ ಈ ಮಹತ್ವದ ಕಾರ್ಯವನ್ನು ಮಾಡಿದ್ದಾರೆ ಎಂದು ಹೇಳಿದರು.

ಜಿಲ್ಲಾ ಕಸಾಪ ಅಧ್ಯಕ್ಷ ಬಿ ವಾಮದೇವಪ್ಪ ತಮ್ಮ ಪ್ರಾಸ್ತಾವಿಕ ನುಡಿಗಳಲ್ಲಿ ಲಿಂಗೈಕ್ಯ ಶಿವಕುಮಾರ ಶಿವಾಚಾರ್ಯ ಮಹಾಸ್ವಾಮಿಗಳವರು ನಮ್ಮ ನಾಡು ನುಡಿ ಶಿಕ್ಷಣ ಧರ್ಮ ಸಾಹಿತ್ಯ ಸಂಸ್ಕೃತಿ ಇತ್ಯಾದಿ ಕ್ಷೇತ್ರಗಳಿಗೆ ಸಲ್ಲಿಸಿದ ಸೇವೆ ಅವಿಸ್ಮರಣೆಯ. ಮಠ ಪೀಠಗಳ ಇತಿಹಾಸದಲ್ಲೇ ಅವರು ಕ್ರಾಂತಿಕಾರಿಗಳೆಂದು ಹೆಸರಾದವರು. 'ದಿಟ್ಟ ಹೆಜ್ಜೆಯ ಧೀರ ಪ್ರಭು' ಎಂದು ಪ್ರಖ್ಯಾತರಾದ ಶ್ರೀಗಳು ಸ್ವತಂತ್ರ ಪೂರ್ವದಲ್ಲಿ ನಾಡಿನ ಉದ್ದಗಲಕ್ಕೂ ನೂರಾರು ಶಾಲಾ –ಕಾಲೇಜು,ಉಚಿತ ವಿದ್ಯಾರ್ಥಿ ನಿಲಯಗಳ ಮೂಲಕ ಗ್ರಾಮೀಣ ಪ್ರದೇಶದ ಸಹಸ್ರಾರು ಬಡ ಮಕ್ಕಳ ಭವಿಷ್ಯಕ್ಕೆ ಕಲ್ಪವೃಕ್ಷರಾದವರು.

ಇದೇ ಸೆಪ್ಟಂಬರ್ 24ರಂದು ಸಿರಿಗೆರೆಯಲ್ಲಿ ಪ್ರತಿವರ್ಷದಂತೆ ಹಿರಿಯ ಜಗದ್ಗುರುಗಳ 34ನೇ ಶ್ರದ್ಧಾಂಜಲಿ ಸಮಾರಂಭವನ್ನು ಹಮ್ಮಿಕೊಳ್ಳಲಾಗಿದೆ. ಅದಕ್ಕೆ ದಾವಣಗೆರೆ ನಗರದ ಸಮಸ್ತ ಭಕ್ತಾದಿಗಳು ಇಂದು 240 ಕ್ವಿಂಟಲ್ ಗೋಧಿಯನ್ನು ಉದಾರವಾಗಿ ಭಕ್ತಿ ಸಮರ್ಪಣೆಯನ್ನು ಈ ಕಾರ್ಯಕ್ರಮದ ಮೂಲಕ ಪೂಜ್ಯರಿಗೆ ಸಮರ್ಪಿಸಿದ್ದಾರೆ. ಹೀಗೆ ಸಿರಿಗೆರೆ ಮಠ ಹಾಗೂ ಮಠದ ಭಕ್ತರು ಬೇರೆಲ್ಲ ಮಠಗಳಿಗೆ ಮಾದರಿಯಾಗಿದ್ದಾರೆ ಎಂದು ತಿಳಿಸಿದರು.

ಕಾರ್ಯಕ್ರಮದ ವೇದಿಕೆಯಲ್ಲಿ ಸಮಾಜದ ಮುಖಂಡರುಗಳಾದ ಮಾಗನೂರು ಸಂಗಮೇಶ ಗೌಡ್ರು, ಕೆ ಜಿ ಬಸವನಗೌಡ್ರು ಕಕ್ಕರಗೊಳ್ಳ, ಎಚ್ ಡಿ ಮಹೇಶ್ವರಪ್ಪ ,ಗುಂಡಗತ್ತಿ ಮಂಜುನಾಥ್, ಮಹಾಬಲೇಶ್ವರ ಗೌಡ್ರು, ಕಂಸಾಗರದ ಪಂಚಾಕ್ಷರಪ್ಪ, ಶ್ರೀನಿವಾಸ್ ಶಿವಗಂಗಾ, ಶಿವನಳ್ಳಿ ರಮೇಶ್, ಶಶಿಧರ ಹೇಮ್ಮನ ಬೇತೂರು, , ಲಕ್ಷ್ಮಿ ಗ್ರಾನೆಟ್ ಇಂದ್ರಪ್ಪ, ಉಪಸ್ಥಿತರಿದ್ದರು.

ಸರ್ಕಾರಿ ನೌಕರರ ಸಂಘದ ಜಿಲ್ಲಾಧ್ಯಕ್ಷ ವೀರೇಶ್ ಎಸ್ ಒಡೇನಪುರ ಸ್ವಾಗತಿಸಿದರು, ಶಿಕ್ಷಕ ಸಿ ಜಿ ಜಗದೀಶ್ ಕೂಲಂಬಿ ನಿರೂಪಿಸಿದರು. ತೋಳಹುಣಸೆ ಮುಪ್ಪಣ್ಣ ವಂದಿಸಿದರು. ಕದಳಿ ಮತ್ತು ವಿನೂತನ ಮಹಿಳಾ ಸಮಾಜದ ಸದಸ್ಯರು ಪ್ರಾರ್ಥಿಸಿದರು.

ಸಿರಿಗೆರೆಯ ತರಳಬಾಳು ಕಲಾಸಂಘ ಹಾಗೂ ಅಕ್ಕನ ಬಳಗ, ಅನುಭವ ಮಂಟಪ ಶಾಲೆ ದಾವಣಗೆರೆ ಮತ್ತು ಮಾಗನೂರು ಬಸಪ್ಪ ಪಬ್ಲಿಕ್ ಸ್ಕೂಲ್ ದಾವಣಗೆರೆ ಇವರಿಂದ ಅತ್ಯಾಕರ್ಷಕವಾದ ಮತ್ತು ಅರ್ಥಪೂರ್ಣವಾದ ಸಾಂಸ್ಕೃತಿಕ ಕಾರ್ಯಕ್ರಮಗಳು ಅಪಾರ ಜನ ಮೆಚ್ಚುಗೆಯನ್ನು ಪಡೆದವು.

---

ಶಾಸಕ ಕೆ.ಎಸ್.ಬಸವಂತಪ್ಪ ಆಶಯ । ಹೋರಾಟಗಾರರಿಗೆ ಸನ್ಮಾನ

# ಮಾದಿಗ ಸಮಾಜ ಹೋರಾಟ ನಿಲ್ಲಿಸಲಿ

**ದಾವಣಗೆರೆ :** ಒಳಮೀಸಲಾತಿ ಬೇಡಿಕೆ ಈಡೇರಿದ್ದು ಮಾದಿಗ ಸಮಾಜದವರು ಇನ್ನಾದರೂ ಹೋರಾಟ ನಿಲ್ಲಿಸಬೇಕು. ಇದುವರೆಗೆ ಹೋರಾಟ ಮಾಡದೆ ಫಲ ಉಣ್ಣುತ್ತಿರುವ ಕೆಲ ಸಮಾಜದ ಜನರಿಗೆ ಹೋರಾಟ ಮಾಡಲುಬಿಡಿ ಎಂದು ಶಾಸಕ ಕೆ.ಎಸ್. ಬಸವಂತಪ್ಪ ಹೇಳಿದರು. ಮಾರ್ಮಿಕವಾಗಿ

ಮಾದಿಗ ದಂಡೋರ ಜಿಲ್ಲಾ ಘಟಕದಿಂದ ನಗರದ ರೋಟರಿ ಬಾಲಭವನದಲ್ಲಿ ಭಾನುವಾರ ಹಮ್ಮಿಕೊಂಡಿದ್ದ ಒಳಮೀಸಲಾತಿ ಹೋರಾಟ ಮಾಡಿದವರಿಗೆ ಸನ್ಮಾನ, ಪ್ರಶಸ್ತಿ ವಿತರಣೆ ಕಾರ್ಯಕ್ರಮದಲ್ಲಿ ಮಾತನಾಡಿದರು.

ಸಮುದಾಯದ ಇತರ ಸಮಾಜದವರಿಗೆ ಅನುಕೂಲವಾಗಿದೆ. ಇದನ್ನು ಸೋದರ ಸಮಾಜಗಳು ಅವಲೋಕನ ಮಾಡಿಕೊಳ್ಳಬೇಕು. ಮಾದಿಗ ಹೋರಾಟದಿಂದ ಒಳಮೀಸಲು ಅಸಮಾಧಾನಗಳಿದ್ದಲ್ಲಿ ವಿಚಾರದಲ್ಲಿ ಸಿಎಂ ನೇತೃತ್ವದಲ್ಲಿ ಹೋರಾಟಗಾರರ ರಾಜ್ಯಮಟ್ಟದ ಸಭೆ ಕರೆದು ಚರ್ಚೆ ನಡೆಸಲಾಗುವುದು ಎಂದು ತಿಳಿಸಿದರು.ಸ್ವಾತಂತ್ರ್ಯ ದೇಶದ ಜನರಿಗೆ

ಮಾದಿಗ ದಂಡೋರ ಜಿಲ್ಲಾ ಘಟಕ ದಾವಣಗೆರೆಯಲ್ಲಿ ಹಮ್ಮಿಕೊಂಡಿದ್ದ ಕಾರ್ಯಕ್ರಮದಲ್ಲಿ ಒಳಮೀಸಲಾತಿ ಹೋರಾಟ ಮಾಡಿದವರನ್ನು ಸನ್ಮಾನಿಸಲಾಯಿತು. ಶಾಸಕ ಕೆ.ಎಸ್. ಬಸವಂತಪ್ಪ, ಬಿ.ನರಸಪ್ಪ, ಜೆ.ಎಂ. ದೇವರಾಜ, ಎಚ್.ಸಿ.ಗುಡ್ಡಪ್ಪ, ಎಚ್.ವಿಶ್ವನಾಥ್, ಕಾಶಪ್ಪ, ಹುಲುಗಪ್ಪ ಇದ್ದರು.

ಲಭಿಸಿ 79 ವರ್ಷ ಕಳೆದರೂ ಮಾದಿಗ ಸಮುದಾಯಕ್ಕೆ ನಿಜವಾದ ಸ್ವಾತಂತ್ರ್ಯ ಒಳಮೀಸಲಾತಿ ಜಾರಿಯಿಂದಾಗಿ ದಕ್ಕಿದೆ. 35 ವರ್ಷಗಳ ಕಾಲ ಸತತ ಹೋರಾಟ ಮಾಡಿದ್ದರೂ ಅನೇಕ ಸರ್ಕಾರಗಳು ಅವಧಿಯಲ್ಲೂ ಈಡೇರದ ಸಮಾಜದ ಬೇಡಿಕೆ, ಸಿದ್ದರಾಮಯ್ಯ ಅವರ ಕಾಲದಲ್ಲಿ ಸಾಧ್ಯವಾಗಿದೆ ಎಂದು ಹೇಳಿದರು.

ಒಳಮೀಸಲಾತಿ ಅನುಷ್ಠಾನ ವಿಚಾರದಲ್ಲಿ ಸಣ್ಣಪುಟ್ಟ ಲೋಪದೋಷ ಆಗಿವೆ. ಅಲೆಮಾರಿ, ಅರೆ ಅಲೆಮಾರಿ ಸಮುದಾಯಗಳಿಗೆ ಅನ್ಯಾಯವನ್ನು ಮುಂದಿನ ದಿನಗಳಲ್ಲಿ ಸರಿಪಡಿಸುವುದಾಗಿ ಆಗಿರುವ ಮುಖ್ಯಮಂತ್ರಿ ತಿಳಿಸಿದ್ದಾರೆ ಎಂದರು.

ಮಾದಿಗ ದಂಡೋರ ಜಿಲ್ಲಾ ಘಟಕದ ಅಧ್ಯಕ್ಷ ಎಚ್.ಸಿ.ಗುಡ್ಡಪ್ಪ ಪ್ರಾಸ್ತಾವಿಕ ಮಾತನಾಡಿದರು. ಮೈಸೂರು ಮುಕ್ತ ವಿವಿ ಕುಲಸಚಿವ (ಪರೀಕ್ಷಾಂಗ) ಎಚ್.ವಿಶ್ವನಾಥ್, ಪ್ರಮುಖರಾದ ಕಾಶಪ್ಪ, ಹುಲುಗಪ್ಪ, ಹೆಗ್ಗೆರೆ ರಂಗಪ್ಪ ಇತರರಿದ್ದರು. ಹೋರಾಟದಲ್ಲಿ ಭಾಗಿಯಾಗಿದ್ದ ಒಳಮೀಸಲು ಸಂಘಟನೆಯ ರಾಜ್ಯಾಧ್ಯಕ್ಷ ಬಿ.ನರಸಪ್ಪ, ಪ್ರಮುಖರಾದ ಜೆ.ಎಂ.ದೇವರಾಜ, ರವಿಚಂದ್ರ ಚಿಕ್ಕಾಲಘಟ್ಟ, ಜಿ.ಎಚ್. ತಮ್ಮಣ್ಣ, ಟಿ.ಆರ್.ವಿಜಯಕುಮಾರ್, ಎಚ್.ಮಲ್ಲೇಶ್, ಎಂ.ಸಿ.ಶ್ರೀನಿವಾಸ್ ಇತರರನ್ನು ಸನ್ಮಾನಿಸಲಾಯಿತು

---

ರೈತ ಸಂಘದಿಂದ ಪ್ರತಿಭಟನೆ । ತಹಸೀಲ್ದಾರ್‌ಗೆ ಮನವಿ ಸಲ್ಲಿಕೆ

# ಖಾಸಗಿ ಬ್ಯಾಂಕ್‌ಗಳ ದೌರ್ಜನಕ್ಕೆ ಖಂಡನೆ

**ಜಗಳೂರು:** ರೈತರು ಮತ್ತು ಕೂಲಿ ಕಾರ್ಮಿಕರ ಮೇಲೆ ಖಾಸಗಿ ಬ್ಯಾಂಕುಗಳ ದೌರ್ಜನ್ಯ ಖಂಡಿಸಿ ರಾಜ್ಯ ರೈತ ಸಂಘದ ಹುಚ್ಚವ್ವನಹಳ್ಳಿ ಮಂಜುನಾಥ್ ಬಣದ ಕಾರ್ಯಕರ್ತರು ಶನಿವಾರ ಪ್ರತಿಭಟನೆ ನಡೆಸಿದರು.

ಪ್ರವಾಸಿಮಂದಿರದಿಂದ ಮೆರವಣಿಗೆ ಪ್ರತಿಭಟನಾಕಾರರು ಹೊರಟ ಮಹಾತ್ಮಾ ಗಾಂಧಿ ಹಳೇ ವೃತ್ತ, ಹೊಸ ಬಸ್ ನಿಲ್ದಾಣ, ಅಂಬೇಡ್ಕರ್ ವೃತ್ತದ ಮೂಲಕ ತಾಲೂಕು ಕಚೇರಿಗೆ ತೆರಳಿ ತಹಸೀಲ್ದಾರ್ ಸೈಯದ್ ಕಲೀಂ ಉಲ್ಲಾ ಅವರಿಗೆ ಮನವಿ ಸಲ್ಲಿಸಿದರು.

ಸಂಘದ ತಾಲೂಕು ಕಾರ್ಯದರ್ಶಿ ಭೈರನಾಯಕನಹಳ್ಳಿ ಮಾತನಾಡಿ, ಖಾಸಗಿ ಬ್ಯಾಂಕುಗಳು ರೈತರಿಗೆ ಹೊಸದಾಗಿ ಮನೆ ಕಟ್ಟಲು ಹಾಗೂ ಹಳೆಯ ಮನೆ ಮೇಲೆ ಸಾಲ ನೀಡುತ್ತಿವೆ. ಈ ವೇಳೆ ಖಾಲಿ ಪತ್ರಗಳ ಮೇಲೆ ಸಹಿ ಹಾಕಿಸಿಕೊಂಡು ತಮಗೆ ಇಚ್ಛೆ ಬಂದಂತೆ ಬರೆದುಕೊಂಡು ದುರುಪಯೋಗ ಮಾಡಿಕೊಳ್ಳುತ್ತಿವೆ ಎಂದು ದೂರಿದರು. ಒಂದು ಕಂತು ಪಾವತಿಸಲು ವಿಫಲವಾದರೂ ಮನೆಯ ಮುಂದೆ ಬ್ಯಾಂಕಿನ ಸಿಬ್ಬಂದಿ ಬಂದು ಮನಸೋ ಇಚ್ಛೆ ನಿಂದಿಸಿ ಮರ್ಯಾದೆ ತೆಗೆಯುತ್ತಾರೆ.

ಜಗಳೂರು ಪಟ್ಟಣದಲ್ಲಿ ಶನಿವಾರ ರೈತರು ಮತ್ತು ಕೂಲಿ ಕಾರ್ಮಿಕರ ಮೇಲೆ ಖಾಸಗಿ ಬ್ಯಾಂಕ್‌ಗಳ ದೌರ್ಜನ್ಯ ಖಂಡಿಸಿ ರೈತ ಸಂಘ ಪ್ರತಿಭಟನೆ ನಡೆಸಿ ತಹಸೀಲ್ದಾರ್ ಸೈಯದ್ ಕಲೀಂ ಉಲ್ಲಾ ಅವರಿಗೆ ಮನವಿ ಸಲ್ಲಿಸಿತು. ಭೈರನಾಯಕನಹಳ್ಳಿ ರಾಜು, ಚಿರಂಜೀವಿ, ಗುರುಸಿದ್ದಪ್ಪ, ಸತೀಶ್, ಶರಣಪ್ಪ ಇತರರಿದ್ದರು.

ಇದರಿಂದ ಅನೇಕ ರೈತರು ಆತ್ಮಹತ್ಯೆ ಮಾಡಿಕೊಂಡಿದ್ದಾರೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಸಂಘದ ತಾಲೂಕಾಧ್ಯಕ್ಷ ಸಾಲ ಚಿರಂಜೀವಿ ಮಾತನಾಡಿ, ಕಟ್ಟಲು ಸಾಧ್ಯವಾಗದವರ ವಿರುದ್ಧ ಜಿಲ್ಲೆಯ ನ್ಯಾಯಾಲಯದಲ್ಲಿ ದಾವೆ ಹೂಡದೆ ಕೋಲ್ಕತ್ತ, ಮದ್ರಾಸ್, ಮುಂಬೈ ಹೀಗೆ ಬೇರೆ ಮೆಟ್ರೋ ಸಿಟಿಗಳ ನ್ಯಾಯಾಲಯಗಳಲ್ಲಿ ದಾವೆ ಹೂಡಿ ಆದೇಶ ತಂದು ಆಸ್ತಿ ಜಪ್ತು ಮಾಡುತ್ತಿದ್ದಾರೆ. ಇದರಿಂದ ರೈತರು ಸಂಕಷ್ಟಕ್ಕೆ ಸಿಲುಕಿದ್ದಾರೆ ಎಂದರು. ಹೀಗಾಗಿ ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ಸರ್ಫೇಸ್ ಆಕ್ಟ್ ಬದಲಾವಣೆ ತರಬೇಕು ಎಂದು ಒತ್ತಾಯಿಸಿದರು.

ಕಾನೂನಿನಲ್ಲಿ ಸಾಲಗಾರನಿಗೆ ಸಹ ಅವಕಾಶ ಇರುತ್ತದೆ. ಉಪ ತರಬೇಕು. ಕಾಯ್ದೆ ಇಲ್ಲವಾದರೆ ಸಂಪೂರ್ಣವಾಗಿ ಕಾಯ್ದೆ ತೆಗೆದು ಹಾಕಬೇಕು ಎಂದು ಗ್ರಹಿಸಿದರು.

ಈ ಸಂದರ್ಭದಲ್ಲಿ ಜಿಲ್ಲಾ ಉಪಾಧ್ಯಕ್ಷ ಗುರುಸಿದ್ದಪ್ಪ, ಗೌಡಗೊಂಡನಹಳ್ಳಿ ಸತೀಶ್, ಸಹದೇವರೆಡ್ಡಿ, ಶರಣಪ್ಪ, ಮಡ್ರಳ್ಳಿ ತಿಪ್ಪೇಸ್ವಾಮಿ, ಚಿಕ್ಕಬನ್ನಿಹಟ್ಟಿ ವೀರೇಶ್ ಸೇರಿ ನೂರಾರು ರೈತರು ಇದ್ದರು.

---

<u>ಗದಗ ಜಿಲ್ಲಾಡಳಿತದಲ್ಲಿ ಬ್ರಹ್ಮಶ್ರೀ ನಾರಾಯಣ ಗುರು ಜಯಂತಿ ಆಚರಣೆ</u>

# ಒಂದೇ ಜಾತಿ, ಮತ, ದೇವರು ಎಂಬ ಸತ್ಯವಾಕ್ಯ ಸಾರಿದವರು ಬ್ರಹ್ಮಶ್ರೀ ನಾರಾಯಣ ಗುರುಗಳು

**ಗದಗ :** ಸಮಾಜನದಲ್ಲಿ ಜಾತಿ, ಮತಭೇದಗಳು ಹೆಚ್ಚಾಗಿದ್ದ ಕಾಲದಲ್ಲಿ ಬ್ರಹ್ಮಶ್ರೀ ನಾರಾಯಣ ಗುರುವೆಂಬ, ಒಬ್ಬ ಮಹಾನ್ ಸಮಾಜಕ ಸುಧಾರಕ ಉದಯಿಸಿ, ಸಮಾಜದ ತಾರತಮ್ಯಗಳನ್ನು ಕಡಿಮೆಮಾಡಲು ತಮ್ಮ ಇಡೀಜೀವನವನ್ನು ಮುಡಿಪಾಗಿಟ್ಟು ಹೋರಾಡಿದವರು ಎಂದು ಅಪರ ಜಿಲ್ಲಾಧಿಕಾರಿ ಡಾ. ದುರಗೇಶ್ ಕೆ ಆರ್ ಅವರು ಹೇಳಿದರು.

ನಗರದ ಜಿಲ್ಲಾಡಳಿತ ಭವನದ ಆಡಿಟೋರಿಯಂ ಹಾಲ್‌ನಲ್ಲಿ ರವಿವಾರ (ಸೆ.7 ರಂದು )ಗದಗ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಇವರ ಸಹಯೋಗದಲ್ಲಿ ಬ್ರಹ್ಮಶ್ರೀ ನಾರಾಯಣಗುರು ಜಯಂತಿಯನ್ನು ಸಮಾರಂಭದಲ್ಲಿ ಅವರು ಅಧ್ಯಕ್ಷತೆ ವಹಿಸಿ ಮಾತನಾಡಿದರು.

ನಾರಾಯಣ ಗುರುಗಳು ಪ್ರತಿಪಾದಿಸಿದ ತತ್ವವೇ ಇಂದು ಜಗತ್ತಿನಲ್ಲಿರುವುದು ಎಂದ ಅವರು, ಒಂದೇ ಜಾತಿ, ಒಂದೇ ಮತ, ಹಾಗೂ ಒಂದೇ ದೇವರು ಎಂಬ ಸತ್ಯವಾಕ್ಯವನ್ನು ಸಮಾಜಕ್ಕೆ ಸಾರಿದವರಲ್ಲಿ ಪ್ರಮುಖರು ಎಂದು ತಿಳಿಸಿದರು.

ಸಂಸ್ಕೃತ ಭಾಷೆಭಾಷೆಯಲ್ಲಿ ಅದ್ವಿತೀಯ



ಪಂಡಿತರಾಗಿದ್ದ ನಾರಾಯಣ ಗುರುಗಳು, ಕೇರಳ ಸಮಾಜದಲ್ಲಿ ಅಸ್ಪೃಶ್ಯತೆಯ ಪಿಡುಗಿಗೆ ತಮ್ಮದೇ ಆದ ನಿಲುವಿನಲ್ಲಿ, ಸಮಾಧಾನಕರವಾದ ಉಪಾಯಗಳನ್ನು ಕಂಡುಕೊಂಡರು. ಅವರು ಬೋಧಿಸಿದ್ದು, ದೇಶ ಸೇವೆಯೇ ಈಶ ಸೇವೆಯೆಂದು. ನಾರಾಯಣ ಗುರುಗಳು ಕೇರಳದ ಶಿವಗಿರಿಯಿಂದ 45 ಕಿಲೋಮೀಟರ್ ಉತ್ತರಕ್ಕೆ

*ಸಾಧನೆ ಸನ್ಮಾನ:* ಕೃಷಿ ಕ್ಷೇತ್ರದಲ್ಲಿ ಸಾಧನೆಗೈದ ಅನಿತಾ ಶಿವಮೂರ್ತಪ್ಪ ಕುರ್ತಕೋಟಿ, ಮಂಜುನಾಥ ರಮೇಶ ಹುಲಕೋಟಿ, ಬಸವರಾಜ ಹನುಮಂತಪ್ಪ ಈಳಗೇರ ಅವರನ್ನು ಇದೇ ಸಂಧರ್ಭದಲ್ಲಿ ಸನ್ಮಾನಿಸಲಾಯಿತು. ಅದರಂತೆ ಶೈಕ್ಷಣಿಕ ಕ್ಷೇತ್ರದಲ್ಲಿ ಸಾಧನೆಗೈದ ಪ್ರಭು ಈಳಗೇರ, ಸಿಂಧು ಈಳಗೇರ, ಅರುಣ ಈಳಗೇರ, ಆನಂದ ಈಳಗೇರ, ಅಭಿಷೇಕ ಈಳಗೇರ, ಶೈಲಾ ಈಳಗೇರ, ಪೃಥ್ವಿ ಈಳಗೇರ, ಭೂಮಿಕಾ ಈಳಗೇರ, ಸಂಜನಾ ಈಳಗೇರ, ಬಸವರಾಜ ಈಳಗೇರ, ಸುಪ್ರೀಯಾ ಹೊಸಪೇಟೆ, ಸಮೃದ್ಧಿ ಹಾನಗಲ್, ಆಶಾ ಕುರ್ತಕೋಟಿ, ಅನನ್ಯ ಕುರ್ತಕೋಟಿ ಅವರುಗಳನ್ನು ಗೌರವಿಸಲಾಯಿತು.

ಕಾರ್ಯಕ್ರಮದಲ್ಲಿ ಸಮಾಜದ ಜಿಲ್ಲಾಧ್ಯಕ್ಷ ಪ್ರಕಾಶ್ ಬೊಮ್ಮನಹಳ್ಳಿ ಉಪವಿಭಾಗಾಧಿಕಾರಿ ಗಂಗಪ್ಪ ಎಂ, ಜಿಲ್ಲಾ ವಾರ್ತಾಧಿಕಾರಿ ವಸಂತ ಬಿ ಮಡ್ಲೂರ ಸೇರಿದಂತೆ ಸಮಾಜದ ಗಣ್ಯರು, ಸಾರ್ವಜನಿಕರು ಉಪಸ್ಥಿತರಿದ್ದರು.

---

# ಪತ್ರಕರ್ತರು ಸಮಾಜದ ವೈದ್ಯರು

**ಹರಿಹರ:** ಪ್ರಾಮಾಣಿಕ ಪತ್ರಕರ್ತರು ಸಮಾಜದ ವೈದ್ಯರಾಗಿ ಕಾರ್ಯನಿರ್ವಹಿಸುತ್ತಾರೆ ಎಂದು ಹಿರಿಯ ಪತ್ರಕರ್ತ ಐರಣಿ ಹನುಮಂತಪ್ಪ ಹೇಳಿದರು. ಪತ್ರಿಕಾ ಭವನದಲ್ಲಿ ಭಾನುವಾರ ಆಯೋಜಿಸಿದ್ದ ಪತ್ರಕರ್ತ ಕೆ.ವಿ.ಪ್ರಕಾಶ್ ನುಡಿನಮನ ಕಾರ್ಯಕ್ರಮದಲ್ಲಿ ಮಾತನಾಡಿದರು. ಕೆ.ವಿ.ಪ್ರಕಾಶ್ 20 ವರ್ಷಕ್ಕೂ ಹೆಚ್ಚು ಕಾಲ ಪತ್ರಕರ್ತರಾಗಿ, ತಾಲೂಕು ಕಾರ್ಯನಿರತ ಪತ್ರಕರ್ತರ ಸಂಘದ ಅಧ್ಯಕ್ಷರಾಗಿ ಸೇವೆ ಸಲ್ಲಿಸಿದ್ದಾರೆಂದು ಶ್ಲಾಘಿಸಿದರು. ಟಿ.ಇನಾಯತ್ ಮಾತನಾಡಿ, ಲೇಖನಿ ಮೂಲಕ ಮೌನವಾಗಿ ಸಮಾಜವನ್ನು ಸುಧಾರಣೆಗೆ ಶ್ರಮಿಸಿದ್ದರು ಎಂದು ಸ್ಮರಿಸಿದರು. ಚಂದನಾ ವೈ.ನೀಲಪ್ಪ ಕಾರ್ಯನಿರತ ಪತ್ರಕರ್ತರ ಸಂಘದ ತಾಲೂಕು ಅಧ್ಯಕ್ಷ ಶಾಂಭವಿ ನಾಗರಾಜ್, ಉಪಾಧ್ಯಕ್ಷ ಎಚ್.ಸುಧಾಕರ, ಪ್ರಧಾನ ಕಾರ್ಯದರ್ಶಿ ಎಚ್.ಸಿ.ಕೀರ್ತಿಕುಮಾರ್, ಬಿ.ಎಂ.ಸಿದ್ದಲಿಂಗಸ್ವಾಮಿ, ಶೇಖರ್ ಗೌಡ ಪಾಟೀಲ್, ಬಿ.ಎಂ. ಚಂದ್ರಶೇಖರ್, ಆರ್.ಮಂಜುನಾಥ್, ಸುಕುಮುನಿಸ್ವಾಮಿ, ಜಿ.ಕೆ.ಶಂಕರಪ್ಪ, ಅಜೀಜ್ ಉರ್ ರಹಮಾನ್ ಇದ್ದರು.

# 5.37 ಲಕ್ಷ ರೂ. ಮೌಲ್ಯದ ಸ್ವತ್ತು ಕಳ್ಳತನ

**ದಾವಣಗೆರೆ:** ವಿನಾಯಕ ಬಡಾವಣೆಯ ವಿಎಂಜಿ ಲೇ ಔಟ್‌ನ ಮನೆಯೊಂದರ ಇಂಟರ್‌ಲಾಕ್ ಮುರಿದು ಚಿನ್ನ-ಬೆಳ್ಳಿ ಆಭರಣ ಸೇರಿ 15.37 ಲಕ್ಷ ರೂ. ಮೌಲ್ಯದ ಸ್ವತ್ತು ಕಳವು ಮಾಡಿದ್ದ ರಾಜಸ್ಥಾನ ಮೂಲದ ಮೂವರು ಅಂತಾರಾಜ್ಯ ಆರೋಪಿಗಳನ್ನು ವಿದ್ಯಾನಗರ ಠಾಣೆ ಪೊಲೀಸರು ಬಂಧಿಸಿದ್ದಾರೆ. ರಾಜಸ್ಥಾನದ ಬಿಯಾವರ್ ಜಿಲ್ಲೆ ಕಾಣೆಚಾ ಗ್ರಾಮದ ಚಾಲಕ ಶ್ಯಾಮ್‌ಸಿಂಗ್, ಕಾಬ್ರಾ ಗ್ರಾಮದ ಬಟ್ಟೆ ಅಂಗಡಿ ವ್ಯಾಪಾರಿ ಕವರ್ ಪಾಲ್, ಗೋಹಾನಾ ಗ್ರಾಮದ ಚಾಲಕ ಪ್ರತಾಪಸಿಂಹ ಬಂಧಿತ ಆರೋಪಿಗಳು. ಆ.30ರಂದು ಮನೆಗೆ ಬೀಗ ಹಾಕಿಕೊಂಡು ಬೆಂಗಳೂರಿಗೆ ತೆರಳಿದ್ದ ರಂಗನಾಥ್, ಮರುದಿನ ವಾಪಸಾದಾಗ ಕಳ್ಳತನ ನಡೆದಿದ್ದು ಗೊತ್ತಾಗಿದೆ. ವಿದ್ಯಾನಗರ ಠಾಣೆಗೆ ದೂರು ನೀಡಿದ್ದರು. ಇನ್ಸಪೆಕ್ಟರ್ ವೈ.ಎಸ್. ಶಿಲ್ಪಾ ನೇತೃತ್ವದಲ್ಲಿ ಪಿಎಸ್ಐ ರೂಪಾ ತೆಂಬದ್ ಹಾಗೂ ಅವರ ಸಿಬ್ಬಂದಿ ಆರೋಪಿಗಳನ್ನು ಬಂಧಿಸಿದೆ. ಆರೋಪಿಗಳು ಹರಿಹರ ನಗರ ಠಾಣೆ, ಹಳಿಯಾಳ, ಧಾರವಾಡ, ತುಮಕೂರು ಬಡಾವಣೆ,

# ಹುತಾತ್ಮರ ದಿನ" ಆಚರಣೆ

**ಚಿಕ್ಕಮಗಳೂರು:** ಸೆಪ್ಟೆಂಬರ್ 11 ರಂದು ಶ್ರೀನಿವಾಸನಗರದ ದಿ॥ ಪಿ. ಶ್ರೀನಿವಾಸ್, ಉಪಅರಣ್ಯ ಸಂರಕ್ಷಣಾಧಿಕಾರಿ ಅವರ ಪ್ರತಿಮೆ ಹತ್ತಿರ ಬೆಳಗ್ಗೆ 8:45 ಗಂಟೆಗೆ "ರಾಷ್ಟ್ರೀಯ ಅರಣ್ಯ ಹುತಾತ್ಮರ ದಿನ" ವನ್ನು ಹಮ್ಮಿಕೊಳ್ಳಲಾಗಿದೆ.

## ನಿಧನ ಸುದ್ದಿಗಳು

### ಮೊಹಮ್ಮದ್ ಅಮೀರ್ ನಿಧನ

**ದಾವಣಗೆರೆ:** ಸಿಟಿ ಎಂ.ಸಿ.ಸಿ. 'ಎ' ಬ್ಲಾಕ್, ಆಶ್ರಯ ಆಸ್ಪತ್ರೆ ಹತ್ತಿರದ ನಿವಾಸಿ ನಿವೃತ್ತ ಕಾರ್ಯನಿರ್ವಾಹಕ ಇಂಜಿನಿಯರ್‌ಮೊಹಮ್ಮದ್ ಅಮೀರ್ ಇವರು ದಿನಾಂಕ 7.9.2025ರಭಾನುವಾರ ರಾತ್ರಿ 10.30ಕ್ಕೆ ನಿಧನರಾದರೆಂದು ತಿಳಿಸಲು ವಿಷಾದಿಸುತ್ತೇವೆ.ಮೃತರಿಗೆ 86 ವರ್ಷ ವಯಸ್ಸಾಗಿತ್ತು.ಪತ್ನಿ, ಓರ್ವ ಪುತ್ರ, ಮೂವರು ಪುತ್ರಿಯರು ಹಾಗೂ ಅಪಾರ ಬಂಧು-ಬಳಗವನ್ನು ಅಗಲಿರುವ ಮೃತರ ಅಂತ್ಯಕ್ರಿಯೆಯನ್ನು ದಿನಾಂಕ 08.09.2025ರ ಸೋಮವಾರ ಮಧ್ಯಾಹ್ನ 2 ಗಂಟೆಗೆ ನಗರದ ಪಿ.ಬಿ.ರಸ್ತೆಯ ಹಳೇ ಖಬರಸ್ತಾನದಲ್ಲಿ ನೆರವೇರಿಸಲಾಯಿತು. ದುಃಖತಪ್ತರು : ಹುಸೇನ್ ಟಿ.ಎಂ., ಜಿಎಂ, ಖಖಅಔಓ, ದಾವಣಗೆರೆ ಸಹೋದರರು, ಸಹೋದರಿಯರು ಮತ್ತು ಕುಟುಂಬದವರು

### ಚಿ. ರಾಮಕುಮಾರ್ ನಿಧನ

**ದಾವಣಗೆರೆ:** ಸಿವಿಲ್ ಇಂಜಿನಿಯರ್ ಎನ್. ಸೋಮೇಶ್ ಮತ್ತು ಶ್ರೀಮತಿ ಯೋಗಿತಾ ದಂಪತಿ ಪುತ್ರ ದಿನಾಂಕ 07.09.2025ರ ಭಾನುವಾರ ಬೆಳಿಗ್ಗೆ 9 ಗಂಟೆಗೆ ಅಕಾಲಿಕವಾಗಿ ನಿಧನ ಹೊಂದಿರುವುದಾಗಿ ತಿಳಿಸಲು ವಿಷಾದಿಸುತ್ತೇವೆ. ಮೃತ ರಾಮಕುಮಾರ್‌ಗೆ 10 ವರ್ಷ ವಯಸ್ಸಾಗಿತ್ತು.ಮೃತ ರಾಮಕುಮಾರ್, ಹರಿಹರ ತಾಲ್ಲೂಕಿನ ರಾಜನಹಳ್ಳಿ ಗ್ರಾಮದ ಡಾ. ಎನ್. ತಿಮ್ಮಪ್ಪ ಮತ್ತು ನಗರ ದೇವತೆ ಶ್ರೀ ದುರ್ಗಾಂಬಿಕಾ ದೇವಸ್ಥಾನದ ಧರ್ಮದರ್ಶಿಗಳಾಗಿದ್ದ ದಿ. ಶ್ರೀ ಗೌಡರ ರೇವಣಪ್ಪ ಅವರ ಮೊಮ್ಮಗ.ರಾಮಕುಮಾರ್ ಪಾರ್ಥಿವ ಶರೀರರದ ಅಂತ್ಯಕ್ರಿಯೆಯನ್ನು ದಿನಾಂಕ 08.09.2025ರ ಸೋಮವಾರ ಬೆಳಿಗ್ಗೆ 11 ಗಂಟೆಗೆ ಸ್ವಗ್ರಾಮ ರಾಜನಹಳ್ಳಿಯಲ್ಲಿ ನೆರವೇರಿಸಲಾಯಿತು.

## ಮತದಾರರ ಗುರುತು ಸಾಬೀತಿಗೆ ಬೇಕಾದ 11 ದಾಖಲೆಗಳ ಪಟ್ಟಿಗೆ ಆಧಾರ್ ಕೂಡಾ ಸೇರ್ಪಡೆ – 'ಸುಪ್ರೀಂ' ಮಹತ್ವದ ಆದೇಶ




**ನವದೆಹಲಿ:** ಮಹತ್ವದ ಬೆಳವಣಿಗೆಯೊಂದರಲ್ಲಿ ಆಧಾರ್ ಕಾರ್ಡ್ ಅನ್ನು ಮತದಾರರರ ಗುರುತಿಗೆ ಬೇಕಾಗುವ ಅಗತ್ಯ ದಾಖಲೆಗಳಲ್ಲಿ 12ನೇ ದಾಖಲೆಯಾಗಿ ಪರಿಗಣಿಸಬಹುದು ಎಂದು ಸುಪ್ರೀಂ ಕೋರ್ಟ್ ಹೇಳಿದೆ. ಬಿಹಾರದಲ್ಲಿ ಇತ್ತೀಚೆಗೆ ದೊಡ್ಡ ಚರ್ಚೆಗೆ ಕಾರಣವಾಗಿದ್ದ ಮತದಾರರ ಪಟ್ಟಿಯ ವಿಶೇಷ ತೀವ್ರ ತಸಾಪಣೆ (ಎಸ್.ಐ.ಆರ್.) ಸಂದರ್ಭದಲ್ಲಿ ಆಧಾರ್ ಕಾರ್ಡ್ ಅನ್ನು ಮತದಾರರ ಗುರುತಿಗಾಗಿ ನೀಡಲಾಗುವ ದಾಖಲೆ ಎಂದು ಪರಿಗಣಿಸಲಾಗದು ಎಂದು ಕೇಂದ್ರ ಚುನಾವಣಾ ಆಯೋಗ ಹೇಳಿತ್ತು. ಆ ವಿಚಾರ ಸುಪ್ರೀಂ ಕೋರ್ಟ್ ಮೆಟ್ಟಿಲೇರಿತ್ತು.

ಆ ಕುರಿತಂತೆ ವಿಚಾರಣೆ ನಡೆಸಿದ್ದ ಸುಪ್ರೀಂಕೋರ್ಟ್ ಮತದಾರರ ಗುರುತಿಗಾಗಿ ಕೇಂದ್ರ ಚುನಾವಣಾ ಆಯೋಗವು 11 ದಾಖಲೆಗಳನ್ನು ಕೇಳುತ್ತದೆ. ಅದ–ಕ್ಕೊಂದು ಪಟ್ಟಿಯನ್ನೇ ಸಿದ್ಧಪಡಿಸಲಾಗಿದೆ. ಆ ಪಟ್ಟಿಯಲ್ಲಿ 12ನೇ ದಾಖಲೆಯಾಗಿ ಆಧಾರ್ ಕಾರ್ಡ್ ಸೇರಿಸಲಾಗಿದೆ. ಅಂದರೆ, ಮತದಾರರು ತಮ್ಮ ದೃಢೀಕರಣಕ್ಕಾಗಿ ಆಧಾರ್ ಕಾರ್ಡ್ ಸಲ್ಲಿಸಬಹುದು ಎಂದು ನ್ಯಾಯಪೀಠ ತಿಳಿಸಿದೆ.

ಬಿಹಾರದಲ್ಲಿ ಎಸ್‌ಐಆರ್ ಪ್ರಕ್ರಿಯೆ ಶುರು ಮಾಡಿದಾಗ ಕೇಂದ್ರ ಚುನಾವಣಾ ಆಯೋಗ ಆಧಾರ್ ಕಾರ್ಡ್ ಹಾಗೂ ರೇಷನ್ ಕಾರ್ಡ್ ಗಳನ್ನು ಮತದಾರರ ವಿಳಾಸ ದೃಢೀಕರಣ ಅಥವಾ ಫೋಟೋ ಗುರುತಿನ ಪತ್ರಗಳನ್ನಾಗಿ ಪರಿಗಣಿಸುವುದಿಲ್ಲ ಎಂದು ಹೇಳಿತ್ತು. ಆದರೆ, ಅದರ ವಿರುದ್ಧ ನ್ಯಾಯಾಲಯದಲ್ಲಿ ಕೆಲವು ಕೇಸ್ ಗಳು ದಾಖಲಾಗಿದ್ದವು. ಹಲವಾರು ಜನರು ಸುಪ್ರೀಂಕೋರ್ಟ್ ಮೊರೆ ಹೋಗಿದ್ದರು.

## ಮದ್ದೂರಿನಲ್ಲಿ ಗಣೇಶ ವಿಸರ್ಜನೆ ವೇಳೆ ಗಲಾಟೆ; ಪ್ರತಿಭಟನೆ ನಡೆಸದಂತೆ ಸಚಿವ ಪರಮೇಶ್ವರ್ ಮನವಿ



**ಮಂಡ್ಯ:** ಮದ್ದೂರು ಪಟ್ಟಣದ ರಾಮ್ ರಹೀಂ ನಗರದಲ್ಲಿ ಭಾನುವಾರ ರಾತ್ರಿ ಗಣೇಶ ಮೂರ್ತಿ ವಿಸರ್ಜನೆ ವೇಳೆ ಎರಡು ಗುಂಪುಗಳ ನಡುವೆ ಕಲ್ಲುತೂರಾಟ ನಡೆದ ವಿಚಾರದ ಬಗ್ಗೆ ತುಮಕೂರಿನಲ್ಲಿ ಗೃಹ ಸಚಿವ ಜಿ. ಪರಮೇಶ್ವರ್ ಮಾತನಾಡಿ, ಪ್ರಕರಣದಲ್ಲಿ ಇಪ್ಪತ್ತಕ್ಕೂ ಹೆಚ್ಚು ಜನರನ್ನು ಬಂಧಿಸಲಾಗಿದೆ ಎಂದು ಹೇಳಿದರು.

ಸೆ.7ರ ರಾತ್ರಿ ಗಣೇಶ ಬಿಡುವಾಗ ಒಂದಿಷ್ಟು ಕಲ್ಲು ತೂರಾಟ ಆಗಿದೆ. ಅದ್ರಲ್ಲಿ ಸುಮಾರು 20ಕ್ಕೂ ಹೆಚ್ಚು ಮಂದಿ ಬಂಧಿಸಿದ್ದಾರೆ. ಈ ಮಧ್ಯದಲ್ಲಿ ಇಂದು ಬೆಳಿಗ್ಗೆ ಹಿಂದೂ ಸಂಘಟನೆಯವರು ಮೆರವಣಿಗೆ ಮಾಡಿದ್ದಾರೆ. ಮೆರವಣಿಗೆ ವೇಳೆ ರೋಡ್ ಬ್ಲಾಕ್ ಮಾಡಿದ್ದಾರೆ. ಅದನ್ನು ತೆರವು ಮಾಡಲು ಪೊಲೀಸರು ಪ್ರಯತ್ನಿಸುತಿದ್ದಾರೆ. ನಾನು ಕೂಡ ಅಪೀಲ್ ಮಾಡ್ತೀನಿ. ಮದ್ದೂರಿನಲ್ಲಿ ಪ್ರತಿಭಟನೆ, ಬಂದ್ ಎಲ್ಲ ಬೇಡ. ಅಹಿತಕರ ಘಟನೆ ನಡೆಯದಂತೆ ನೋಡಿಕೊಳ್ಳಿ ಎಂದು ಸಂಘಟನೆಯವರಿಗೆ ಕೇಳಿಕೊಳ್ಳುತ್ತೇನೆ ಎಂದು ಪರಮೇಶ್ವರ್ ಅವರು ಹೇಳಿದರು.

ಇನ್ನು ಮದ್ದೂರಿನಲ್ಲಿ ಪ್ರತಿಭಟನಕಾರರ ಮೇಲೆ ಲಾಠಿ ಚಾರ್ಜ್ ಮಾಡಿದ ವಿಚಾರವಾಗಿ ಮಾತನಾಡಿ, ಶಾಂತಿಯನ್ನು ಕಾಪಾಡುವಾಗ ಒಂದು ಹಂತದವರೆಗೂ ಪೊಲೀಸರು ನೋಡ್ತಾರೆ. ಆ ಹಂತ ಮೀರಿ ಹೋದಾಗ ಪೊಲೀಸರು ಅವರದ್ದೇ ಆದ ಕ್ರಮ ಕೈಗೊಳ್ಳುತ್ತಾರೆ. ಅದು ಏನು ಬೇಕಾದರೂ ಆಗಬಹುದು. ಅದು ಅವರು ಬೆಳಿಗ್ಗೆ ಲಾಠಿ ಚಾರ್ಜ್ ಮಾಡಿದ್ದಾರೆ. ಕಲ್ಲು ತೂರಾಟ ಪೂರ್ವ ನಿಯೋಜಿತ ಕೃತ್ಯ ಸಚಿವ ಚಲುವರಾಯಸ್ವಾಮಿ ಹೇಳಿಕೆ ವಿಚಾರವಾಗಿ ಮಾತನಾಡಿ, ಅದು ಪೂರ್ವನಿಯೋಜಿತ ಕೃತ್ಯ ಅಂತ ಯಾರೋ ಹೇಳಬಹುದು. ಆದರೆ, ಅದನ್ನು ನಾವು ವೇರಿಫೈ ಮಾಡಬೇಕು.

## 'ನಾನು ಅನಿಲ್ ಕುಂಬ್ಳೆ ಮುಂದೆ ಅತ್ತಿದ್ದೆ': ಪಂಜಾಬ್ ಕಿಂಗ್ಸ್ ತಂಡ ಕೆಟ್ಟದಾಗಿ ನಡೆಸಿಕೊಂಡ ಬಗ್ಗೆ ಕ್ರಿಸ್ ಗೇಲ್ ಹೊಸಬಾಂಬ್!




ಹಿರಿಯ ಆಟಗಾರನಾಗಿ ನನಗೆ ಸಿಗಬೇಕಾಗಿದ್ದ ಬೆಲೆ ಸಿಗಲಿಲ್ಲ. ನನ್ನನ್ನು ತೀರಾ ಮಕ್ಕಳಂತೆ ನಡೆಸಿಕೊಂಡರು. ಈ ವೇಳೆ ಜೀವನದಲ್ಲಿ ಮೊದಲ ಬಾರಿಗೆ ನಾನು ಖಿನ್ನತೆಗೆ ಒಳಗಾಗುವಂತೆ ಭಾಸವಾಯಿತು. ನಾನು ಅನಿಲ್ ಕುಂಬ್ಳೆ ಅವರೊಂದಿಗೆ ಮಾತನಾಡುವಾಗ ಅತ್ತೆ." – ಇದು ಯುನಿವರ್ಸಲ್ ಬಾಸ್ ಎಂದೇ ಖ್ಯಾತರಾಗಿರುವ ಕ್ರಿಸ್ ಗೇಲ್ ಅವರು ಪಂಜಾಬ್ ಕಿಂಗ್ಸ್ ತಂಡದಲ್ಲಿ ತಮಗಾದ ಬೇಸರದ ಬಗ್ಗೆ ನೀಡಿರುವ ಹೇಳಿಕೆ. ತಂಡವು ಅವರನ್ನು ಗೌರವದಿಂದ ನಡೆಸಿಕೊಳ್ಳಲಿಲ್ಲ ಎಂದು ಹೇಳಿದ್ದಾರೆ. ಇದರಿಂದ ತಾನು ಖಿನ್ನತೆಗೆ ಒಳಗಾಗುವ ಹಂತಕ್ಕೆ ತಲುಪಿದ್ದೆ ಎಂದು ಗೇಲ್ ಹೇಳಿದ್ದಾರೆ.

ಕ್ರಿಸ್ ಗೇಲ್ ಅವರು ಐಪಿಎಲ್ ನಲ್ಲಿ 2018ರಿಂದ 2021ರವರೆಗೆ ಪಂಜಾಬ್ ಕಿಂಗ್ಸ್ ತಂಡದ ಪರವಾಗಿ ಆಡಿದ್ದರು. ಆದರೆ ಆ ವೇಳೆ ತಂಡದ ಮ್ಯಾನೇಜ್ ಮೆಂಟ್ ತನ್ನನ್ನು ಸರಿಯಾಗಿ ನಡೆಸಿಕೊಳ್ಳಲಿಲ್ಲ ಎಂದು ಅವರು ದೂರಿದ್ದಾರೆ. ಆಗ ಕನ್ನಡಿಗರಾದ ಅನಿಲ್ ಕುಂಬ್ಳೆ ಅವರು ತಂಡದ ಮೆಂಟರ್ ಆಗಿದ್ದರೆ, ಕೆಎಲ್ ರಾಹುಲ್ ಅವರು ತಂಡದ ನಾಯಕರಾಗಿದ್ದರು ಎಂಬುದು ಗಮನಾರ್ಹ ಸಂಗತಿಯಾಗಿದೆ.

# ಮದ್ದೂರು ಗಲಾಟೆಯಲ್ಲಿ ಹಿಂದೂ, ಮುಸ್ಲಿಂ ನೋಡಲ್ಲ, ತಪ್ಪು ಮಾಡಿದವರ ವಿರುದ್ಧ ಕ್ರಮ: ಸಿದ್ದರಾಮಯ್ಯ



**ಬೆಂಗಳೂರು:** ಮದ್ದೂರಿನಲ್ಲಿ ಗಣೇಶ ವಿಸರ್ಜನೆ ವೇಳೆ ನಡೆದ ಗಲಾಟೆಯಲ್ಲಿ ಈವರೆಗೆ 21 ಮಂದಿ ಬಂಧನ ಆಗಿದೆ. ಇಂತಹ ಘಟನೆ ನಡೆದಾಗ ಹಿಂದೂ, ಮುಸ್ಲಿಂ ನೋಡುವುದಿಲ್ಲ. ಯಾರೇ ತಪ್ಪು ಮಾಡಿದರೂ ಅಂತವರ ವಿರುದ್ಧ ಕ್ರಮ ಆಗಲಿದೆ ಎಂದು ಸಿಎಂ ಸಿದ್ದರಾಮಯ್ಯ ಹೇಳಿದರು.

ಸಿಎಂ ಗೃಹ ಕಚೇರಿ ಕೃಷ್ಣಾದಲ್ಲಿ ನಡೆದ ಸಭೆಯ ಬಳಿಕ ಅವರು ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿ, ?ಮಸೀದಿ ಮುಂದೆ ಮೆರವಣಿಗೆ ಹೋಗುವಾಗ ಗಲಾಟೆ ಆಗಿದೆ. ಪೊಲೀಸರು ಲಘು ಲಾಠಿ ಪ್ರಹಾರ ಮಾಡಿದ್ದಾರೆ. ಸ್ಥಳದಲ್ಲಿ ಗುಂಪುಕಟ್ಟಿಕೊಂಡು ಗಲಾಟೆ ಮಾಡಲು ಶುರುಮಾಡಿದ್ದರು. ಪೊಲೀಸರು ಎಚ್ಚರಿ–ಕೆ ನೀಡಿದ್ದರೂ ಹೋಗಿಲ್ಲ. ಹಾಗಾಗಿ ಲಘು ಲಾಠಿ ಚಾರ್ಜ್ ಮಾಡಲಾಗಿದೆ. 21 ಮಂದಿ ಬಂಧನ ಆಗಿದೆ? ಎಂದು ವಿವರಿಸಿದರು.

ಯಾರು ತಪ್ಪು ಮಾಡಿದರೂ ಹಿಂದೂ, ಮುಸ್ಲಿಂ ಯಾರೇ ಮಾಡಲಿ ಕಾನೂನು ರೀತಿಯಲ್ಲಿ ಕ್ರಮ ಕೈಗೊಂಡಿದ್ದೇವೆ. ರಾಜ್ಯದಲ್ಲಿ ಎಲ್ಲೂ ಅಹಿತಕರ ಘಟನೆ ನಡೆದಿಲ್ಲ. ಮದ್ದೂರಿನಲ್ಲಿ ನಡೆದಿದೆ. ಈ ವರ್ಷ ನಾಗಮಂಡಲದಲ್ಲಿ ಯಾವುದೇ ಅಹಿತರ ಘಟನೆ ನಡೆದಿಲ್ಲ ಎಂದರು.

ಬಿಜೆಪಿ ಆರೋಪಕ್ಕೆ ಇದೇ ವೇಳೆ ಪ್ರತಿಕ್ರಿಯೆ ನೀಡಿ, ಬೇರೆ ಎಲ್ಲಿ ಗಲಾಟೆ ಆಗಿದೆ? ಸಮಾಜದಲ್ಲಿ ನೆಮ್ಮದಿಯನ್ನು ಬಿಜೆಪಿಯವರೇ ಕೆಡಿಸುವುದು. ಜಿಲ್ಲಾ ಉಸ್ತುವಾರಿ ಸಚಿವರು ಮದ್ದೂರಿಗೆ ಹೋಗುತ್ತಾರೆ. ಅವರು ಈ ಬಗ್ಗೆ ವರದಿಯನ್ನು ನೀಡುತ್ತಾರೆ ಎಂದು ತಿಳಿಸಿದರು.

ಮದ್ದೂರಿನಲ್ಲಿ ನಡೆದ ಘಟನೆಯಲ್ಲಿ ಪೊಲೀಸರು ತಪ್ಪು ಮಾಡಿಲ್ಲ. ಕಾನೂನು ಪ್ರಕಾರ ನಡೆದುಕೊಂಡಿದ್ದಾರೆ. ಬಿಜೆಪಿ, ಜೆಡಿಎಸ್ ಅಥವಾ ಕಾಂಗ್ರೆಸ್ ತಪ್ಪು ಮಾಡಿದರೂ ತಪ್ಪು ತಪ್ಪೇ.

ಬಿಜೆಪಿಗರು ಪ್ರಚೋದನೆ ಮಾಡುವುದರಲ್ಲಿ, ನೆಮ್ಮದಿ ಹಾಳು ಮಾಡುವುದರಲ್ಲಿ ನಿಸ್ಸೀಮರು. ಅನಗತ್ಯವಾಗಿ ಗುಂಪು ಸೇರಿ ಗಲಾಟೆ ಮಾಡುವುದು ಯಾರು? ಇದರ ಹಿಂದೆ ಯಾರೇ ಇದ್ದರೂ ಕಠಿಣ ಕ್ರಮ ಕೈಗೊಳ್ಳುತ್ತೇವೆ ಎಂದರು. ಸಂಪೂರ್ಣ ವರದಿ ಬಂದ ಬಳಿಕ ಕ್ರಮ ಕೈಗೊಳ್ಳುತ್ತೇವೆ ಎಂದು ತಿಳಿಸಿದರು.

ಘಟನೆ ನಿನ್ನೆ ನಡೆದಿತ್ತು. ಈಗಾಗಲೇ 21 ಮಂದಿ ಬಂಧನ ಆಗಿದೆ. ತಪ್ಪು ಮಾಡಿದವರ ವಿರುದ್ಧ ಕ್ರಮ ಆಗಿದೆ. ಪ್ರತಿಭಟನೆ ನಡೆಸಲಿ. ಆದರೆ ಪ್ರಚೋದನೆ ಮಾಡುವ ಕೆಲಸವನ್ನು ಬಿಜೆಪಿ, ಜೆಡಿಎಸ್ ಮಾಡಬಾರದು ಎಂದು ಜಿಲ್ಲಾ ಉಸ್ತುವಾರಿ ಸಚಿವ ಚಲುವರಾಯ ಸ್ವಾಮಿ ಹೇಳಿದರು. ಬಿಜೆಪಿ ಪಕ್ಷದವರಿಗೆ ಮತೀಯವಾದ ಬಿಟ್ಟರೆ ಬೇರೆ ಯಾವುದೇ ಇಶ್ಯೂ ಇಲ್ಲ. ಏನಾದ್ರೂ ಮಾಡಿ ಪಕ್ಷ ಕಟ್ಟಲು ಇದನ್ನು ಉಪಯೋಗಿಸುತ್ತಿದ್ದಾರೆ. ಮತೀಯವಾದವನ್ನು ಮುಂದಿಟ್ಟುಕೊಂಡು ಕಾಂಗ್ರೆಸ್ ಪಕ್ಷ ಕಟ್ಟುವುದಿಲ್ಲ ಎಂದರು.

ಕಲ್ಲು ತೂರಾಟ ಪ್ರಕರಣಕ್ಕೆ ಸಂಬಂಧಿಸಿ ಹಿಂದೂ ಸಂಘಟನೆಗಳು ಪ್ರತಿಭಟನೆ ಮಾಡುತ್ತಿದ್ದರು. ಪೊಲೀಸರು ಲಾಠಿ ಚಾರ್ಜ್ ಮಾಡಿದ್ದರೆ. ಪರಿಸ್ಥಿತಿ ಕೈ ಮೀರಿದ್ರೆ ಪೊಲೀಸರು ಅವರದ್ದೇ ಆದ ಕ್ರಮ ಕೈಗೊಳ್ತಾರೆ. ಅಹಿತಕರ ಘಟನೆ ನಡೆಯದಂತೆ ನೋಡಿಕೊಳ್ಳಿ, ಪ್ರತಿಭಟನೆ ಮಾಡಬೇಡಿ ಎಂದು ಗೃಹಸಚಿವ ಪರಮೇಶ್ವರ್ ಹೇಳಿದರು.

# ಮೇಲ್ಮನೆಯಲ್ಲಿ 'ಕೈ' ಮೇಲುಗೈ, ಹೊರಟ್ಟಿ ಸಭಾಪತಿ ಸ್ಥಾನಕ್ಕೆ ಕುತ್ತು: ಕಾಂಗ್ರೆಸ್ ಮುಂದಿನ ಹೆಜ್ಜೆ ಏನು?



**ಬೆಂಗಳೂರು:** ವಿಧಾನಪರಿಷತ್ ಗೆ ನಾಲ್ಕು ಸದಸ್ಯರನ್ನು ನಾಮನಿರ್ದೇಶನ ಮಾಡುವ ಮೂಲಕ ಕಾಂಗ್ರೆಸ್ ತನ್ನ ಬಲವನ್ನು ವೃದ್ಧಿಸಿಕೊಂಡಿದೆ. ಪರಿಷತ್ ನಲ್ಲಿ ಸಂಖ್ಯಾ ಬಲ ಕಡಿಮೆ ಇದ್ದ ಕಾರಣದಿಂದಾಗಿ ಆಡಳಿತ ಪಕ್ಷವಾದರೂ ಕಾಂಗ್ರೆಸ್ ಹಿನ್ನಡೆಯನ್ನು ಅನುಭವಿಸಿತ್ತು. ಆದರೆ ಇದೀಗ 37 ಕ್ಕೆ ಸಂಖ್ಯಾ ಬಲ ಹೆಚ್ಚಿಸಿಕೊಂಡಿದೆ. ಈ ಮೂಲಕ ಸಭಾಪತಿ ಬದಲಾವಣೆಗೆ ಕಾಂಗ್ರೆಸ್ ಮುಂದಾಗುತ್ತಾ? ಎಂಬ ಕುತೂಹಲ ಕೆರಳಿಸಿದೆ.

75 ಸದಸ್ಯ ಬಲದ ವಿಧಾನಪರಿಷತ್ ನಲ್ಲಿ ಬಿಜೆಪಿ ಮತ್ತು ಜೆಡಿಎಸ್ ಮೈತ್ರಿಯಿಂದ ವಿಪಕ್ಷಗಳ ಬಲ ಹೆಚ್ಚಿದ್ದವು. ಇದರಿಂದಾಗಿ ವಿಧಾನಸಭೆಯಲ್ಲಿ ವಿಧೇಯಕ ಮಂಡನೆಯಾಗಿ ಅಂಗೀಕಾರಗೊಂಡರೂ ಪರಿಷತ್ ನಲ್ಲಿ ಹಿನ್ನಡೆಯಾಗುತ್ತಿತ್ತು. ಸಭಾಪತಿ ಹಾಗೂ ಉಪ ಸಭಾಪತಿ ಸ್ಥಾನಗಳು ಬಿಜೆಪಿಯ ಬಳಿ ಇರುವುದರಿಂದ ಆಡಳಿತದಲ್ಲಿದ್ದರೂ ಕಾಂಗ್ರೆಸ್ ಗೆ ಪರಿಷತ್ ಬಲಷ್ಠವಾಗಲು ಸಾಧ್ಯವರಲಿಲ್ಲ.

ಆದರೆ ಇದೀಗ ನಾಲ್ವರು ನಾಮನಿರ್ದೇಶಿತ ಸದಸ್ಯರನ್ನು ಪರಿಷತ್ ಗೆ ನೇಮಕ ಮಾಡಲಾಗಿದೆ. ಈ ಮೂಲಕ ಕಾಂಗ್ರೆಸ್ ಸಂಖ್ಯಾ ಬಲ 37, ಬಿಜೆಪಿ, 29, ಜೆಡಿಎಸ್ 7 ಪಕ್ಷೇತರ 1 ಇರಲಿದೆ. ಈ ಮೂಲಕ ಕಾಂಗ್ರೆಸ್ ವಿಧಾನಪರಿಷತ್ ನಲ್ಲೂ ಮೇಲುಗೈ ಸಾಧಿಸಿದೆ.

ವಿಧಾನಪರಿಷತ್ ನಲ್ಲಿ ಕಾಂಗ್ರೆಸ್ ಮೇಲುಗೈ ಸಾಧಿಸಿರುವ ಹಿನ್ನೆಲೆಯಲ್ಲಿ ಸಭಾಪತಿ ಸ್ಥಾನ ಬದಲಾವಣೆ ಆಗಲಿದ್ಯಾ ಎಂಬ ಕುತೂಹಲ ಕೆರಳಿಸಿದೆ. ಸದ್ಯ ಬಸವರಾಜ ಹೊರಟ್ಟಿ ಸಭಾಪತಿ ಆಗಿದ್ದಾರೆ. ಬಿಜೆಪಿಗೆ ಸೇರ್ಪಡೆ ಆಗಿದ್ದ ಅವರನ್ನು ಪರಿಷತ್ ಸಭಾಪತಿ ಆಗಿ ನೇಮಕ ಮಾಡಲಾಗಿತ್ತು. ಉಪ ಸಭಾಪತಿ ಆಗಿ ಬಿಜೆಪಿಯ ಎಂಕೆ ಪ್ರಾಣೇಶ್ ಇದ್ದಾ–ರೆ.

ಇದೀಗ ಸಭಾಪತಿ ಸ್ಥಾನವನ್ನು ಬದಲಾವಣೆ ಮಾಡುವ ಸಾಧ್ಯತೆ ಹೆಚ್ಚಾಗಿದೆ. ಹೊರಟ್ಟಿ ಎಲ್ಲಾ ಪಕ್ಷಗಳ ನಾಯಕರ ಜೊತೆಗೆ ಉತ್ತಮ ಭಾಂಧವ್ಯ ಹೊಂದಿದ್ದಾರೆ. ಪರಿಷತ್ ನಲ್ಲಿ ತಮ್ಮ ಜವಾಬ್ದಾರಿಯನ್ನು ಸಭಾಪತಿಯಾಗಿ ಸೂಕ್ತ ರೀತಿಯಲ್ಲೇ ನಿಭಾಯಿಸಿದ್ದಾರೆ. ಈ ಮೂಲಕ ನಿಸ್ಪಕ್ಷಪಾತಿಯಾಗಿ ನಡೆದು–ಕೊಂಡಿದ್ದಾರೆ ಎಂಬ ಅಭಿಪ್ರಾಯ ಇದೆ.

ಹೀಗಿದ್ದರೂ ಮುಂದಿನ ಅಧಿವೇಶನದ ಸಂದರ್ಭದಲ್ಲಿ ಸಭಾಪತಿ ಮತ್ತು ಉಪ ಸಭಾಪತಿ ಸ್ಥಾನವನ್ನು ಕಾಂಗ್ರೆಸ್ ಅಲಂಕರಿಸುವ ಸಾಧ್ಯತೆ ಇದೆ. ಒಂದು ವೇಳೆ ಈ ನಿರ್ಧಾರದ ಅಧಿಕೃತ ಮಾಹಿತಿ ಹೊರಟ್ಟಿ ಅವರಿಗೆ ಸಿಕ್ಕಲ್ಲಿ ಅವರು ತಮ್ಮ ಸ್ಥಾನಕ್ಕೆ ರಾಜೀನಾಮೆ ಕೊಡುವ ಸಾಧ್ಯತೆ ದಟ್ಟವಾಗಿದೆ.

ಮೇಲ್ಮನೆ ನಾಲ್ಕು ಸ್ಥಾನಕ್ಕೆ ಕಾಂಗ್ರೆಸ್ ನಾಮನಿರ್ದೇಶನ ಮಾಡುವ ಮೂಲಕ ಸದಸ್ಯರನ್ನು ನೇಮಕ ಮಾಡಿದೆ. ಕೆ ಶಿವಕುಮಾರ್, ರಮೇಶ್ ಬಾಬು, ಜಕ್ಕಪ್ಪವರ ಹಾಗೂ ಆರತಿ ಕೃಷ್ಣ ಅವರನ್ನು ನೇಮಕ ಮಾಡಲಾಗಿದೆ. ಈ ಸ್ಥಾನಕ್ಕೆ ಸಾಕಷ್ಟು ಮಂದಿ ಆಕಾಂಕ್ಷಿಗಳು ಇದ್ದರು. ಆದರೆ ಅಂತಿಮವಾಗಿ ಈ ನಾಲ್ವರಿಗೆ ಈ ಬಾರಿ ಅವಕಾಶ ನೀಡಲಾಗಿದೆ. ನಾಲ್ವರು ಸದಸ್ಯರ ಪೈಕಿ ರಮೇಶ್ ಬಾಬು ಅವರ ಅಧಿಕಾರ ಅವಧಿ 2026ರ ಜುಲೈ 21 ರವರೆಗೆ ಇರಲಿದೆ. ಉಳಿದವರಿಗೆ ಆರು ವರ್ಷಗಳ ಕಾಲ ಪರಿಷತ್ ಸದಸ್ಯರಾಗಿ ಇರುವ ಅವಕಾಶ ಇದೆ.

# 'ಮಸೀದಿಗಳನ್ನು ಮುಚ್ಚಿಸಬೇಕು; ಕರ್ನಾಟಕಕ್ಕೆ ಯೋಗಿ ಆದಿತ್ಯನಾಥ್‌ನಂತಹ ನಾಯಕ ಬೇಕು: ಪ್ರತಾಪ್ ಸಿಂಹ



ಕರ್ನಾಟಕದಲ್ಲಿ ತಾಲಿಬಾನಿ ಸರ್ಕಾರವಿದೆ. ಮದ್ದೂರಿನಲ್ಲಿ ಗಣೇಶ ಮೂರ್ತಿಯ ಮೇಲೆ ಕಲ್ಲುತೂರಾಟ ನಡೆಸಿದ ಮುಲ್ಲಾಗಳು ಯಾರೇ ಆಗಿರಲಿ, ಅವರ ವಿರುದ್ಧ ಸೂಕ್ತ ಕ್ರಮ ಕೈಗೊಳ್ಳಬೇಕು ಎಂದು ಮಂಡ್ಯದಲ್ಲಿ ಮಾಜಿ ಸಂಸದ ಪ್ರತಾಪ್ ಸಿಂಹ ಆಗ್ರಹಿಸಿದರು.

ಕಾಂಗ್ರೆಸ್ ಡಿಜೆ ಹಳ್ಳಿ ಮತ್ತು ಕೆಜಿ ಹಳ್ಳಿ ಗಲಭೆಕೋರರ ಮೇಲಿದ್ದ ಕೇಸ್ ವಾಪಸ್ ಪಡೆದುಕೊಂಡಿದೆ. ಹೀಗಾಗಿ ಮುಲ್ಲಾಗಳು ಬಾಲ ಬಿಚ್ಚಿದ್ದಾರೆ. ಪೊಲೀಸರ ಭದ್ರತೆ ಮಧ್ಯೆಯೂ ಇಂತಹ ಪ್ರಕರಣ ನಡೆದಿರುವುದು ವಿಪರ್ಯಾಸ. ಹೆಣ್ಣುಮಕ್ಕಳ ಮೇಲೆ ಲಾಠಿ ಪ್ರಹಾರ ಮಾಡಿದ ಪೊಲೀಸರನ್ನು ಈ ಕೂಡಲೇ ಸರ್ಕಾರ ಸಸ್ಪೆಂಡ್ ಆಗ್ಬೇಕು ಎಂದು ಪ್ರತಾಪ್‌ಸಿಂಹ ಒತ್ತಾಯಿಸಿದರು.

ಯೋಗಿ ಆದಿತ್ಯನಾಥ್ ಉತ್ತರಪ್ರದೇಶದಲ್ಲಿ ಎರಡನೇ ಸಲ ಮುಖ್ಯಮಂತ್ರಿಯಾದರು. ಅವರಿಗೆ ಜಾತಿ ನೋಡಿ ವೋಟ್‌ಹಾಕಿಲ್ಲ. ಹಿಂದೂ ಉಳಿವಿಗಾಗಿ ವೋಟ್‌ಹಾಕಿದ್ರು. ಆದರೆ, ಕರ್ನಾಟಕದಲ್ಲಿ ಚುನಾವಣೆ ಸಂದರ್ಭದಲ್ಲಿ ಕದಲೂರು ಉದಯ್‌ರಿಂದ ದುಡ್ಡು ಪಡೆದು ಮತ ಮಾರಿಕೊಂಡಿರಿ. ಡಿಸಿ ತಮ್ಮಣ್ಣ ಇದ್ರು ಅವರನ್ನೆಲ್ಲ ಬಿಟ್ಟು ಜೂಜಾಡವರನ್ನು ಗೆಲ್ಲಿಸಿದ್ರಿ. ಇಂತ ಸಮಯದಲ್ಲಿ ಯೋಗಿ ಆದಿತ್ಯನಾಥ್‌ನಂತಹ ನಾಯಕಬೇಕು ಎಂದರೆ ಹೇಗೆ ಕರೆದು–ಕೊಂಡು ಬರೋದು ಎಂದು ಪ್ರತಾಪ್ ಸಿಂಹ ಹೇಳಿದರು.

ಮುಸಲ್ಮಾನರು ಶಾಂತಿಪ್ರಿಯರು ಅಂತಾರೆ. ಆದರೆ, ಮಸೀದಿಯಲ್ಲಿ ಕಲ್ಲಿಟ್ಟುಕೊಂಡು ಗಣೇಶ ವಿಸರ್ಜನೆ ಸಮಯದಲ್ಲಿ ಕಲ್ಲು ತೂರಿದ್ದಾರೆ. ಇವರು ಶಾಂತಿ ಪ್ರಿಯರಾ? ನಾಗಮಂಗಲ ಆಯ್ತು, ಇದೀಗ ಮದ್ದೂರಿನಲ್ಲಿ ಉದ್ವಿಗ್ನ ಪರಿಸ್ಥಿತಿಬಂದೊದಗಿದೆ ಎಂದು ಪ್ರತಾಪ್ ಸಿಂಹ ಹೇಳಿದರು.(ಹಿಂದೂ ಮುಸ್ಲಿಂ ನೋಡಲ್ಲ ತಪ್ಪು ಮಾಡಿದವರ ವಿರುದ್ಧ ಕ್ರಮ)

ಹಿಂದೂಗಳು ಯಾರ ಮೇಲೆಯೂ ಕಲ್ಲು ಬಿಸಾಡಲ್ಲ. ಬಿಸಾಡಿದವರನ್ನು ಬಿಡಲ್ಲ. ಕಲ್ಲು ಬೀಸಿದ ಮಸೀದಿಗಳನ್ನು ಮುಚ್ಚಿಸಿ. ಉತ್ತರ ಪ್ರದೇಶದ ಪೊಲೀಸರು ಗಣೇಶ ಮೆರವಣಿಗೆ ವೇಳೆ ಜನರ ಮಧ್ಯೆ ಬಂದು ಡ್ಯಾನ್ಸ್ ಮಾಡ್ತಾರೆ. ಆದರೆ, ಕರ್ನಾಟಕದಲ್ಲಿ ಆಗೊಲ್ಲ. ಯಾಕಂದ್ರೆ ಇಲ್ಲಿ ತಾಲಿಬಾನ್ ಮನಸ್ಥಿತಿಯ ಸರ್ಕಾರವಿದೆ ಎಂದು ಕಿಡಿ–ಕಾರಿದರು.

ಮದ್ದೂರಿನಲ್ಲಿ ಕಲ್ಲು ತೂರಾಟದ ವಿರುದ್ಧ ನಡೆಯುತ್ತಿರುವ ಈ ಹೋರಾಟಕ್ಕೆ ಬಿಜೆಪಿ–ಜೆಡಿಎಸ್ ನಾಯಕರು ಹಾಗೂ ಹಿಂದೂ ಹುಲಿ ಯತ್ನಾಳ್ ಅವರನ್ನು ಆಹ್ವಾನಿಸೋಣ. ಹಿಂದೂಗಳ ರಕ್ಷಣೆಗೆ ಬಿಜೆಪಿ ನಾಯಕರು ಬಂದಿದ್ದೇವೆ. ಬೆಳಗ್ಗೆ 5 ಗಂಟೆಗೆ ಮಸೀದಿಗಳಲ್ಲಿ ಆಜಾನ್ ಕೂಗಲು ಶುರುವಾಗುತ್ತದೆ. ಆ ಕೂಗು ಹಿಂದೂಗಳು ಕೇಳಿಸಿಕೊಳ್ಳೋದಿಲ್ವಾ? ಮಸೀದಿ ಬಳಿ ಡಿಜೆ ಹಾಕಬೇಡಿ ಅಂದ್ರೆ ಯಾವ ನ್ಯಾಯ ಎಂದು ಮಾಜಿ ಸಂಸದ ಪ್ರತಾಪ್ ಸಿಂಹ ಗುಡುಗಿದರು.

ನಾನು ಶಾಸಕನಾಗಿದ್ದ ವೇಳೆ ಇಂತಹ ಘಟನೆ ನಡೆದಿರಲಿಲ್ಲ. ಉದ್ವಿಗ್ನ ಪರಿಸ್ಥಿತಿಗೆ ಪೊಲೀಸರೇ ಕಾರಣ. ಮದ್ದೂರಿನಲ್ಲಿರುವ ಸಿಪಿಐ ಅರೆಹುಚ್ಚ. ಹಿಂದೂ ಪ್ರತಿಭಟನಾಕಾರರ ಮೇಲೆ ಲಾಠಿ ಪ್ರಹಾರ ಮಾಡಿದ ಪೊಲೀಸರನ್ನು ಸಸ್ಪೆಂಡ್‌ಮಾಡಬೇಕು ಎಂದು ಮದ್ದೂರು ಮಾಜಿ ಶಾಸಕ ಡಿಸಿ ತಮ್ಮಣ್ಣ ಹೇಳಿದರು.

# ಸರ್ಕಾರಿ ಪ್ರಥಮ ದರ್ಜೆ ಕಾಲೇಜಿಗೆ 5 ಕೋಟಿ ರೂ.ಗಳ ವೆಚ್ಚದಲ್ಲಿ ನೂತನ ಕಟ್ಟಡ ನಿರ್ಮಾಣಕ್ಕೆ ಶಂಕುಸ್ಥಾಪನೆ



**ಹೊಳಲ್ಕೆರೆ :** ಪ್ರಾಥಮಿಕ ಶಿಕ್ಷಣದಿಂದ ಹಿಡಿದು ಉನ್ನತ ಶಿಕ್ಷಣಕ್ಕಾಗಿ ಸರ್ಕಾರ ಸಾವಿರಾರು ಕೋಟಿ ರೂ.ಗಳನ್ನು ಖರ್ಚು ಮಾಡುತ್ತಿದೆ. ಮಕ್ಕಳು ಇದರ ಪ್ರಯೋಜನ ಪಡೆದುಕೊಂಡು ಜೀವನದಲ್ಲಿ ಉತ್ತಮ ಭವಿಷ್ಯ ರೂಪಿಸಿಕೊಳ್ಳುವಂತೆ ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ್ ಮನವಿ ಮಾಡಿದರು.

ಪಟ್ಟಣದ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಐದು ಕೋಟಿ ರೂ.ವೆಚ್ಚದಲ್ಲಿ ನೂತನ ಕಟ್ಟಡ ನಿರ್ಮಾಣ ಕಾಮಗಾರಿಗೆ ಸೋಮವಾರ ಶಂಕುಸ್ಥಾಪನೆ ನೆರವೇರಿಸಿ ಮಾತನಾಡಿದರು.


ಕೇವಲ ಸರ್ಕಾರಿ ನೌಕರಿಗಾಗಿ ಓದುವುಕ್ಕಿಂತ ಕೌಶಲ್ಯ ಶಿಕ್ಷಣ ಪಡೆದು ಸ್ವಾವಲಂಭಿಯಾಗಿ ಬದುಕಲು ಬೇಕಾದ ಆತ್ಮವಿಶ್ವಾಸ ಮೂಡಿಸಿಕೊಳ್ಳಿ. ಶಿಕ್ಷಣಕ್ಕಾಗಿ ಸರ್ಕಾರ ಇಷ್ಟೆಲ್ಲಾ ಸವಲತ್ತುಗಳನ್ನು ಕೊಡುತ್ತಿದೆ. ಉಪಯೋಗಿಸಿಕೊಂಡು ಗುರು–ಹಿರಿಯರು, ಪೋಷಕರು ಹಾಗೂ ಕಾಲೇಜಿಗೆ ಕೀರ್ತಿ ತರಬೇಕು. ತಂದೆ–ತಾಯಿಗಳು ನಿಮ್ಮ ಮೇಲೆ ವಿಶ್ವಾಸ ನಂಬಿಕೆಯಿಟ್ಟು ಕಾಲೇಜಿಗೆ ಕಳಿಸುತ್ತಾರೆ. ಸಾರ್ಥಕ ಪಡಿಸಿಕೊಳ್ಳಿ ಎಂದು ವಿದ್ಯಾರ್ಥಿಗಳಿಗೆ ಸಚಿವ ಡಿ.ಸುಧಾಕರ್ ತಿಳಿಸಿದರು. ಹಿರಿಯೂರು, ಚಿತ್ರದುರ್ಗದಲ್ಲಿ ಪಿ.ಜಿ.ಕೋರ್ಸ್ ಇದೆ. ಹೊಳಲ್ಕೆರೆಯಲ್ಲಿ ಏಕೆ ಇಲ್ಲ ಎಂದು ಪ್ರಶ್ನಿಸಿದ ಸಚಿವರು. ಸ್ನಾತಕೋತ್ತರ ಕೇಂದ್ರ ಆರಂಭಿಸುವಂತೆ ಶಿಕ್ಷಣ ಇಲಾಖೆ ಜೆ.ಡಿ.ಗೆ ಸೂಚಿಸಿದರು.

ಶಾಸಕ ಡಾ.ಎಂ.ಚಂದ್ರಪ್ಪ ಮಾತನಾಡಿ ನೂತನ ಕಟ್ಟಡ ಮತ್ತು ಗ್ರಂಥಾಲಯಕ್ಕೆ 4.70 ಲಕ್ಷ ರೂ.ಗಳನ್ನು ಖರ್ಚು ಮಾಡಲಾಗುವುದು. ರ್‍ಯಾಂಕ್ ಪಡೆದ ಮಕ್ಕಳಿಗೆ ಆ.15 ರ ಸ್ವಾತಂತ್ರ್ಯ ದಿನಾಚರಣೆಯಂದು ಐವತ್ತು ಸಾವಿರ ರೂ.ಗಳ ಬಹುಮಾನ ಕೊಟ್ಟಿದ್ದೇನೆ. ಮುಂದಿನ ಸಾಲಿನಲ್ಲಿ ರ್‍ಯಾಂಕ್ ಬರುವವರಿಗೆ ಒಂದು ಲಕ್ಷ ರೂ.ಗಳನ್ನು ನೀಡುವುದಾಗಿ ಘೋಷಿಸಿದರು.

ನಾಲ್ಕೂ ಕೋಟಿ ರೂ.ಗಳಲ್ಲಿ ಒಳಾಂಗಣ ಕ್ರೀಡಾಂಗಣ ಕಟ್ಟಿಸಿದ್ದೇನೆ. 2.50 ಕೋಟಿ ರೂ.ವೆಚ್ಚದಲ್ಲಿ ಈಜುಕೊಳ, ಹತ್ತು ಕೋಟಿ ರೂ.ಗಳಲ್ಲಿ ಸ್ಟೇಡಿಯಂ ನಿರ್ಮಾಣವಾಗಿದೆ. ಹೆಚ್ಚುವರಿಯಾಗಿ ಹದಿನೆಂಟು ಕೋಟಿ ರೂ.ಗಳನ್ನು ಖರ್ಚು ಮಾಡಿ ಬೆಂಗಳೂರಿನಲ್ಲಿರುವ ಚಿನ್ನಸ್ವಾಮಿ ಸ್ಟೇಡಿಯಂಗಿಂತಲೂ ಸುಂದರವಾಗಿ ಕಟ್ಟಿಸಲಾಗುವುದು. ಸರ್ಕಾರಿ ಶಾಲೆ ಮಕ್ಕಳಿಗೆ ಬಸ್‌ಗಳ ವ್ಯವಸ್ಥೆ ಕಲ್ಪಿಸಿದ್ದೇನೆ. ರಾಜ್ಯದಲ್ಲಿ ಯಾವ ಶಾಸಕರು ಇಂತಹ ಪುಣ್ಯಸಾರ್ಥಕ ಕೆಲಸ ಮಾಡಿಲ್ಲ. ಇದರಿಂದ ಎಂ.ಎಂ.ಪ್ರೌಢಶಾಲೆಯಲ್ಲಿ ಒಂದು ಸಾವಿರಕ್ಕೂ ಹೆಚ್ಚು ವಿದ್ಯಾರ್ಥಿಗಳು ದಾಖಲಾಗಿದ್ದಾರೆಂದು ನುಡಿದರು.

ಶಿವಮೊಗ್ಗ ಕಾಲೇಜು ತಾಂತ್ರಿಕ ಶಿಕ್ಷಣ ಇಲಾಖೆ ಪ್ರಾದೇಶಿಕ ಜಂಟಿ ನಿರ್ದೇಶಕ ಪ್ರೊ.ಕೇಶವ ಹೆಚ್. ತಹಶೀಲ್ದಾರ್ ವಿಜಯಕುಮಾರ, ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಹಣಾಧಿಕಾರಿ ಪಿ.ವಿಶ್ವನಾಥ, ಪುರಸಭೆ ಅಧ್ಯಕ್ಷ ವಿಜಯಸಿಂಹ ಖಾಟ್ರೋತ್, ಉಪಾಧ್ಯಕ್ಷೆ ನಾಗರತ್ನ ವೇದಮೂರ್ತಿ, ಸದಸ್ಯರುಗಳಾದ ಆರ್.ಅಶೋಕ್, ಪಿ.ಹೆಚ್. ಮುರುಗೇಶ್, ಬಸವರಾಜ್ ಯಾದವ್, ಡಿ.ಸಿ.ಮೋಹನ್, ಕಾಲೇಜಿನ ಪ್ರಾಚಾರ್ಯರಾದ ಡಾ.ಸಿ.ಕೆ.ಕೊಟ್ರಪ್ಪ, ಉಪನ್ಯಾಸಕರು ಮತ್ತು ವಿದ್ಯಾರ್ಥಿಗಳು ಈ ಸಂದರ್ಭದಲ್ಲಿ ಹಾಜರಿದ್ದರು.

## ಮದ್ದೂರು ಗಲಭೆ: ಜನ ಮಾತ್ರವಲ್ಲ ಪೊಲೀಸರಿಗೂ ಹೊಡೆದಿದ್ದಾರೆ; ನಮಗೆ ನೆಮ್ಮದಿ ಇಲ್ಲದಂತಾಗಿದೆ – ಯುವತಿ



**ಮಂಡ್ಯ:** ಮದ್ದೂರು ಗಣೇಶ ವಿಸರ್ಜನೆ ಗಲಾಟೆಯು ತಾರಕ್ಕೇರಿದ್ದು, ಸದ್ಯ ಬಿಜೆಪಿ ನಾಯಕರು, ಹಿಂದೂ ಮುಖಂಡರು, ಸಂಘಟನೆಗಳು ಪ್ರತಿಭಟನೆಗೆ ಮುಂದಾಗಿವೆ. ಈ ನಡುವೆ " ಜನ ಅಲ್ಲ ಪೊಲೀಸರನ್ನು ಬಿಡದೇ ಹೊಡೆದಿದ್ದಾರೆ. ನಮಗೆ ನೆಮ್ಮದಿ ಇಲ್ಲದಂತಾಗಿದೆ " ಎಂದು ಯುವತಿಯೊಬ್ಬರು ಮಾತನಾಡಿರುವ ವಿಡಿಯೋ ವೈರಲ್ ಆಗಿದೆ.

ಭಾನುವಾರ ಮದ್ದೂರು ಪಟ್ಟಣದಲ್ಲಿ ಗಣೇಶ ವಿಸರ್ಜನೆ ಸಂದರ್ಭದಲ್ಲಿ ಹಿಂದೂ ಮುಸ್ಲಿಂ ಕೋಮಿನ ನಡುವೆ ಗಲಾಟೆಯಾಗಿ ಕಲ್ಲುತೂರಾಟವಾಗಿದೆ. ಈ ಘಟನೆಯ ಬಗ್ಗೆ ಸ್ಥಳೀಯರು ತೀವ್ರವಾಗಿ ಖಂಡಿಸಿದ್ದು, ಅನ್ಯ ಸಮುದಾಯದವರು ಭೀಕರವಾಗಿ ಹೊಡೆದಿದ್ದಾರೆ ಎಂದು ಆರೋಪ ಮಾಡಿದ್ದಾರೆ. ಸ್ಥಳೀಯ ನಿವಾಸಿ ಪುಷ್ಪಾ ಎಂಬ ಯುವತಿಯ ವಿಡಿಯೋ ವೈರಲ್ ಆಗಿದೆ.

"ಗಣೇಶನನ್ನು ತೆಗೆದುಕೊಂಡು ಹೋಗುವಾಗ ಕಲ್ಲು ತೂರಾಟವಾಯಿತು. ಸಾಮಾನ್ಯ ಜನರ ಮೇಲೆ ಮಾತ್ರವಾಗಿಲ್ಲ. ಪೊಲೀಸರಿಗೂ ಬಿಡದೇ ಹೊಡೆದಿದ್ದಾರೆ. ಅವರು ಬಾವುಟ ಇಳಿಸು ಅಂದರು, ಅದನ್ನ ಇಳಿಸಿದೆವು. ಸಾಂಗ್ ಹಾಕಬಾರದು ಎಂದು ಹೇಳಿದರು, ನಾವು ಹಾಕಿಲ್ಲ. ಗಣೇಶನನ್ನು ಬೇಗ ಬಿಡಬೇಕು ಅಂದರು, ನಾವು ಹಿಂದೂ ಹಬ್ಬವನ್ನು ಮಾಡದಿದ್ದರೂ ಪರವಾಗಿಲ್ಲ ಎಂದು ಬೇಗ ವಿಸರ್ಜನೆಗೆ ಹೊರಟೆವು. ಆದರೂ ನಮಗೆ ನೆಮ್ಮದಿ ಇಲ್ಲ ಎಂದು ಬೇಸರ ವ್ಯಕ್ತಪಡಿಸಿದರು.

"ಅವರ ಮನೆಯಲ್ಲಿ ಬಂದು ನಾವು ಊಟ ಮಾಡ್ತೇವೆ, ನಮ್ಮ ಮನೆಗೆ ಬಂದು ಅವರು ಊಟ ಮಾಡ್ತಾರೆ. ಆದರೆ ಇಲ್ಲಿ ಏನು ಆಗ್ತಿದೆ ಎಂದು ನಮಗೆ ಗೊತ್ತಾಗುತ್ತಿಲ್ಲ. ಒಬ್ಬನಿಗೆ ರಕ್ತ ಬರುವಂತೆ ಭಾರೀ ಹಲ್ಲೆ ಮಾಡಿದ್ದಾರೆ. ಮುಸ್ಲಿಮರು ಬಂದು ನಮ್ಮ ದೇವಸ್ಥಾನದ ಮುಂದೆ ಹೋಗಬಹುದು, ನೃತ್ಯ ಮಾಡಬಹುದು ಆಗ ನಾವೆಲ್ಲಾ ಸುಮ್ಮನೆ ಇರುತ್ತೇವೆ. ಆದರೆ, ನನಗೆ ಮಾತ್ರ ಅವಕಾಶ ಇಲ್ಲ. ಚೆನ್ನೇಗೌಡ ಬಡಾವಣೆ ಅಂದರೂ ಮುಸ್ಲಿಮರೇ ತುಂಬಿಕೊಂಡಿದ್ದಾರೆ. ಹಿಂದೂಗಳಿಗೆ ಜಾಗ ಇಲ್ಲ. ಇಲ್ಲಿ ಮುಸ್ಲಿಂ ಸಮುದಾಯದವರಿಗೆ ಹೆಚ್ಚಿನ ಬೆಂಬಲ ಕೊಡ್ತಿದ್ದಾರೆ " ಎಂದು ಯುವತಿ ಆರೋಪ ಮಾಡಿದ್ದಾರೆ.

## ಸಮುದಾಯದ ಪೀಠಾಧಿಪತಿಗಳ ಆಜ್ಞೆ: ದೆಹಲಿ ಕಡೆ ಮುಖ ಮಾಡಿದ ರಾಜ್ಯದ ಪ್ರಭಾವಿ ಸಚಿವ?



**ಬೆಂಗಳೂರು:** ರಾಜ್ಯ ರಾಜಕೀಯದಲ್ಲಿ ಸಹಕಾರ ಸಚಿವರಾಗಿದ್ದ ಕೆಎನ್ ರಾಜಣ್ಣನವರ ತಲೆದಂಡವಾದ ನಂತರ, ಮತ್ತೆ ಬಣ ರಾಜಕೀಯ ಹೆಚ್ಚಾಗುತ್ತಿದೆಯಾ ಎನ್ನುವ ಪ್ರಶ್ನೆ ಎದುರಾಗಿದೆ. ಇದಕ್ಕೆ ಕಾರಣ, ಎರಡು ದಿನಗಳ ಹಿಂದೆ ರಾಜಣ್ಣ ಮತ್ತು ಎಚ್.ಸಿ.ಬಾಲಕೃಷ್ಣ ನಡುವಿನ ವಾಕ್ಸಮರ.

ವಾಲ್ಮೀಕಿ ನಿಗಮ ಹಗರಣದಲ್ಲಿ ಸಚಿವರಾಗಿದ್ದ ಬಿ.ನಾಗೇಂದ್ರ ಅವರ ರಾಜೀನಾಮೆಯನ್ನು ಪಡೆಯಲಾಗಿತ್ತು. ಈ ಬ್ರಹ್ಮಾಂಡ ಭ್ರಷ್ಟಾಚಾರ ಪ್ರಕರಣದಲ್ಲಿ ತಪ್ಪು ನಡೆದದ್ದು ಹೌದು ಎನ್ನುವುದನ್ನು ಖುದ್ದು ಮುಖ್ಯಮಂತ್ರಿಗಳೇ ಸದನದಲ್ಲಿ ಒಪ್ಪಿಕೊಂಡಿದ್ದರು. ಇದು ರಾಷ್ಟ್ರ ಮಟ್ಟದಲ್ಲಿ ಸುದ್ದಿಯಾಗಿ, ಸಂಸತ್ತಿನಲ್ಲೂ ಮಾರ್ದನಿಸಿತ್ತು.

ನಾಗೇಂದ್ರ ಅವರಿಗೆ ಕ್ಲೀನ್ ಚಿಟ್ ಸಿಕ್ಕ ನಂತರ, ಅವರನ್ನು ಸಂಪುಟಕ್ಕೆ ವಾಪಸ್ ಸೇರಿಸಿಕೊಳ್ಳುವ ಮಾತುಗಳನ್ನು ಮುಖ್ಯಮಂತ್ರಿ ಸಿದ್ದರಾಮಯ್ಯನವರೇ ಆಡಿದ್ದರು. ನಾಗೇಂದ್ರ ಕೂಡಾ, ಇಂದು, ನಾಳೆ ಅಂದುಕೊಂಡು, ಸಚಿವ ಸ್ಥಾನಕ್ಕಾಗಿ ಕಾಯುತ್ತಿದ್ದಾರೆ. ಆದರೆ, ಏನೂ ಹೆಚ್ಚಿನ ಬೆಳವಣಿಗೆಗಳು ಆಗುತ್ತಿಲ್ಲ.

ಈ ವಿಚಾರದಲ್ಲಿ ಮೊದಲೇ ಸಿಟ್ಟಾಗಿದ್ದ ವಾಲ್ಮೀಕಿ ಸಮುದಾಯದ ಪೀಠಾಧಿಪತಿಗಳೂ, ಮತ್ತೋರ್ವ ನಾಯಕ ಕೆಎನ್ ರಾಜಣ್ಣನವರ ಅಮಾನತಿನ ನಂತರ, ಇನ್ನಷ್ಟು ಅಸಮಾಧಾನಿತರಾಗಿದ್ದಾರೆ. ಹಾಗಾಗಿ, ಸಮುದಾಯದ ಇನ್ನೋರ್ವ ಪ್ರಭಾವೀ ನಾಯಕ, ಸತೀಶ್ ಜಾರಕಿಹೊಳಿಗೆ, ದೆಹಲಿಗೆ ಹೋಗುವಂತೆ ಸೂಚಿಸಿದ್ದಾರೆ ಎಂದು ಸುದ್ದಿಯಾಗುತ್ತಿದೆ.

ಕಾಂಗ್ರೆಸ್ ಪಾರ್ಟಿಯ ಹೈಕಮಾಂಡ್ ನಮ್ಮ ಸಮುದಾಯದ ಇಬ್ಬರು ನಾಯಕರನ್ನು (ಬಿ.ನಾಗೇಂದ್ರ ಮತ್ತು ಕೆಎನ್ ರಾಜಣ್ಣ) ಸಚಿವ ಸ್ಥಾನದಿಂದ ಕಿತ್ತು ಹಾಕಿದೆ. ನಾಗೇಂದ್ರ ಅವರಿಗೆ ಸಚಿವ ಸ್ಥಾನ ಸಿಗಬಹುದು ಎನ್ನುವ ನಮ್ಮ ನಿರೀಕ್ಷೆ ಹುಸಿಯಾಗುತ್ತಾ ಬರುತ್ತಿದೆ. ಇಷ್ಟಾದರೂ ನೀವು ಸುಮ್ಮನಿದ್ದರೆ ಹೇಗೆ, ಹೈಕಮಾಂಡ್ ಮಟ್ಟದಲ್ಲಿ ನಿಮ್ಮ ತಾಕತ್ ಅನ್ನು ಪ್ರದರ್ಶಿಸಿ ಎನ್ನುವ ಹುಕುಂ, ಸತೀಶ್ ಜಾರಕಿಹೊಳಿಗೆ ಮಾಡಿದ್ದಾರೆ ಎನ್ನುವ ಸುದ್ದಿ ಹರಿದಾಡುತ್ತಿದೆ.

ಸಮುದಾಯದ ನಾಯಕರಾದ ನಾಗೇಂದ್ರ ಆಗಲಿ ರಾಜಣ್ಣನವರಾಗಲಿ ಮಾಡದ ತಪ್ಪಿಗೆ ಅವರ ತಲೆದಂಡವಾಗಿದೆ. ನಾಗೇಂದ್ರ ಅವರಿಗೆ ಕ್ಲೀನ್ ಚಿಟ್ ಸಿಕ್ಕು ಇಷ್ಟು ದಿನವಾದರೂ, ಅವರಿಗೆ ಮತ್ತೆ ಮಂತ್ರಿ ಸ್ಥಾನ ಸಿಗಲಿಲ್ಲ.

## ಅಭಿಷೇಕ್ ಹಾಗೂ ಕೇರಳ ಮೂಲದ ಯೂಟ್ಯೂಬರ್ ಮನಾಫ್ ಎಸ್‌ಐಟಿ ತನಿಖೆಗೆ ಹಾಜರು: ಕಣ್ತಪ್ಪಿಸಿ ಹಿಂಬಾಗಿಲಿಂದ ಓಡಿ ಬಂದ ಟಿ ಜಯಂತ್!



**ಬೆಳ್ತಂಗಡಿ:** ಧರ್ಮಸ್ಥಳ ವಿರುದ್ಧ ಷಡ್ಯಂತ್ರ, ಅನಧಿಕೃತ ಸಾವುಗಳು, ಹಾಗೂ ಶವ ಹೂತ ಪ್ರಕರಣಗಳ ಬಗ್ಗೆ ಎಸ್‌ಐಟಿ ತನಿಖೆ ಮುಂದುವರಿಸಿದ್ದು, ಕೇರಳದ ಯೂಟ್ಯೂಬರ್ ಹಾಗೂ ಲಾರಿ ಮಾಲೀಕನಾಗಿದ್ದ ಮನಾಫ್ ಎಸ್ ಐಟಿ ವಿಚಾರಣೆಗೆ ಹಾಜರಾಗಿದ್ದಾರೆ. ಅಲ್ಲದೆ ಯುನೈಟೆಡ್ ಮೀಡಿಯಾ ಯೂಟ್ಯೂಬ್‌ನ ಅಭಿಷೇಕ್ ಕೂಡಾ ಮತ್ತೆ ಎಸ್‌ಐಟಿ ಮುಂದೆ ಹಾಜರಾಗಿದ್ದಾರೆ.

ಮನಾಫ್ ವಿಚಾರಣೆಗೆ ಕೇರಳ ಪೊಲೀಸರಿಂದ ಭದ್ರತೆ ಕೇಳಿದ್ದರು ಆದರೆ ಸೆಕ್ಯುರಿಟಿ ಇಲ್ಲದೆ ವಿಚಾರಣೆಗೆ ಒಬ್ಬಂಟಿಯಾಗಿ ಆಗಮಿಸಿದ್ದಾರೆ. ಇವರಿಬ್ಬರೂ ಕೂಡಾ ಚಿನ್ನಯ್ಯ ನ್ಯಾಯಾಲಯಕ್ಕೆ ಬುರುಡೆ ಸಹಿತ ದೂರು ಕೊಟ್ಟಿದ್ದ ದಿನವೇ ಯೂಟ್ಯೂಬರ್‌ಗೆ ಅದೇ ಬುರುಡೆಯನ್ನು ಕಾಡಿನಿಂದ ತರುತ್ತಿರುವ ದೃಶ್ಯವನ್ನು ಪ್ರಸಾರ ಮಾಡಿದ್ದರು, ಈ ಹಿನ್ನೆಲೆ ವಿಚಾರಣೆಗೆ ಕರೆಯಲಾಗಿದೆ. ಕಳೆದ ಮೂರ್ನಾಲ್ಕು ದಿನದಿಂದ ಗಿರೀಶ್ ಮಟ್ಟೆಣ್ಣವರ್, ಜಯಂತ್ ಟಿ ವಿಚಾರಣೆ ನಡೆಯುತಿದೆ, ಇಂದೂ ಕೂಡಾ ವಿಚಾರಣೆಗಾಗಿ ಬೆಳ್ತಂಗಡಿ ಠಾಣೆಗೆ ಆಗಮಿಸಿದ್ದಾರೆ. ಇನ್ನು ಯಾರಿಗೂ ಗೊತ್ತಾಗದಂತೆ ಕಾಡಿನ ದಾರಿಯಲ್ಲಿ ಓಡಿಹೋಗಿ, ಎಸ್ ಐಟಿ ಕಚೇರಿಯ ಹಿಂಬಾಗಿಲಿನಿಂದ ಜಯಂತಿ ಟಿ ಎಂಟ್ರಿಯಾಗಿದ್ದಾರೆ. ಈ ದೃಶ್ಯ ಮಾಧ್ಯಮಗಳ ಕ್ಯಾಮರಾ ಕಣ್ಣಲ್ಲಿ ಸೆರೆಯಾಗಿದೆ.

ಯೂಟ್ಯೂಬ್ ನಲ್ಲಿ ಮೊದಲ ಬಾರಿಗೆ ವಿಡಿಯೋ ಪ್ರಕಟಿಸಿದ್ದು ಅಭಿಷೇಕ್. ಹೀಗಾಗಿ ಈತನ ಸುದೀರ್ಘ ವಿಚಾರಣೆಯನ್ನು ಮಾಡಲಾಗ್ತಿದೆ. ಇನ್ನು ಜಯಂತ್ ಟಿ ಕೆಲಸದವನ ರೀತಿಯಲ್ಲಿ ಅಷ್ಟೆ ಅವರು ಹೇಳಿದ್ದನ್ನೆಲ್ಲ ಮಾಡಿದ್ದೇನೆ ಎಂದು ಹೇಳುತ್ತಾ ಬಂದಿದ್ದರೂ, ಎಸ್ ಐಟಿ ಸಂಪೂರ್ಣ ವಿಚಾರಣೆ ನಡೆಸುತ್ತಿದೆ. ಕಾಲ್ ಡಿಟೇಲ್ ರೆಕಾರ್ಡ್ ಕೂಡಾ ಪಡೆದು ವಿಚಾರಣೆ ಮಾಡಲಾಗ್ತಿದೆ.

ಜಿಲ್ಲಾ ಮಟ್ಟದ ದಸರಾ ಕ್ರೀಡಾಕೂಟ

# ಕ್ರೀಡಾ ಸಾಧಕರು ಸ್ಫೂರ್ತಿದಾಯಕರು




**ಶಿವಮೊಗ್ಗ:** ಕ್ರೀಡಾ ಕ್ಷೇತ್ರ ಸೇರಿದಂತೆ ಯಾವುದೇ ಕ್ಷೇತ್ರಗಳಲ್ಲಿ ಸಾಧನೆ ಮಾಡಿದ ಸಾಧಕರಿಗೆ ಎಂದಿಗೂ ವಿಶೇಷ ಗೌರವವಿದ್ದು, ಇವರು ನಮ್ಮೆಲ್ಲರಿಗೆ ಸ್ಪೂರ್ತಿದಾಯಕರಾಗಿರುತ್ತಾರೆ ಎಂದು ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಎಸ್. ಮಧು ಬಂಗಾರಪ್ಪ ನುಡಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಶಿವಮೊಗ್ಗ ಇವರ ಸಂಯುಕ್ತಾಶ್ರಯದಲ್ಲಿ ಸೆ.02 ಮತ್ತು 03 ರಂದು ನೆಹರು ಕ್ರೀಡಾಂಗಣದಲ್ಲಿ ಏರ್ಪಡಿಸಲಾಗಿರುವ ಜಿಲ್ಲಾ ಮಟ್ಟದ ದಸರಾ ಕ್ರೀಡಾಕೂಟವನ್ನು ಮಂಗಳವಾರ ಉದ್ಘಾಟಿಸಿ ಅವರು ಮಾತನಾಡಿದರು.

ಶಿಕ್ಷಣ ಮಾತ್ರವಲ್ಲದೇ ಕ್ರೀಡೆ ಮತ್ತು ಇತರೆ ಸಾಂಸ್ಕೃತಿಕ ಚಟುವಟಿಕೆಗಳೂ ಮುಖ್ಯವಾಗಿದ್ದು ವಿದ್ಯಾರ್ಥಿಗಳಲ್ಲಿ ಮಾನವೀಯ ಮೌಲ್ಯ ಹೆಚ್ಚಿಸುವಲ್ಲಿ ಬಹಳ ಪ್ರಮುಖ ಪಾತ್ರ ವಹಿಸುತ್ತವೆ.

ದಸರಾ ಕ್ರೀಡಾಕೂಟದಲ್ಲಿ ವಯಸ್ಸಿನ ಮಿತಿಯಿಲ್ಲದ ಕಾರಣ ಎಲ್ಲ ವಯೋಮಾನದವರು ಕ್ರೀಡೆಯಲ್ಲಿ ಭಾಗವಹಿಸಬಹುದು. ಮಕ್ಕಳಿಗೆ ಸ್ಪೂರ್ತಿಯಾಗುವಂತೆ ವಯಸ್ಸಾದವರು ಸ್ಪರ್ಧಿಸುತ್ತಿರುವುದು ಸಂತಸದ ವಿಷಯ.

ದಸರಾ ಕ್ರೀಡಾಕೂಟದ ಕುರಿತು ಇನ್ನೂ ಹೆಚ್ಚಿನ ಪ್ರಚಾರ ನೀಡಬೇಕು. ಪ್ರಸ್ತುತ ಜಿಲ್ಲೆಯಲ್ಲಿ 5 ಸಾವಿರ ಕ್ರೀಡಾಪಟುಗಳು ಭಾಗವಹಿಸುತ್ತಿದ್ದು ಮುಂದಿನ ದಿನಗಳಲ್ಲಿ ಇನ್ನೂ ಹೆಚ್ಚಿನ ಕ್ರೀಡಾಪಟುಗಳು ಪಾಲ್ಗೊಳ್ಳಬೇಕು. ಅವರ ಹವ್ಯಾಸಗಳು ನಮಗೆ ಮಾರ್ಗದರ್ಶನ ಆಗಬೇಕು ಎಂದ ಅವರು ಬರ್ಲಿನ್ ದೇಶದಲ್ಲಿ ಅಂತರಾಷ್ಟ್ರೀಯ ಬಾಲಕರ ಜ್ಯೂನಿಯರ್ ಹಾಕಿ ಪಂದ್ಯಾವಳಿಯಲ್ಲಿ ಪಾಲ್ಗೊಂಡ ಕ್ರೀಡಾಪಟು ಸುನೀಲ್ ಬಗ್ಗೆ ಹೆಮ್ಮೆ ಎನ್ನಿಸುತ್ತಿದೆ. ಅವರ ಸಾಧನೆಯಿಂದಾಗಿ ಅವರನ್ನು ಜನರು ಗುರುತಿಸುತ್ತಿದ್ದಾರೆ. ಅವರು ಇನ್ನೂ ಉನ್ನತ ಮಟ್ಟಕ್ಕೆ ಬೆಳೆಯಲಿ ಎಂದು ಹಾರೈಸಿದರು.

ವಿಧಾನ ಪರಿಷತ್ ಶಾಸಕರಾದ ಬಲ್ಕೀಶ್ ಬಾನು ಮಾತನಾಡಿ ದಸರಾ ಕ್ರೀಡಾಕೂಟಕ್ಕೆ ವಯಸ್ಸಿನ ಮಿತಿ ಇಲ್ಲ. ನಾವೆಲ್ಲ ಒಂದೇ ಎಂಬ ಭಾವನೆ ಬೆಳೆಸುವ ಉದ್ದೇಶದಿಂದ ಇಂತಹ ಕ್ರೀಡಾಕೂಟವನ್ನು ನಮ್ಮ ಹಿರಿಯರು ಆರಂಭಿಸಿದ್ದಾರೆ. ಕ್ರೀಡೆಯಿಂದ ನಮ್ಮ ದೇಹದ ಅಂಗಗಳು ಚುರುಕಾಗಿ ಆರೋಗ್ಯಯುತವಾಗಿರಲು ಸಾಧ್ಯವಾಗುತ್ತದೆ. ದಸರಾ ಕ್ರೀಡಾ ಸಮಿತಿಯವರು ಮುಂದಿನ ದಿನಗಳಲ್ಲಿ ನಶಿಸಿ ಹೋಗುತ್ತಿರುವ ಗ್ರಾಮೀಣ ಪಂದ್ಯಗಳನ್ನು ಸಹ ಅಳವಡಿಸಿಕೊಳ್ಳಬಹುದೆಂದು ಸಲಹೆ ನೀಡಿದರು.

ಎಸ್‌ಸಿ ಎಸ್‌ಟಿ ಅಲೆಮಾರಿ ಮತ್ತು ಅರೆ ಅಲೆಮಾರಿ ಅಭಿವೃದ್ಧಿ ನಿಗಮದ ಅಧ್ಯಕ್ಷೆ ಪಲ್ಲವಿ ಮಾತನಾಡಿ, ನಮ್ಮನ್ನೆಲ್ಲ ಆರೋಗ್ಯವಂತರನ್ನಾಗಿ, ಯುವಕರನ್ನಾಗಿ ಇಡುವ ಶಕ್ತಿ ಕ್ರೀಡೆಗೆ ಇದೆ. ಪ್ರಸ್ತುತ ಮಕ್ಕಳನ್ನು ನಾವು ಮೊಬೈಲ್‌ನಿಂದ ದೂರ ಇಡಬೇಕು. ನಾವು ಹಿಂದೆ ಆಡುತ್ತಿದ್ದ ಆಟಗಳಲ್ಲಿ ಈಗಿನ ಮಕ್ಕಳನ್ನು ತೊಡಗಿಸುವ ಪ್ರಯತ್ನ ಮಾಡಬೇಕು. ಹಾಗೂ ಅವರಲ್ಲಿ ಸಕಾರಾತ್ಮಕ ಚಿಂತನೆಗಳನ್ನು ತುಂಬಬೇಕು. ಕ್ರೀಡೆಗಳು ಕೇವಲ ಆಟಗಳಲ್ಲ, ಅದೊಂದು ಭಾವೈಕ್ಯತೆ ಮತ್ತು ದೇಶಪ್ರೇಮದ ಪ್ರತೀಕವಾಗಿದೆ ಎಂದರು.

ಶಿವಮೊಗ್ಗ ನಗರ ಕ್ಷೇತ್ರದ ಶಾಸಕರಾದ ಎಸ್.ಎನ್.ಚನ್ನಬಸಪ್ಪ ಅಧ್ಯಕ್ಷತೆ ವಹಿಸಿ ಮಾತನಾಡಿ, ಗ್ರಾಮೀಣ ಪ್ರತಿಭೆಗಳಿಗಾಗಿಯೇ ಆರಂಭಿಸಿದ್ದು ಖೇಲೋ ಇಂಡಿಯಾ. ತಂಡಕ್ಕಾಗಿ ಆಡುವ ಮನೋಭಾವ ಬೆಳಿಸಿಕೊಂಡಾಗ ಯಶಸ್ಸು ಸಾಧ್ಯವಾಗುತ್ತದೆ. ಸೋಲೇ ಗೆಲುವಿನ ಸೋಪಾನ ಎಂಬ ಮಾತಿನಂತೆ ಆಡುತ್ತಾ ಆಡುತ್ತಾ ಬೆಳೆಯಬೇಕು. ಹಳೆಯ, ಗ್ರಾಮೀಣ ಕ್ರೀಡೆಗಳು, ಆಟಗಳು ಈಗಿನ ಮಕ್ಕಳಿಗೆ ಗೊತ್ತಿಲ್ಲ. ಈ ಆಟಗಳ ನಾಶಕ್ಕೆ ಕಾರಣ ನಾವೇ ಆಗಿದ್ದು, ಅವುಗಳ ಪರಿಚಯ ಅವರಿಗೆ ಮಾಡಿಸಿ, ಆಡಲು ಪ್ರೋತ್ಸಾಹಿಸಬೇಕು. ಕ್ರೀಡೆಗಳನ್ನು ಬೆಳೆಸಲು ಕ್ರೀಡಾ ಮನೋಭಾವ ಬೆಳೆಸಿಕೊಳ್ಳಬೇಕು ಎಂದರು.

# ಯಶಸ್ವಿಯಾದ ಶ್ರೀ ಗಾಯತ್ರಿ ಪೂಜೆ, ಉಪಾಸನೆ



**ದಾವಣಗೆರೆ:** ದಾವಣಗೆರೆಯ ಆಧ್ಯಾತ್ಮ ಪರಂಪರೆಯ ಕ್ರಿಯಾತ್ಮಕ ಸಂಸ್ಥೆ ಶ್ರೀ ಗಾಯತ್ರಿ ಪರಿವಾರದ ಆಶ್ರಯದಲ್ಲಿ ಪ್ರತೀ ತಿಂಗಳು ಹುಣ್ಣಿಮೆಯಂದು ನಿರಂತರ 25 ವರ್ಷಗಳಿಂದ ನಡೆದು ಬಂದ ಶ್ರೀ ಗಾಯತ್ರಿ ಪೂಜೆ ಉಪಾಸನೆ ಈ ತಿಂಗಳ ಅನಂತನ ಹುಣ್ಣಿಮೆ ಪ್ರಯುಕ್ತ ನಗರದ ಜಯದೇವ ವೃತ್ತದಲ್ಲಿರುವ ಶ್ರೀ ಶಂಕರಮಠದ ಸಭಾಂಗಣದಲ್ಲಿ ಕೀರ್ತಿಶೇಷ ಎಂ. ವೀರಭದ್ರರಾವ್ ಕುಟುಂಬದ ವತಿಯಿಂದ ನಡೆದ ಈ ಧಾರ್ಮಿಕ ಸೇವೆ ಪೂಜೆ ಸುಸಂಪನ್ನ ಗೊಂಡಿತು ಎಂದು ಪರಿವಾರದ ಪ್ರಧಾನ ಕಾರ್ಯದರ್ಶಿ ಸಾಲಿಗ್ರಾಮ ಗಣೇಶ್‌ಶೆಣೈ ತಿಳಿಸಿದ್ದಾರೆ.

ಈ ಸಾಮೂಹಿಕ ಪೂಜೆಯಲ್ಲಿ ಶ್ರೀ ಗಾಯತ್ರಿ ಪರಿವಾರದ ಅಧ್ಯಕ್ಷರಾದ ಡಾ. ರಮೇಶ್ ಪಟೇಲ್, ಖಜಾಂಚಿ ಪುರುಷೋತ್ತಮ ಪಟೇಲ್, ಪೂಜೆಯ ಸೇವಾಕರ್ತರಾದ ಎಂ.ಶ್ರೀನಿವಾಸ್, ಸಂಚಾಲಕರದ ಭಾವನ್ನಾರಾಯಣ, ಆರ್. ಎಂ.ಸತೀಶ್, ಪರಿವಾರದ ಗೌರವ ಅಧ್ಯಕ್ಷರಾದ ಕೆ.ಹೆಚ್.ಮಂಜುನಾಥ್, ವಿ.ಕೃಷ್ಣಮೂರ್ತಿ, ಬಿ.ಸತ್ಯನಾರಾಯಣ ಮೂರ್ತಿ, ಶ್ರೀಮತಿ ಶೈಲಜಾ ಶಿವಯೋಗಿ, ಎಂ.ಎಸ್.ಪ್ರಸಾದ್ ಮುಂತಾದವರು ಉಪಸ್ಥಿತರಿದ್ದರು.

# ಸೆ.14 ರಂದು ರಾಜ್ಯ ಮಟ್ಟದ ಉಚಿತ ಕವಿಗೋಷ್ಠಿ ಉದ್ಘಾಟನೆ

**ದಾವಣಗೆರೆ:** ದಾವಣಗೆರೆಯ ಶ್ರೀ ವಿರಕ್ತಮಠ, ಕಲಾಕುಂಚ ಸಾಂಸ್ಕೃತಿಕ ಸಂಸ್ಥೆ ಮತ್ತು ದಾವಣಗೆರೆ ಜಾಗತಿಕ ಲಿಂಗಾಯತ ಮಹಾಸಭಾ ಮಹಿಳಾ ಘಟಕದ ಸಂಯುಕ್ತಾಶ್ರಯದಲ್ಲಿ ಸೆಪ್ಟೆಂಬರ್ 14 ರಂದು ಭಾನುವಾರ ಬೆಳಿಗ್ಗೆ 10 ಗಂಟೆಗೆ ದಾವಣಗೆರೆಯ ದೊಡ್ಡಪೇಟೆಯ ಶ್ರೀ ವಿರಕ್ತಮಠದ ಸಭಾಂಗಣದಲ್ಲಿ ಶ್ರೀ ಬಸವಣ್ಣನ ಕುರಿತಂತೆ ರಾಜ್ಯ ಮಟ್ಟದ ಉಚಿತ ಕವಿಗೋಷ್ಠಿ ಉದ್ಘಾಟನೆ ನಡೆಯಲಿದೆ ಎಂದು ಕಲಾಕುಂಚದ ಪ್ರಧಾನ ಕಾರ್ಯದರ್ಶಿ ಕೆ.ಸಿ. ಉಮೇಶ್ ತಿಳಿಸಿದ್ದಾರೆ.ಸಮಾರಂಭದ ದಿವ್ಯ ಸಾನಿದ್ಯ ಹಾಗೂ ಅಧ್ಯಕ್ಷತೆಯನ್ನು ಶ್ರೀ ವಿರಕ್ತಮಠದ ಗುರುಗಳಾದ ಡಾ. ಶ್ರೀ ಬಸವಪ್ರಭು ಸ್ವಾಮೀಜಿಯವರು ವಹಿಸಿಕೊಳ್ಳಲಿದ್ದಾರೆ. ಉದ್ಘಾಟನೆಯನ್ನು ದಾವಣಗೆರೆಯ ಹಿರಿಯ ಸಾಹಿತಿ ಸೌಹಾರ್ದ ಪ್ರಕಾಶನದ ಸಂಸ್ಥಾಪಕದರಾದ ಶ್ರೀಮತಿ ಎ.ಸಿ.ಶಶಿಕಲಾ ಶಂಕರಮೂರ್ತಿಯವರು ನೆರವೇರಿಸಲಿದ್ದಾರೆ. ಮುಖ್ಯ ಅತಿಥಿಗಳಾಗಿ ದಾವಣಗೆರೆ ಜಾಗತಿಕ ಲಿಂಗಾಯತ ಮಹಾಸಭಾ ಮಹಿಳಾ ಘಟಕದ ಅಧ್ಯಕ್ಷರಾದ ಶ್ರೀಮತಿ ಕುಸುಮಾ ಲೋಕೇಶ್, ಕಲಾಕುಂಚದ ಸಂಸ್ಥಾಪಕರಾದ ಸಾಲಿಗ್ರಾಮ ಗಣೇಶ್ ಶೆಣೈ, ದಾವಣಗೆರೆಯ ಕಲಾಕುಂಚ ಸಿದ್ದವೀರಪ್ಪ ಬಡಾವಣೆಯ ಶಾಖೆಯ ಅಧ್ಯಕ್ಷರು ಕವಯತ್ರಿ ದಾನಿಗಳಾದ ಶ್ರೀ ಬಸವೇಶ್ವರ ಟ್ರಸ್ಟ್‌ನ ಮಹಾಂತೇಶ್ ಒಣರೊಟ್ಟಿ ಆಗಮಿಸಲಿದ್ದಾರೆ.

# ಸದೃಢ ಆರೋಗ್ಯಕ್ಕೆ ಕ್ರೀಡಾ ಕೂಟಗಳು ಸಹಕಾರಿ



ಚಿಕ್ಕಮಗಳೂರುಎಕ್ಸ್‌ಪ್ರೆಸ್:ವಿದ್ಯಾರ್ಥಿಗಳು ಕ್ರೀಡಾ ಮನೋಭಾವದಿಂದ ದಸರಾ ಕ್ರೀಡಾ ಕೂಟಗಳಲ್ಲಿ ಭಾಗವಹಿಸಿದಾಗ ಸದೃಢಆರೋಗ್ಯವಂತರಾಗಲು ಸಹಕಾರಿ ಎಂದು ಶಾಸಕ ಹೆಚ್.ಡಿತಮ್ಮಯ್ಯ ಹೇಳಿದರು.

ಅವರುಇಂದು ನಗರದ ನೇತಾಜಿ ಸುಭಾಷ್ ಚಂದ್ರಬೋಸ್ ಜಿಲ್ಲಾ ಆಟದ ಮೈದಾನದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ತಾಲ್ಲೂಕು ಪಂಚಾಯಿತಿ, ಶಾಲಾ ಶಿಕ್ಷಣ ಇಲಾಖೆ ಮತ್ತಿತರೆ ಇಲಾಖೆಗಳ ಸಹಯೋಗದೊಂದಿಗ ಏರ್ಪಡಿಸಲಾಗಿದ್ದದಸರಾಕ್ರೀಡಾಕೂಟದಅಧ್ಯಕ್ಷತೆಯನ್ನು ವಹಿಸಿ ಮಾತನಾಡಿದರು.

ಕಳೆದ 25 ವರ್ಷಗಳಿಂದ ವೈವಿಧ್ಯಮಯವಾಗಿ ವಿಜೃಂಭಣೆಯಿಂದ ನಡೆಯುತ್ತಿದ್ದದಸರಾಕ್ರೀಡಾಕೂಟಇತ್ತೀಚೆಗೆ ಕಳೆಗುಂದಿದೆ ಎಂದು ವಿಷಾಧಿಸಿದ ಅವರು, ಈ ಕ್ರೀಡಾಕೂಟತಾಲ್ಲೂಕು, ಜಿಲ್ಲಾ, ವಿಭಾಗ ಮಟ್ಟದ ನಂತರರಾಜ್ಯಮಟ್ಟದಕ್ರೀಡಾಕೂಟದಸರಾ ಸಂದರ್ಭದಲ್ಲಿ ಮೈಸೂರಿನಲ್ಲಿ ನಡೆಯಲಿದೆಎಂದರು.

ಧಾರ್ಮಿಕವಾಗಿಇತಿಹಾಸಇರುವದಸರಾ ಕ್ರೀಡಾಕೂಟ ಮೈಸೂರಿನಲ್ಲಿ ವಿಜಯದಶಮಿ ದಿನ ಚಾಮುಂಡೇಶ್ವರಿದಸರಾ ಮಹೋತ್ಸವದ ಅಂಗವಾಗಿ ರಾಜ್ಯಾದ್ಯಂತ ನಡೆಯುತ್ತಿದೆ. ತೀರ್ಪುಗಾರರು ಪ್ರಾಮಾಣಿಕವಾಗಿತೀರ್ಪು ನೀಡಿ, ಸಮಸ್ತರನ್ನುಆಯ್ಕೆಮಾಡಬೇಕೆಂದು ಮನವಿ ಮಾಡಿದರು.

ದುಷ್ಟಶಕ್ತಿಗಳನ್ನುಸಂಹಾರ ಮಾಡಲುಎಲ್ಲಾ ದೇವತೆಗಳು ತಮ್ಮ ಶಕ್ತಿಯನ್ನು ಧಾರೆಯೆರೆದು ಚಾಮುಂಡೇಶ್ವರಿಗೆಕೊಡುತ್ತಾರೆ. ಈ ದುಷ್ಟಶಕ್ತಿ ಸಂಹಾರ ಹಿಂದಿನ ಕಾಲದಲ್ಲಿ ಮಾತ್ರಇರದೆ ಈಗಾಲೂ ಬೇರೆ ಬೇರೆ ರೂಪದಲ್ಲಿ ನಮ್ಮ ನಡುವೆಇದ್ದಾರೆಎಂದು ಹೇಳಿದರು.

ಗ್ರಾಮೀಣ ಕ್ರೀಡೆಗಳು ಈ ದಸರಾಕ್ರೀಡಾಕೂಟದಲ್ಲಿ ಹೆಚ್ಚು ಪ್ರೋತ್ಸಾಹಿಸುವ ಜೊತೆಗೆಕಬ್ಬಡ್ಡಿ,

ಖೋಖೋ, ಲಾಂಗ್‌ಜಂಪ್, ಹೈ ಜಂಪ್, ಗುಂಡುಎಸೆತ ಮುಂತಾದವುಗಳು ನಶಿಸುತ್ತಿರುವ ಈ ಸಂದರ್ಭದಲ್ಲಿ ಅವುಗಳನ್ನು ಉಳಿಸಿ ಬೆಳೆಸಲು ಜಿಲ್ಲಾಡಳಿತ ಮತ್ತುಕ್ರೀಡಾ ಇಲಾಖೆ ಮುಂದಾಗಬೇಕೆಂದು ಸೂಚಿಸಿದರು.

ವಿಧಾನ ಪರಿಷತ್ ಸದಸ್ಯ ಸಿ.ಟಿ ರವಿ ಮಾತನಾಡಿ, ನಾಡಹಬ್ಬದಸರಾಉತ್ಸವಕ್ಕೆಧಾರ್ಮಿಕ, ಚಾರಿತ್ರಿಕಇತಿಹಾಸಇದೆ. ವಿಜಯನಗರ ಸಾಮ್ರಾಜ್ಯದಅವಧಿಯಲ್ಲಿದಸರಾ ಕೇಂದ್ರ ಬಿಂದುವಾಗಿದ್ದು, ಹೊರದೇಶಗಳಿಂದ ಸಾಂಸ್ಕೃತಿಕ ನಗರಿ ಮೈಸೂರಿಗೆ ಬಂದ ಪ್ರವಾಸಿಗರು ದಸರಾಕ್ರೀಡಾಕೂಟವನ್ನು ವೈಭವೀಕರಿಸಿದ್ದನ್ನು ನೋಡಿದ್ದೇವೆಎಂದರು.

ನಮ್ಮೊಳಗಿರುವ ಅಸುರ ಶಕ್ತಿ ದಮನಗೊಳಿಸಲು ಸಜ್ಜನ ಶಕ್ತಿ ವಿಜಯವಾಗಬೇಕು, ಅಸುರದಹನವಾಗಬೇಕು. ಆ ರೀತಿ ಪೌರಾಣಿಕ, ಧಾರ್ಮಿಕ ಹಿನ್ನೆಲೆಯಾದರೆದಸರಾಕ್ರೀಡಾಕೂಟವನ್ನು ವಿಜಯನಗರ ಸಾಮ್ರಾಜ್ಯ ಪಥನದ ನಂತರ ಮೈಸೂರುಅರಸರುಅದರ ಪರಂಪರೆಯನ್ನುದಸರಾಕ್ರೀಡಾಕೂಟದ ನೆಪದಲ್ಲಿ ನಡೆಸುತ್ತಿದ್ದಾರೆಂದು ವಿವರಿಸಿದರು.

ಯುವಕರು ಕುಸ್ತಿ ಸ್ಪರ್ಧೆಯಲ್ಲಿ ಭಾಗವಹಿಸಿ ಮನರಂಜನೆಯಜೊತೆಗೆಗರಡಿ ಮನೆಗಳಲ್ಲಿ ದೈಹಿಕ ಸಾಮರ್ಥ್ಯ ಹೆಚ್ಚಿಸಿಕೊಳ್ಳಲು ಕಾರಣವಾಗಿದೆ. ಈ ಮೂಲಕ ತರಬೇತಿ ನೀಡಿ ಸೈನ್ಯಕ್ಕೆಆಯ್ಕೆಮಾಡುವ ಪ್ರತೀತಿಇತ್ತುಎಂದು ಹೇಳಿದರು.

ಪ್ರತಿಯೊಬ್ಬರಲ್ಲಿ ಗೆಲುವಿನ ಹಂಬಲ, ಆತ್ಮವಿಶ್ವಾಸ ಮೂಡಿಸುವ ಈ ದಸರಾಕ್ರೀಡಾಕೂಟಕ್ರೀಡೆಯಜೊತೆಗೆ ಬದುಕಿನಲ್ಲಿ ಹಂಬಲ ಮೂಡಿಸಲು ಯಶಸ್ವಿಯಾಗಲಿ ಎಂದು ಶುಭ ಹಾರೈಸಿದರು.

ಮೊತ್ತೋರ್ವ ವಿಧಾನ ಪರಿಷತ್ ಸದಸ್ಯಎಸ್.ಭೋಜೇಗೌಡ ಮಾತನಾಡಿ, ಸೋಲೇ ಗೆಲುವಿನ ಮೆಟ್ಟಿಲುಎಂಬಂತೆತಮ್ಮ ಪ್ರತಿಭೆ ಹೊರಬರುವಲ್ಲಿ ಈ ಕ್ರೀಡಾಕೂಟ ಯಶಸ್ವಿಯಾಗಲಿ, ಎಲ್ಲಾ ಕ್ರೀಡಾಪಟುಗಳಲ್ಲಿ ಸಾಧನೆ ಮಾಡುತ್ತೇನೆ ಎಂಬ ಛಲದೊಂದಿಗೆ ಮುನ್ನಡೆಯಿರಿಎಂದು ಕಿವಿಮಾತು ಹೇಳಿದರು.

ಯುವಜನ ಸೇವಾ ಮತ್ತುಕ್ರೀಡಾಇಲಾಖೆಯಉಪನಿರ್ದೇಶಕರಾದ ಮಂಜುಳಹುಲ್ಲಳ್ಳಿ ಪ್ರಾಸ್ತಾವಿಕವಾಗಿ ಮಾತನಾಡಿದರು.

ದಾವಣಗೆರೆಯಲ್ಲಿ ನಡೆದ ಜಾತಿ ಜನಗಣತಿ ಸಮಾಲೋಚನಾ ಸಭೆ

# ಲಿಂಗಾಯತರು ಮತ್ತು ಒಕ್ಕಲಿಗರನ್ನು ಹತ್ತಿಕ್ಕುವ ಯತ್ನ; ವಚನಾನಂದ ಸ್ವಾಮೀಜಿ




**ದಾವಣಗೆರೆ:** 'ಜಾತಿ ಜನಗಣತಿ ಮೂಲಕ ಲಿಂಗಾಯತರು, ಒಕ್ಕಲಿಗರನ್ನು ಹತ್ತಿಕ್ಕುವ ಯತ್ನ ನಡೆಯುತ್ತಿದ್ದು,

ಪಂಚಮಸಾಲಿಗಳು ಜಾಗೃತರಾಗಬೇಕು, ಎಂದುವೀರಶೈವ ಲಿಂಗಾಯತ ಪಂಚಮಸಾಲಿ ಜಗದ್ಗುರು ವಚನಾನಂದ ಮಹಾಸ್ವಾಮೀಜಿ ಕರೆನೀಡಿದರು. ನಗರದ ವೀರಶೈವ ಲಿಂಗಾಯತ ಪಂಚಮಸಾಲಿ ಸಮಾಜದ ಕಛೇರಿಯಲ್ಲಿ ನಡೆದ ವೀರಶೈವ ಲಿಂಗಾಯತ ಪಂಚಮಸಾಲಿ ಸಮಾಜದ ದಾವಣಗೆರೆ ಜಿಲ್ಲಾ ಘಟಕ ಏರ್ಪಡಿಸಿದ ಜಾತಿಗಣತಿ ಸಮಾಲೋಚನೆ ಸಭೆಯಲ್ಲಿ ಅವರು ಮಾತನಾಡಿದರು.

ಲಿಂಗಾಯತ, ವೀರಶೈವ ಪಂಚಮಸಾಲಿ ಸಮಾಜದವರೆಲ್ಲಾ ಒಂದೇ. ನಾವೆಲ್ಲಾ ಅಪ್‌ಡೇಟೆಡ್ ಪಂಚಮಸಾಲಿಗಳಾಗಬೇಕು. 2008ರಿಂದ ಪೀಠ ಹುಟ್ಟಿದಾಗಿನಿಂದ ಇಂದಿಗೂ ಸಮಾಜಕ್ಕೆ ನ್ಯಾಯ ಸಿಕ್ಕಿದೆಯಾ? ಸಮಾಜದ ಕಟ್ಟಕಡೆಯವನಿಗೆ ಏನಾದರೂ ಲಾಭವಾಗಿದೆಯಾ ಎಂಬುದನ್ನು ಚಿಂತಿಸಬೇಕಿದೆ. ಇವತ್ತಿಗೂ ನಮ್ಮಲ್ಲಿ ಗೋಜಲು, ಸಮಸ್ಯೆ ಇದ್ದು, ನಾವು ಪ್ರಯೋಜನ ಪಡೆಯಲಾಗಿಲ್ಲ. ಸಮಾಜದ ಮುಖಂಡರಲ್ಲಿ ಭವಿಷ್ಯದ ಚಿಂತನೆ ಬಂದರೆ ಮಾತ್ರವೇ ಸಮಾಜ ಮುಂದಾಗುತ್ತದೆ, ಎಂದರು. 2014ರಲ್ಲಿ ಪಂಚಮಸಾಲಿ ಸಮುದಾಯದ ಜನಸಂಖ್ಯೆ 10, 60,007 ಎಂದು ತೋರಿಸಿರುವುದು ಒಂದು ವ್ಯವಸ್ಥಿತ ಷಡ್ಯಂತ್ರ. ಅಹಿಂದಾ ಜನಸಂಖ್ಯೆ ಹೆಚ್ಚು ತೋರಿಸಿ, ಲಿಂಗಾಯತರ ಜನಸಂಖ್ಯೆ ಕಡಿಮೆ ತೋರಿಸುವುದೇ ಜಾತಿ ಜನಗಣತಿಯ ಹಿಂದಿನ ದುರುದ್ದೇಶ. ಲಿಂಗಾಯತರು ಮಂತ್ರಿ, ಶಾಸಕರು ಇದನ್ನು ವಿರೋಧಿಸಿದಾಗ ಸರ್ಕಾರ ಮರು ಸರ್ವೇ ಆರಂಭಿಸಿದೆ. ಕೇವಲ 15 ದಿನದಲ್ಲಿ ಕರ್ನಾಟಕದ 7ಕೋಟಿ ಜನರ ಸಮೀಕ್ಷೆ ನಡೆಸಲು ಸಾದ್ಯವಿಲ್ಲ, ಕನಿಷ್ಠ ಮೂರು ತಿಂಗಳಾದರೂ ಬೇಕು. ವೀರಶೈವ ಮತ್ತು ಲಿಂಗಾಯತ ನಾಯಕರಿಗಾರಿಗೂ ಬದ್ದತೆಯಿಲ್ಲ. ಯಾವ ನಾಯಕರೂ ವೀರಶೈವ ಲಿಂಗಾಯತರು ಒಂದೇ ಎಂದು ಹೇಳಿಲ್ಲ. ಅವರ ಕಿತ್ತಾಟವೇ ಮುಗಿಯುವ ಲಕ್ಷಣ ಕಾಣುತ್ತಿಲ್ಲ.

ವಿದ್ಯುತ್ ಮೀಟರ್ ಆಧರಿಸಿ ಜಾತಿ ಗಣತಿ ನಡೆಯುತ್ತಿದೆ. ಆಧಾರ್ ಕಾರ್ಡ್ ಸೆ.22ರೊಳಗಾಗಿ ಪಡೆಯದಿದ್ದರೆ ಯಾವ ಕಾರಣಕ್ಕೂ ಜನಗಣತಿಗೆ ಬರುವುದಿಲ್ಲ. ರೇಷನ್ ಕಾರ್ಡ್, ಎಲೆಕ್ಷನ್ ಕಾರ್ಡ್‌ನ್ನು ಹಾಕಬೇಕು. ಒಕ್ಕಲಿಗರು ಈಗಾಗಲೇ ಜಾತಿ ಜನಗಣತಿ ಸಿಬ್ಬಂದಿ ಜತೆಗೆ ಒಬ್ಬರು ಸಮಾಜದವರನ್ನು ಕಳಿಸುತ್ತಿದ್ದು,. ಅದೇ ರೀತಿ ಮಾಡಲು ನಮ್ಮ ರಾಜ್ಯ ಘಟಕದಿಂದಲೂ ವ್ಯವಸ್ಥೆ ಮಾಡಲಾಗುತ್ತದೆ, ಎಂದರು.

ಕಾಶೀನಾಥ್ ಪ್ರಾಸ್ತಾವಿಕ ಮಾತನಾಡಿ, ಸಮಾಜ ತ್ರಿಶಂಕು ಸ್ಥಿತಿಯಲ್ಲಿದ್ದೇವೆ. ವಚನಾನಂದ ಸ್ವಾಮೀಜಿ ಹದಿನಾಲ್ಕು ಜಿಲ್ಲೆ ತಿರುಗಿ ಅಭಿಪ್ರಾಯ ಸಂಗ್ರಹಿಸಿದ್ದಾರೆ. ರಾಜ್ಯ ಘಟಕ ಇದಕ್ಕಾಗಿ ಚಿಂತನ ಕೂಟ ನಡೆಸಬೇಕು. ನಮ್ಮ ಶಕ್ತಿ ಸಮಾಜಕ್ಕೆ ತೋರಿಸಲೇಬೇಕು. ಕಾಲಂನಲ್ಲಿ ಪಂಚಮಸಾಲಿ ಎಂಬ ಪದ ಬರೆಸಲೇಬೇಕು, ಎಂದು ಒತ್ತಾಯಿಸಿದರು.

ಪಂಚಮಸಾಲಿ ಪೀಠದ ಆಡಳಿತಾಧಿಕಾರಿ ಡಾ. ರಾಜಕುಮಾರ್ ಮಾತನಾಡಿ, ಸಮೀಕ್ಷೆಗೆ ಸಮಾಯಾವಕಾಶ ನ್ಯಾಯಾಲಯದಿಂದಲೂ ಪಡೆಯಬಹುದು. ನಮ್ಮ ಆರ್ಥಿಕ ಸ್ಥಿತಿಯನ್ನೂ ನಮೂದಿಸಬೇಕು. ಯಾರೂ ಆತಂಕ ಪಡಬೇಕಿಲ್ಲ. ನಮ್ಮ ಬದುಕನ್ನು ನಾವೇ ರೂಪಿಸಿಕೊಳ್ಳಬೇಕು, ಎಂದರು.

ಸಮಾಜದ ಜಿಲ್ಲಾ ಘಟಕ ಅಧ್ಯಕ್ಷ ಬಿ. ಸಿ. ಉಮಾಪತಿ ಮಾತನಾಡಿ, ನಮ್ಮನ್ನು ತುಳಿಯುವ ಸಲುವಾಗಿಯೇ ಇಂತ ಜಾತಿಗಣತಿ ಮಾಡಲಾಗುತ್ತಿದೆ.

ಹಿಂದುಳಿದ ಆಯೋಗದ ವರದಿಯಲ್ಲಿ ಸೇರಿಸಲು ಬಹುದೊಡ್ಡ ಹೋರಾಟ ಮಾಡಲಾಯಿತು. ನಮ್ಮನ್ನು ಜಾತಿ ಪಟ್ಟಿಗೆ ಸೇರಿಸಿದಾಗ 2009ರಲ್ಲಿ ಅನೇಕರ ಉಪ ಪಂಗಡದವರು ವಿರೋಧಿದರು. ವೀರಶೈವ ಲಿಂಗಾಯತ, ಇವು ಜಾತಿಗಳಲ್ಲ, ಧರ್ಮಗಳು. ವೀರಶೈವ ಪಂಚಮಸಾಲಿ, ಲಿಂಗಾಯತ ಪಂಚಮಸಾಲಿಗಳು ಎಂಬುದನ್ನು ಒಂದೇ ಎಂದು ಸರ್ಕಾರ ಘೋಷಿಸಬೇಕು, ಎಂದು ಒತ್ತಾಯಿಸಿದರು.

ಜಿಲ್ಲಾ ಘಟಕದ ಉಪಾಧ್ಯಕ್ಷ ದೊಡ್ಡಪ್ಪ ಸ್ವಾಗತಿಸಿದರು. ವಾಣಿ ಶಿವಣ್ಣ, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಕಾಶಿನಾಥ್, ಹೊನ್ನಾಳಿ ತಾಲ್ಲೂಕು ಘಟಕದ ಅಧ್ಯಕ್ಷ . ವೀರಣ್ಣ ಪಟ್ಟಣಶೆಟ್ಟಿ,, ರಾಜ್ಯ ದಾಸೋಹ ಸಮಿತಿ ಕಾರ್ಯದರ್ಶಿ ಪ್ರಕಾಶ್ ಪಾಟೀಲ್, ಹರ ಸೈನ್ಯ ಪ್ರಧಾನ ಕಾರ್ಯದರ್ಶಿ ಮುಕುಂದ, ಮುಖಂಡರಾದ ಮಲ್ಲಿನಾಥ್,, ಕಿತ್ತೂರು ವೀರಣ್ಣ, ಬಿಸಲೇರಿ ಜಯಣ್ಣ, ಗುಳದಹಳ್ಳಿ ಶೇಖರಪ್ಪ , ಮಾಯಕೊಂಡ ರುದ್ರೇಶ್, ಬಾಡಾ ನಾಗಣ್ಣ, ಮತ್ತಿತರರು ಇದ್ದರು.

ತಾಲೂಕು ಆರ್ಯ ಈಡಿಗರ ಸಂಘದ ಅಧ್ಯಕ್ಷ ಕೃಷ್ಣಮೂರ್ತಿ ಅನಿಸಿಕೆ । 171ನೇ ಜಯಂತ್ಯುತ್ಸವ ಆಚರಣೆ

# ಕೇರಳ ರಾಜ್ಯದ ಸಾಕ್ಷರತೆಗೆ ಬ್ರಹ್ಮಶ್ರೀ ನಾರಾಯಣ ಗುರು ಕಾರಣ

**ಹರಿಹರ** : ಕೇರಳ ರಾಜ್ಯವು ದೇಶದಲ್ಲಿ ಅತಿ ಹೆಚ್ಚು ಸಾಕ್ಷರತೆ ಹೊಂದಲು ಬ್ರಹ್ಮಶ್ರೀ ನಾರಾಯಣ ಗುರುಗಳ ಪರಿಶ್ರಮವೇ ಕಾರಣ ಎಂದು ಹರಿಹರ ತಾಲೂಕು ಅರ್ಯ ಈಡಿಗರ ಸಂಘದ ಅಧ್ಯಕ್ಷ ವೈ. ಕೃಷ್ಣಮೂರ್ತಿ ಹೇಳಿದರು.

ನಗರದ ತಾಲೂಕು ಕಚೇರಿಯಲ್ಲಿ ಭಾನುವಾರ ಹಮ್ಮಿಕೊಂಡಿದ್ದ ಬ್ರಹ್ಮಶ್ರೀ ನಾರಾಯಣ ಗುರು ಅವರ 171ನೇ ಜಯಂತ್ಯುತ್ಸವ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದರು.

ಜಾತಿಯವರು ಸಾಮಾಜಿಕವಾಗಿ ಹಿಂದುಳಿದಿರುವುದನ್ನು ಅರಿತ ನಾರಾಯಣ ಗುರುಗಳು ರಾಜ್ಯಾದ್ಯಂತ ಶಿಕ್ಷಣ ಸಂಸ್ಥೆಗಳನ್ನು ಆರಂಭಿಸಿದರು. ಶ್ರೀಮಂತರು ಮೇಲ್ವರ್ಗದವರು ಮಾತ್ರ ಶಿಕ್ಷಣ ಪಡೆಯುವ ಪರಂಪರೆಯನ್ನು ಅವರು ಮುರಿದ ಪರಿಣಾಮ ಕೇರಳ ಸಾಕ್ಷರತೆಯಲ್ಲಿ ದೇಶದ ಗಮನ ಸೆಳೆಯಲು ಸಾಧ್ಯವಾಯಿತು ಎಂದರು.

ಕೆಳ ಜಾತಿಯವರಿಗೆ ದೇವಸ್ಥಾನಗಳಲ್ಲಿ ಪ್ರವೇಶ ನಿಷೇಧ ಇರುವುದನ್ನು ಅರಿತು ಗುರುಗಳೇ ದೇವಸ್ಥಾನಗಳನ್ನು ಸ್ಥಾಪಿಸಿ ಎಲ್ಲ ವರ್ಗದವರಿಗೂ ಆಧ್ಯಾತ್ಮಿಕ ಹಸಿವನ್ನು ನೀಗಿಸಿ ಕೇರಳದಲ್ಲಿ ಆಧ್ಯಾತ್ಮಿಕ ಸ್ವಾತಂತ್ರ್ಯವನ್ನು ನೀಡಿದರು ಎಂದು ಸ್ಮರಿಸಿದರು.

ಕರ್ನಾಟಕದಲ್ಲಿ ಬಸವಣ್ಣನವರ ಹಾಗೆಯೇ ಕೇರಳದಲ್ಲಿ ನಾರಾಯಣ ಗುರುಗಳು ಸಾಮಾಜಿಕ, ಸಾರ್ಮಿಕ ಕಾಂತಿಯನ್ನು ಮಾಡಿದರು. ಕೆಳ ತಾಲೂಕು ಆರ್ಯ ಈಡಿಗರ ಸಂಘದ ಕಾರ್ಯದರ್ಶಿ ಪ್ರೀತಮ್ ಬಾಬು ಮಾತನಾಡಿ,

ಜಾತಿಯವರು ನೆರಳು ಮೇಲ್ವರ್ಗದವರ ಮೇಲೆ ಅಳಿಸುವಂತೆ ಕೆಳ ಜಾತಿಯವರು ಹಿಂಭಾಗದಲ್ಲಿ ಪರಕೆ ಕಟ್ಟಿಕೊಂಡು ಓಡಾಡಬೇಕಿದ್ದ ಕೇರಳದಲ್ಲಿ ಸಮಾನತೆ, ಸಹಬಾಳ್ವೆಯ ವಾತಾವರಣ ಸೃಷ್ಟಿಸಿದರು. ಎಂದು ಹೇಳಿದರು.

ನಗರಸಭೆ ಸದಸ್ಯ ಕೆ.ಬಿ.ರಾಜಶೇಖರ್, ಹರಿಹರ ತಾಲೂಕು ಮಡಿವಾಳ ಸಮಾಜದ ಅಧ್ಯಕ್ಷ ಎಂ.ಎಚ್ .ಭೀಮಣ್ಣ, ರಾಜೇಶ್, ಕಿರಣ್, ಮಾರುತಿ ಮರಿಯೋಜಿರಾವ್, ಆನಂದ್, ಸುನೀಲ್, ಆಂಜನೇಯಸ್ವಾಮಿ, ವೆಂಕಟೇಶ್, ಕಂದಾಯ ಅಧಿಕಾರಿ ಸಮೀರ್ ಸಾಬ್,

ಹರಿಹರ ತಾಲೂಕು ಕಚೇರಿಯಲ್ಲಿ ಭಾನುವಾರ ಬ್ರಹ್ಮಶ್ರೀ ಗುರು ನಾರಾಯಣರ ಜಯಂತ್ಯುತ್ಸವ ಆಚರಿಸಲಾಯಿತು. ವೈ. ಕೃಷ್ಣಮೂರ್ತಿ, ಪ್ರೀತಮ್ ಬಾಬು, ಎಂ.ಎಚ್.ಭೀಮಣ್ಣ ಇತರರಿದ್ದರು, 2. ಚನ್ನಗಿರಿ ತಾಲೂಕು ಕಚೇರಿಯಲ್ಲಿ ಭಾನುವಾರ ಆಯೋಜಿಸಲಾಗಿದ್ದ ಬ್ರಹ್ಮಶ್ರೀ ನಾರಾಯಣ ಗುರುಗಳ 171ನೇ ಜಯಂತ್ಯುತ್ಸವ ಕಾರ್ಯಕ್ರಮದಲ್ಲಿ ಎನ್.ಜೆ. ನಾಗರಾಜ್, ವೈ.ಗಂಗಾಧರ, ಎಸ್. ಗಂಗಾಧರ ಸ್ವಾಮಿ ದೊಡ್ಡಘಟ್ಟ, ಎಲ್. ಪರಮೇಶ್, ಎಚ್. ತಿಪ್ಪೇಸ್ವಾಮಿ, ಎಂ. ದಯಾನಂದ್, ಎಚ್. ಆಂಜನೇಯ, ಓಂಕಾರ್ ಮೂರ್ತಿ, ಬಾಲರಾಜ್, ಸುರೇಶ್ ಇದ್ದರು.


# ಜಿಲ್ಲಾ 186 ನೇ ಛಾಯಾಗ್ರಹಣ ದಿನಾಚರಣೆ



**ಚಿಕ್ಕಬಳ್ಳಾಪುರ** : ಜಿಲ್ಲಾ 186 ನೇ ಛಾಯಾಗ್ರಹಣ ದಿನಾಚರಣೆ ಅಂಗವಾಗಿ ಚಿಕ್ಕಬಳ್ಳಾಪುರ ಜಿಲ್ಲಾ ಛಾಯಾಗ್ರಾಹಕರ ಸಂಘದ ವತಿಯಿಂದ 7.9.25 ರಂದು ಅಂಬೇಡ್ಕರ್ ಭವನದಲ್ಲಿ ಇಂದು ನಡೆದ ಜಿಲ್ಲೆಯ ಛಾಯಾಗ್ರಾಹಕರ ಮೆರವಣಿಗೆ ಕಾರ್ಯಕ್ರಮವನ್ನು ಜಿಲ್ಲಾಧ್ಯಕ್ಷರಾದ ಶ್ರೀನಿವಾಸ್ ರವರು, ಬ್ರಹ್ಮಚಾರಿ ರವರು ಹಾಗೂ ರೂಪಸಿ ರಮೇಶ್.ಜಿ ಕೃಷ್ಣಾಚಾರಿ ರವರು ಉಪಾಧ್ಯಕ್ಷರು ದನಪಾಲ್ ಗುಪ್ತ ಕಾರ್ಯದರ್ಶಿ ಶ್ರೀನಿವಾಸ ಆಚಾರಿ ಖಜಾಂಚಿ ನಾಗರಾಜ್ ಚಾಲನೆಯನ್ನು ನೀಡಿದರು. ವೇದಿಕೆ ಕಾರ್ಯಕ್ರಮದಲ್ಲಿ ನೂತನ ಜಿಲ್ಲಾ ಪದಾಧಿಕಾರಿಗಳ ಸಂಘವನ್ನು ಶ್ರೀ ಕೆ ವಿ ಮತ್ತು ಪಂಚಗರಿ ಟ್ರಸ್ಟ್ ಅಧ್ಯಕ್ಷರಾದ ಶ್ರೀ ಕೆವಿ ನವೀನ್ ಕಿರಣ್ ರವರು , ಜಿಲ್ಲಾಧ್ಯಕ್ಷರಾದ ಶ್ರೀನಿವಾಸ್ ರವರು, ಕೆಪಿಎ ಅಧ್ಯಕ್ಷರಾದ ನಾಗೇಶ್. ಜಿಲ್ಲಾ ಸಲಹೆಗಾರ ಮಿಲ್ಕಿ ಮಂಜುನಾಥ್. ಮೂರ್ತಿ ಉಪಾಧ್ಯಕ್ಷರು ನಂಜುಂಡ ಬಾಬು. ಮಾರಪ್ಪ. ಸಹ ಕಾರ್ಯದರ್ಶಿ ಎಂ ಮುನಿರಾಜು ಸಂಚಾಲಕರು ಎಸ್ ಲೋಕೇಶ್. ಅ ಮಂಜುನಾಥ್. ಸಂಘಟನಾ ಕಾರ್ಯದರ್ಶಿ ರವೀಂದ್ರ ಕುಮಾರ್. ರಾಮಚಂದ್ರ. ಸುರೇಂದ್ರ. ರವರು ದೀಪ ಬೆಳಗಿಸಿ ಉದ್ಘಾಟಿಸಿದರು. ಈ ಸಂದರ್ಭದಲ್ಲಿ ಜಿಲ್ಲೆಯ ಎಲ್ಲಾ ಪದಾಧಿಕಾರಿಗಳು ಹಾಗೂ ಐದು ತಾಲೂಕಿನ ಅಧ್ಯಕ್ಷರು ಮತ್ತು ಪದಾಧಿಕಾರಿಗಳು ಹಾಗೂ ಸದಸ್ಯರು ಭಾಗವಹಿಸಿದ್ದರು

ಬ್ರಹ್ಮಶ್ರೀ ನಾರಾಯಣಗುರು ಜಯಂತಿ ಆಚರಣೆಯಲ್ಲಿ ಶಾಸಕ ಕೆ.ಎಸ್.ಬಸವಂತಪ್ಪ ಬಣ್ಣನೆ

# ಮೌಢ್ಯಾಚರಣೆ ವಿರುದ್ಧ ಹೋರಾಡಿದ ಮಹಾನ್ ಚೇತನ ನಾರಾಯಣ ಗುರು



**ದಾವಣಗೆರೆ:** ಸಮಾಜದಲ್ಲಿ ಅಸಮಾನತೆ ಹಾಗೂ ಮೌಢ್ಯಾಚರಣೆ ವಿರುದ್ಧವಾಗಿ ಹೋರಾಡಿ ಸಮಾನತೆಯೆಡೆಗೆ ಕೊಂಡೊಯ್ದ ಮಹಾನ್ ಮಾನವತವಾದಿ ಶ್ರೀ ನಾರಾಯಣ ಗುರು ಎಂದು ಮಾಯಕೊಂಡ ಕ್ಷೇತ್ರದ ಶಾಸಕ ಕೆ.ಎಸ್.ಬಸವಂತಪ್ಪ ಬಣ್ಣಿಸಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಭಾನುವಾರ ಜಿಲ್ಲಾಡಳಿತ ಮತ್ತು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಯೋಗದಲ್ಲಿ ಆಯೋಜಿಸಲಾಗಿದ್ದ ಶ್ರೀ ನಾರಾಯಣಗುರು ಜಯಂತಿಯಲ್ಲಿ ನಾರಾಯಣಗುರು ಭಾವ ಚಿತ್ರಕ್ಕೆ ಪುಷ್ಪಾರ್ಚನೆ ಸಲ್ಲಿಸಿ ಅವರು ಮಾತನಾಡಿದರು.

ಹಿಂದೆ ಸ್ವಾರ್ಥ ತುಂಬಿದ ಪ್ರಪಂಚದಲ್ಲಿ ಮನುಷ್ಯ ಮನುಷ್ಯರ ನಡುವೆ ಪ್ರೀತಿ ಸಹಬಾಳ್ವೆ, ಮಾನೀಯತೆ ಬೆಸುಗೆ ಬೆಸೆದ ಮಹಾನ್ ಮಾನವತಾವಾದಿ. ಸಮಾಜದಲ್ಲಿ ಅಸಮಾನತೆ, ಅಸ್ಪೃಶ್ಯತೆ ತಾಂಡವಾಡುವ ಹೊತ್ತಿನಲ್ಲಿ ಶಿಕ್ಷಣ ನೀಡುವ ಸಲುವಾಗಿ ರಾತ್ರಿ ಶಾಲೆ, ವಿಶೇಷವಾದ ದೇವಸ್ಥಾನಗಳನ್ನು ಸ್ಥಾಪಿಸಿ ಸಮಾನತೆ ಕಲ್ಪಿಸಿಕೊಟ್ಟರು. ಅಂತಹ ದಾರ್ಶನಿಕರ ಜಯಂತಿಯನ್ನು ಕೇವಲ ಜಯಂತಿಗಳಿಗೆ ಸೀಮಿತಗೊಳಿಸದೇ ಅವರ ತತ್ವಾದರ್ಶಗಳನ್ನು ಮೈಗೂಡಿಸಿಕೊಳ್ಳಬೇಕು. ಆಗ ಮಾತ್ರ ಜಯಂತಿ ಅರ್ಥಪೂರ್ಣವಾಗಲಿದೆ ಎಂದರು.

ಅಪರ ಜಿಲ್ಲಾಧಿಕಾರಿ ಶೀಲವಂತ ಶಿವಕುಮಾರ ಮಾತನಾಡಿ, ಗುರು ಹಿರಿಯರು ಹಾಕಿಕೊಟ್ಟ ಸಲಹೆ-ಸೂಚನೆ, ಆಚಾರ-ವಿಚಾರವನ್ನು ಸಂಘ, ಸಮುದಾಯವಷ್ಟೇ ಅಲ್ಲದೇ ಎಲ್ಲಾ ಮನುಕುಲ ಪಾಲನೆ ಮಾಡಿ, ಸಮಾಜದಲ್ಲಿ ಇಂದಿಗೂ ಮೌಢ್ಯತೆ, ಮೂಢ ನಂಬಿಕೆ ಜೀವಂತವಾಗಿರುವುದು ನಾವು ಕಾಣಬಹಹುದು. ನಮ್ಮಲ್ಲಿನ ಮೂಢ ನಂಬಿಕೆ ತೊಲಗಿಸಿ ಮುಂದೆ ಸಾಗಿದಲ್ಲಿ ನಾರಾಯಣಗುರು ಹಾಕಿ ಕೊಟ್ಟ ಪಥದಲ್ಲಿ ಸಾಗಿದಂತೆ ಎಂದ ಅವರು, ಜಯಂತಿಗಳು ಕೇವಲ ಮಾತಿಗೆ, ಪುಷ್ಪಾರ್ಚನೆಗೆ ಸೀಮಿತವಾಗದೆ ಅವರ ಆದರ್ಶಗಳನ್ನು ಜೀವನದಲ್ಲಿ ಅಳವಡಿಸಿಕೊಂಡು ಅಳಿಲು ಸೇವೆ ಮಾಡಿದಲ್ಲಿ ಜೀವನ ಸಾರ್ಥಕ ಎಂದರು.

ಸಮಾಜದ ಜಿಲ್ಲಾ ಅಧ್ಯಕ್ಷ ನಾಗರಾಜ್ ಮಾತನಾಡಿ, ಅನಿಷ್ಟ ಪದ್ದತಿಗಳ ವಿರುದ್ದ ಹೋರಾಡಿ, ರಾತ್ರಿ ಶಾಲೆ ತೆರೆದು ತಳ ಸಮುದಾಯಕ್ಕೂ ಶಿಕ್ಷಣ ಒದಗಿಸಿ ಒಂದೇ ಜಾತಿ, ಒಂದೇ ಧರ್ಮ, ಒಬ್ಬನೇ ದೇವರು ಎಂಬ ಸಂದೇಶ ಸಾರಿದ ವ್ಯಕ್ತಿ ನಾರಾಯಣ ಗುರು. ಮಕ್ಕಳಿಗೆ, ಶಿಕ್ಷಣಕ್ಕೆ ಹೆಚ್ಚಿನ ಒತ್ತು ನೀಡಿದರು. ಇಂದು ಕೇರಳದಲ್ಲಿ ಶೇ. 100 ರಷ್ಟು ಸಾಕ್ಷರತೆ ಹೊಂದಿದೆ ಎಂದರೆ ಅದಕ್ಕೆ ಕಾರಣ ನಾರಾಯಣ ಗುರು. ಅವರು ಯಾವುದೋ ಒಂದು ಜಾತಿ ಜನಾಂಗಕ್ಕೆ ಸೀಮಿತವಾಗದೇ ಇಡೀ ಮಾನವ ಕುಲಕ್ಕೆ ಆದರ್ಶ ಪುರುಷ ಎಂದರು.

ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯ ನಿರ್ದೇಶಕ ರವಿಚಂದ್ರ ಸ್ವಾಗತಿಸಿ ಕಾರ್ಯಕ್ರಮ ನಿರೂಪಿಸಿದರು.

ಕಾರ್ಯಕ್ರಮದಲ್ಲಿ ಜಿಲ್ಲಾ ಪಂಚಾಯತ್ ಸಹಾಯಕ ಕಾರ್ಯದರ್ಶಿ ಬಸವರಾಜ್, ಈಡಿಗ ಸಮಾಜದ ಗೌರವಾಧ್ಯಕ್ಷ ಹೆಚ್.ಶಂಕರ್, ಕಾರ್ಯದರ್ಶಿ ದೇವೆಂದ್ರಪ್ಪ, ಉಪಾಧ್ಯಕ್ಷರಾದ ಶಾಂತರಾಮ್, ರವೀಂದ್ರ ಸೇರಿದಂತೆ ಸಮಾಜದ ಮುಖಂಡರು ಉಪಸ್ಥಿತರಿದ್ದರು.

# ಎಸ್‌ಎಸ್‌ಎಲ್‌ಸಿ ಕಳಪೆ ಫಲಿತಾಂಶ: ಅನುದಾನಿತ ಶಾಲೆಗಳಿಗೆ ನೋಟಿಸ್

## ಕೆಡಿಪಿ ಸಭೆಯಲ್ಲಿ ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ್ ಸೂಚನೆ



**ಚಿತ್ರದುರ್ಗ:** ಜಿಲ್ಲೆಯಲ್ಲಿ ಕಳೆದ ಬಾರಿಯ ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಅತ್ಯಂತ ಕಳಪೆ ಫಲಿತಾಂಶ ಪಡೆದ ಅನುದಾನಿತ ಪ್ರೌಢಶಾಲೆಗಳಿಗೆ ನೋಟಿಸ್ ನೀಡಿ, ಕ್ರಮ ಕೈಗೊಳ್ಳುವಂತೆ ಯೋಜನೆ ಮತ್ತು ಸಾಂಖ್ಯಿಕ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ್ ಹೇಳಿದರು.

ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಸೋಮವಾರ ಏರ್ಪಡಿಸಲಾದ ತ್ರೈಮಾಸಿಕ ಕೆಡಿಪಿ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಸರ್ಕಾರದ ಅನುದಾನ, ಸೌಲಭ್ಯಗಳನ್ನೆಲ್ಲಾ ಪಡೆದು, ಜಿಲ್ಲೆಯ ಎಸ್‌ಎಸ್‌ಎಲ್‌ಸಿ ಫಲಿತಾಂಶ ಕಡಿಮೆಯಾಗಲು ಈ ಶಾಲೆಗಳೇ ಪ್ರಮುಖ ಕಾರಣವಾದರೆ ಸಹಿಸಲು ಸಾಧ್ಯವಿಲ್ಲ ಎಂದು ಜಿಲ್ಲೆಯ ಅನುದಾನಿತ ಖಾಸಗಿ ಶಾಲೆಗಳ ಕಾರ್ಯವೈಖರಿ ಬಗ್ಗೆ ಸಚಿವ (ಡಿ. ಸುಧಾಕರ್ ಅವರು ತೀವ್ರ ಅಸಮಾಧಾನ ವ್ಯಕ್ತಪಡಿಸಿದರು.

ಕೆಡಿಪಿ ಸಭೆಯಲ್ಲಿ ಕಳೆದ ವರ್ಷದ ಜಿಲ್ಲೆಯ ಎಸ್‌ಎಸ್‌ಎಲ್‌ಸಿ ಫಲಿತಾಂಶ ಹಾಗೂ ಫಲಿತಾಂಶ ಸುಧಾರಣೆ ನಿಟ್ಟಿನಲ್ಲಿ ಕೈಗೊಳ್ಳಲಾಗುತ್ತಿರುವ ಕ್ರಮಗಳ ಬಗ್ಗೆ ಮಾಹಿತಿ ನೀಡಿದ ಜಿ.ಪಂ. ಸಿಇಒ ಡಾ. ಎಸ್. ಆಕಾಶ್ ಅವರು, ತಾವು ಈ ಹಿಂದೆ ಶಿಕ್ಷಣ ಇಲಾಖೆಯಲ್ಲಿ ಕೆಲಸ ಮಾಡಿದ ಅನುಭವದ ಆಧಾರದಲ್ಲಿ, ಎಸ್‌ಎಸ್‌ಎಲ್‌ಸಿ ಫಲಿತಾಂಶ ಸುಧಾರಣೆಗೆ ಏನೇನು ಕ್ರಮ ಕೈಗೊಳ್ಳಬೇಕು ಎಂಬುದನ್ನು ಗಂಭೀರವಾಗಿ ಚರ್ಚೆ ನಡೆಸಿದ್ದೇನೆ. ಈ ಬಾರಿಯ ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ರಾಜ್ಯಮಟ್ಟದಲ್ಲಿ 10ನೇ ಸ್ಥಾನದೊಳಗೆ ಜಿಲ್ಲೆ ಸ್ಥಾನ ಪಡೆಯಬೇಕು. ಈ ನಿಟ್ಟಿನಲ್ಲಿ ಈ ವಿಷಯವನ್ನು ತುಂಬಾ ಗಂಭೀರವಾಗಿ ಪರಿಗಣಿಸಲಾಗಿದ್ದು, ಈಗಾಗಲೇ ಶಿಕ್ಷಣ ಇಲಾಖೆ ಅಧಿಕಾರಿಗಳ ಸಭೆ ನಡೆಸಿ, ಸಲಹೆ ಸೂಚನೆ ನೀಡಲಾಗಿದೆ. 2024-25ನೇ ಸಾಲಿನ ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಜಿಲ್ಲೆಯು ರಾಜ್ಯದಲ್ಲಿ 23ನೇ ಸ್ಥಾನದಲ್ಲಿದೆ. ಎಸ್‌ಎಸ್‌ಎಲ್‌ಸಿ 2 ಮತ್ತು 3ನೇ ಪರೀಕ್ಷೆಯಲ್ಲಿ 21,881 ಮಕ್ಕಳಲ್ಲಿ 15,684 ಮಕ್ಕಳು ಉತ್ತೀರ್ಣರಾಗಿ ಶೇ.23ರಷ್ಟು ಫಲಿತಾಂಶ ಲಭಿಸಿದೆ ಎಂದು ತಿಳಿಸಿದ ಅವರು, ಜಿಲ್ಲೆಯಲ್ಲಿ ಕಳಪೆ ಫಲಿತಾಂಶ ಪಡೆದ ಶಾಲೆಗಳ ಪೈಕಿ ಅನುದಾನಿತ ಶಾಲೆಗಳೇ ಹೆಚ್ಚಾಗಿವೆ. ಸರ್ಕಾರಿ ಶಾಲೆಗಳಲ್ಲೇ ಉತ್ತಮ ಫಲಿತಾಂಶ ಬಂದಿದೆ. ಕಳಪೆ ಫಲಿತಾಂಶ ಪಡೆದ 40 ಸರ್ಕಾರಿ ಹಾಗೂ 60 ಅನುದಾನಿತ ಶಾಲೆಗಳು ಸೇರಿದಂತೆ ಒಟ್ಟು 100 ಶಾಲೆಗಳನ್ನು ಗುರುತಿಸಲಾಗಿದೆ. ಈ ಶಾಲೆಗಳಲ್ಲಿ ಫಲಿತಾಂಶ ಉತ್ತಮಪಡಿಸಲು ಈಗಾಗಲೇ ನೋಡಲ್ ಅಧಿಕಾರಿಗಳನ್ನು ನೇಮಕ ಮಾಡಲಾಗಿದೆ ಎಂದರು. ಸಚಿವರು ಮಾತನಾಡಿ, ಸರ್ಕಾರದಿಂದ ಸೌಲಭ್ಯ ಹಾಗೂ ಅನುದಾನ ಪಡೆಯುವ ಖಾಸಗಿ ಶಾಲೆಗಳಲ್ಲಿ ಕಳಪೆ ಫಲಿತಾಂಶ ಬಂದಿರುವುದು, ಅವರು ಉತ್ತಮ ಶಿಕ್ಷಣ ನೀಡುತ್ತಿಲ್ಲ ಎಂಬುದಕ್ಕೆ ನಿದರ್ಶನವಾಗಿದೆ. ಇವುಗಳಿಗಿಂತ ಸರ್ಕಾರಿ ಶಾಲೆಗಳೇ ಉತ್ತಮ ಫಲಿತಾಂಶ ಪಡೆದಿವೆ. ಹೀಗಾಗಿ ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಕಳಪೆ ಫಲಿತಾಂಶ ಪಡೆದಿರುವ ಅನುದಾನಿತ ಶಾಲೆಗಳಿಗೆ ನೋಟಿಸ್ ನೀಡಿ, ಕ್ರಮ ಕೈಗೊಳ್ಳಬೇಕು ಎಂದು ಸೂಚನೆ ನೀಡಿದ ಅವರು, ಕಡಿಮೆ ಫಲಿತಾಂಶ ಪಡೆದ ಸಂಬಂಧ ಶಾಲೆಯ ಮುಖ್ಯ ಶಿಕ್ಷಕರು ಹಾಗೂ ಕ್ಷೇತ್ರ ಶಿಕ್ಷಣಾಧಿಕಾರಿಗಳನ್ನು ನೇರ ಹೊಣೆಗಾರರನ್ನಾಗಿ ಮಾಡಬೇಕು. ಕಡಿಮೆ ಫಲಿತಾಂಶ ನೀಡಿದ ವಿಷಯವಾರು ಶಿಕ್ಷಕರ ವಿರುದ್ಧವೂ ಕ್ರಮಕೈಗೊಳ್ಳಬೇಕು ಎಂದು ಸಚಿವರು ಶಿಕ್ಷಣ ಇಲಾಖೆ ಉಪನಿರ್ದೇಶಕ ಎಂ.ಆರ್. ಮಂಜುನಾಥ್ ಅವರಿಗೆ ಸೂಚನೆ ನೀಡಿದರು.

ವಿಧಾನ ಪರಿಷತ್ ಶಾಸಕ ಕೆ. ಎಸ್.ನವೀನ್ ಮಾತನಾಡಿ, ಕಡಿಮೆ ಫಲಿತಾಂಶ ಪಡೆದ ಶಾಲೆಗಳಿಗೆ ಸೆಪ್ಟೆಂಬರ್ ಮಾಹೆಯಿಂದಲೇ ಫಲಿತಾಂಶ ಉತ್ತಮ ಪಡಿಸಲು ಪ್ರಯತ್ನ ನಡೆಸಿದರೆ ಶೇ.10ರಷ್ಟು ಫಲಿತಾಂಶ ಹೆಚ್ಚಳವಾಗಲಿದೆ. ಶಾಲಾ ಶಿಕ್ಷಣ ಇಲಾಖೆ ಉಪನಿರ್ದೇಶಕರು, ಕ್ಷೇತ್ರ ಶಿಕ್ಷಣಾಧಿಕಾರಿಗಳು ನಿರಂತರವಾಗಿ ಶಾಲೆಗಳಿಗೆ ಭೇಟಿ ನೀಡಿ, ಪರಿಶೀಲನೆ ನಡೆಸಬೇಕು ಎಂದು ಸೂಚನೆ ನೀಡಿದರು.

ಬೇಡಿಕೆಗಿಂತ ಹೆಚ್ಚು ಯೂರಿಯಾ ಪೂರೈಕೆಯಾಗಿದೆ : ಜಂಟಿಕೃಷಿ ನಿರ್ದೇಶಕ ಮಂಜುನಾಥ್ ಮಾತನಾಡಿ, ಜಾಗತಿಕವಾಗಿ ಅಲ್ಲಲ್ಲಿ ನಡೆದ ಯುದ್ಧಗಳ ಕಾರಣದಿಂದಾಗಿ ಯೂರಿಯಾ ಪೂರೈಕೆಯಲ್ಲಿ ಸ್ವಲ್ಪ ಸಮಸ್ಯೆ ಉಂಟಾಗಿತ್ತು. ಆದರೆ ಈಗ ಕೊರತೆ ಇಲ್ಲ. ಈವರೆಗೆ 26760 ಮೆ. ಟನ್ ಯೂರಿಯಾ ಮಾರಾಟವಾಗಿದ್ದು, ಪ್ರಸ್ತುತ 1533 ಟನ್ ಯೂರಿಯಾ ದಾಸ್ತಾನು ಲಭ್ಯವಿದೆ. ಬೇಡಿಕೆಗಿಂತಲೂ ಹೆಚ್ಚು ಯೂರಿಯಾ ಈಗ ಪೂರೈಕೆ ಆಗುತ್ತಿದೆ. ಜಿಲ್ಲೆಯಲ್ಲಿ ಮುಂಗಾರು ಹಂಗಾಮಿನಲ್ಲಿ 3.16 ಲಕ್ಷ ಹೆ. ಬಿತ್ತನೆ ಗುರಿ ಇದ್ದು, ಈವರೆಗೆ 2.71 ಲಕ್ಷ ಹೆ. ನಲ್ಲಿ ಬಿತ್ತನೆಯಾಗಿದೆ. ಹಿರಿಯೂರು ತಾಲ್ಲೂಕಿನಲ್ಲಿ ಮಾತ್ರ 40510 ಹೆ. ಗುರಿಗೆ ಬದಲಾಗಿ ಕೇವಲ 6759 ಹೆಕ್ಟೇರ್‌ನಲ್ಲಿ ಮಾತ್ರ ಬಿತ್ತನೆಯಾಗಿದೆ. ಜಿಲ್ಲೆಯಲ್ಲಿ 20,700 ಕ್ವಿಂಟಲ್ ಬಿತ್ತನೆ ಬೀಜ ವಿತರಣೆ ಮಾಡಲಾಗಿದೆ. ಜಿಲ್ಲೆಯಲ್ಲಿ ಕಳೆದ 2022 ರಲ್ಲಿ ಇದ್ದಂತಹ 12 ಸಾವಿರ ಹೆ. ತೊಗರಿ ಬೆಳೆ ಪ್ರದೇಶ ಇದೀಗ ವಿಸ್ತರಣೆಗೊಂಡಿದ್ದು, ಈಗ 31 ಸಾವಿರ ಹೆ. ನಲ್ಲಿ ತೊಗರಿ ಬೆಳೆಯಲಾಗುತ್ತಿದೆ. ತೊಗರಿ ಬೆಳೆಯಲು ಖರ್ಚು ಕೂಡ ಕಡಿಮೆ, ಇಳುವರಿ ಉತ್ತಮವಾಗಿ ಬಂದಲ್ಲಿ ರೈತರಿಗೆ ಲಾಭದ ಪ್ರಮಾಣವು ಕೂಡ ಹೆಚ್ಚು ಇರಲಿದೆ. ಹೀಗಾಗಿ ತೊಗರಿ ಪ್ರದೇಶ ವಿಸ್ತರಣೆ ಕಂಡಿದೆ. ಕಳೆದ 40-50 ವರ್ಷಗಳಿಂದಲೂ ಟಿಎಂವಿ-2 ತಳಿ ಶೇಂಗಾ ಬೆಳೆಯುತ್ತಿದ್ದು, ತಳಿಯು ತನ್ನ ಚೈತನ್ಯ ಕಳೆದುಕೊಂಡಿರುವುದರಿಂದ ಶೇಂಗಾ ಬೆಳೆಯಲ್ಲಿ ರೈತರಿಗೆ ಉತ್ತಮ ಇಳುವರಿ ದೊರೆಯುತ್ತಿಲ್ಲ. ಜಿಲ್ಲೆಯಲ್ಲಿ ಡಿಹೆಚ್-256 ಹಾಗೂ ಸಹ್ಯಾದ್ರಿ ದುರ್ಗ ಎಂಬ ಎರಡು ಹೊಸ ಶೇಂಗಾ ತಳಿಗಳನ್ನು ಪರಿಚಯಿಸಲಾಗುತ್ತಿದ್ದು, ರೈತರಿಗೆ ಪ್ರಾತ್ಯಕ್ಷಿಕೆಗಾಗಿ ನೀಡಿ ಪರೀಕ್ಷೆ ಮಾಡಲಾಗುತ್ತಿದೆ, ಇವು ಉತ್ತಮವಾಗಿವೆ ಎಂಬ ವರದಿಯೂ ಬಂದಿವೆ ಎಂದರು. ಚಳ್ಳಕೆರೆ ಶಾಸಕ ಟಿ. ರಘುಮೂರ್ತಿ ಮಾತನಾಡಿ, 2022-23 ನೇ ಸಾಲಿನಲ್ಲಿ ಬೆಳೆ ವಿಮೆ ಪರಿಹಾರ ಯೋಜನೆಯಲ್ಲಿ 48 ಕೋಟಿ ರೂ. ಗೂ ಹೆಚ್ಚಿನ ಅಕ್ರಮ ಜರುಗಿದ ಬಗ್ಗೆ ಕೈಗೊಂಡಿರುವ ಕ್ರಮಗಳ ಕುರಿತು ಮಾಹಿತಿ ಒದಗಿಸಲು ತಿಳಿಸಿದರು, ಇದಕ್ಕೆ ಪ್ರತಿಕ್ರಿಯಿಸಿದ ಜಂಟಿಕೃಷಿ ನಿರ್ದೇಶಕ ಮಂಜುನಾಥ್ ಅವರು, ಈ ಪ್ರಕರಣದ ಬಗ್ಗೆ ಈಗಾಗಲೆ ತನಿಖೆ ಕೈಗೊಂಡು, ದಾಖಲೆಗಳ ಸಹಿತ ವರದಿಯನ್ನು ಸಲ್ಲಿಸಲಾಗಿದೆ ಎಂದರು.

# ಬ್ರಹ್ಮಶ್ರೀ ನಾರಾಯಣ ಗುರುಗಳ 171ನೇ ಜಯಂತಿ ಆಚರಣೆ



**ಚಿಕ್ಕಮಗಳೂರು:** ಬ್ರಹ್ಮಶ್ರೀ ನಾರಾಯಣ ಗುರುಗಳ 171ನೇ ಜಯಂತ್ಯೋತ್ಸವನ್ನು ನಗರದ ಜಿಲ್ಲಾ ಶ್ರೀನಾರಾಯಣಗುರು ಸಂಘದ ಕಛೇರಿಯಲ್ಲಿ ಆಚರಿಸಲಾಯಿತು.

ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಸಂಘದ ಅಧ್ಯಕ್ಷ ಕೃಷ್ಣಪ್ಪ, ದಾಸರಹಳ್ಳಿ ನಾರಾಯಣಗುರು ಸಮುದಾಯ ಭವನವನ್ನು ನಿರ್ಮಿಸಲು ಸಮಾಜದವರು ಇಚ್ಚಿಸಿದ್ದು ಭವನ ನಿರ್ಮಾಣಕ್ಕೆ 4.50ಕೋಟಿ ವ್ಯಯಿಸಲಾಗುವುದು, ಈಗಾಗಲೇ ಸಮಾಜದ ನೆರವಿನೊಂದಿಗೆ 45ಲಕ್ಷ ರೂ ದೇಣಿಗೆ ಹಣದಲ್ಲಿ ಭವನಕ್ಕೆ ತಳಪಾಯವನ್ನು ನಿರ್ಮಿಸಲಾಗಿದೆ ಎಂದರು.

ಕಾಂಗ್ರೆಸ್ ರಾಷ್ಟ್ರೀಯ ಪ್ರಧಾನ ಕಾರ್ಯದರ್ಶಿ ಬಿ.ಕೆ ಹರಿಪ್ರಸಾದ್ ರವರು 10ಲಕ್ಷ ರೂ ಶಾಸಕ ಹೆಚ್.ಡಿ ತಮ್ಮಯ್ಯ ತಮ್ಮ ಅನುದಾನದಲ್ಲಿ 10ಲಕ್ಷ ರೂ ಬಿಡುಗಡೆ ಮಾಡಿದ್ದಾರೆ. ಬಿ.ಕೆ ಹರಿಪ್ರಸಾದ್‌ರವರು ಇನ್ನೂ ಹೆಚ್ಚಿನ ಅನುದಾನ ನೀಡುವ ಭರವಸೆ ನೀಡಿದ್ದಾರೆ ಎಂದು ಹೇಳಿದ ಅವರು, ಭವನ ನಿರ್ಮಾಣಕ್ಕೆ ಸಮುದಾಯದ ಎಲ್ಲರು ಹೆಚ್ಚಿನ ಸಹಕಾರ ನೀಡಬೇಕು ಎಂದು ಮನವಿ ಮಾಡಿದರು.

ಭವನ ನಿರ್ಮಾಣಕ್ಕೆ ಹೆಚ್ಚಿನ ಅನುದಾನ ನೀಡುವಂತೆ ಸಧ್ಯದಲ್ಲೆ ಮುಖ್ಯಮಂತ್ರಿಗಳನ್ನು ಬೇಟಿ ಮಾಡಿ ಮನವಿ ಸಲ್ಲಿಸಲಾಗುವುದು ಎಂದರು.

ಜಯಂತಿ ಅಂಗವಾಗಿ ಬ್ರಹ್ಮಶ್ರೀ ನಾರಾಯಣಗುರುಗಳ ಭಾವಚಿತ್ರಕ್ಕೆ ಸಮಾರಂಭದಲ್ಲಿ ಸಾಮೂಹಿಕವಾಗಿ ಪುಷ್ಪನಮನ ಸಲ್ಲಿಸಲಾಯಿತು.

ಈ ಕಾರ್ಯಕ್ರಮದಲ್ಲಿ ಗೌರವ ಅಧ್ಯಕ್ಷರುಗಳಾದ ಶಾಂತ್‌ಕುಮಾರ್, ಗುಣಶೇಖರ್ ಉಪಾಧ್ಯಕ್ಷರಾದ ಎಲ್.ಸಿ ಚಂದ್ರು, ಸಿ.ಆರ್ ಕುಮಾರ್, ಅಯ್ಯಪ್ಪ, ಚಂದ್ರುಕೋಟೆ, ಕಾರ್ಯದರ್ಶಿ ಶ್ರೀನಿವಾಸ್‌ಮಾಯಪ್ಪ, ಖಜಾಂಚಿ ಸುರೇಶ್, ಮಹಿಳಾಧ್ಯಕ್ಷೆ ಶಶಿಕಲಾ, ಹಾಗೂ ಪದಾದಿಕಾರಿಗಳು ಶ್ರೀಧರ್, ಹರೀಶ್, ರಾಮು, ಪ್ರೇಮಲತಾ, ತಾರಾಕೃಷ್ಣ, ಪದ್ಮಾವತಿ, ಸುಧಾ ಅಯ್ಯಪ್ಪ, ಗಿರಿಜಾ, ಮಂಜುಳಾ ಉಪಸ್ಥಿತರಿದ್ದರು.

# ವಿಜೃಂಭಣೆಯಿಂದ ನೆರವೇರಿದ ಹಿಂದೂ ಮಹಾಗಣಪತಿ ವಿಸರ್ಜನೆ



**ಚಿಕ್ಕಮಗಳೂರು:** ನಗರದ ಹಿಂದೂ ಮಹಾ ಗಣಪತಿ ವಿಸರ್ಜನಾ ಮೆರವಣಿಗೆಯು ಸಹಸ್ರಾರು ಭಕ್ತರ ಜಯಘೋಷಗಳ ನಡುವೆ ವಿಜೃಂಭಣೆಯಿಂದ ನೆರವೇರಿತು.

ಬಸವನಹಳ್ಳಿ ಮುಖ್ಯರಸ್ತೆಯ ಓಂಕಾರೇಶ್ವರ ದೇವಸ್ಥಾನ ಆವರಣದಲ್ಲಿ ಪ್ರತಿಷ್ಠಾಪಿಸಲಾಗಿದ್ದ ಗಣಪನಿಗೆ ಮಧ್ಯಾಹ್ನ 12 ಗಂಟೆಗೆ ಅರ್ಚಕ ಸುಮಂತ್ ನೆಮ್ಮಾರು ಮತ್ತು ತಂಡದಿಂದ ಮೂಡುಗಣಪತಿ ಸೇವೆ ಸಲ್ಲಿಸಿ ನಂತರ ವಿಸರ್ಜನಾ ಪೂಜೆ ನೆರವೇರಿಸುತ್ತಿದ್ದಂತೆ ಗಣಪತಿ ಸಮಿತಿ ಸದಸ್ಯರು ವಿಸರ್ಜನಾ ಕಾರ್ಯಕ್ಕೆ ಸಿದ್ಧತೆ ಆರಂಭಿಸಿದರು.

**ಸಾಂಪ್ರದಾಯಿಕ ಉಡುಪು :** ತಿಳಿಹಸಿರು ಜುಬ್ಬ, ಬಿಳಿ ಬಣ್ಣದ ಪೈಜಾಮದೊಂದಿಗೆ ತಲೆಗೆ ಕೇಸರಿ ರುಮಾಲು ಸುತ್ತಿಕೊಂಡು ಸಾಂಪ್ರದಾಯಿಕ ಉಡುಪಿನೊಂದಿಗೆ ಸಮಿತಿ ಸದಸ್ಯರು ಇನ್ನಿತರೆ ಮುಖಂಡರು ಧಾರ್ಮಿಕ ಕಾರ್ಯಗಳನ್ನು ಕೈಗೊಳ್ಳುತ್ತಿದ್ದಂತೆ ದೇವಸ್ಥಾನದ ಕಡೆಗೆ ನಿಧಾನವಾಗಿ ಜನಸಾಗರವೇ ಹರಿದುಬರಲಾರಂಭಿಸಿತು.

ಮಹಾ ಗಣಪತಿಯನ್ನು ಅಲಂಕೃತ ವಾಹನದ ಪ್ರಭಾವಳಿಗೆ ತಂದು ಕೂರಿಸುತ್ತಿದ್ದಂತೆ ಮಂಗಳ ವಾದ್ಯಗಳು ಮೊಳಗಲಾರಂಭಿಸಿತು. ಭಕ್ತರು ಗಣಪನಿಗೆ ಬೀಳ್ಕೊಡುಗೆಯ ನಮನಗಳನ್ನು ಸಲ್ಲಿಸಿದರು. ಮಹಾ ಮಂಗಳರಾರತಿ ಮುಗಿದು ಈಡುಗಾಯಿ ಹೊಡೆಯುತ್ತಿದ್ದಂತೆ ವಿನಾಯಕನಿಗೆ ಜಯಘೋಷಗಳು ಮೊಳಗಿದವು.

ಬೆರಗಾಗಿಸಿದ ಜನಸ್ತೋಮ

ನೋಡ ನೋಡುತ್ತಿದ್ದಂತೆ ಸಹಸ್ರಾರು ಜನರು ಮೆರವಣಿಗೆಯಲ್ಲಿ ಸೇರಿಕೊಂಡರು. ನಿರೀಕ್ಷೆಗೂ ಮೀರಿ ಯುವಕರು, ಯುವತಿಯರು ಸೇರಿ ಡಿಜೆ ಸದ್ದಿಗೆ ಪ್ರತ್ಯೇಕವಾಗಿ ಹೆಜ್ಜೆ ಹಾಕಿದರು.

ಮೆರವಣಿಗೆ ರಾಘವೇಂದ್ರಸ್ವಾಮಿ ದೇವಸ್ಥಾನದ ಬಳಿಗೆ ಬರುವ ವೇಳೆಗೆ ನೋಡುಗರು ನಿಬ್ಬೆರಗಾಗುವಷ್ಟು ಮಂದಿ ಕುಣಿದು ಕುಪ್ಪಳಿಸಲಾರಂಭಿಸಿದರು. ಕಳೆದ ವರ್ಷಕ್ಕೆ ಹೋಲಿಸಿದರೆ ಮೂರ್ನಾಲ್ಕು ಪಟ್ಟು ಹೆಚ್ಚಿನ ಜನರು ಆಗಮಿಸಿ ಸಂಭ್ರಮಿಸಿದರು.

**ಡಿಜೆ ಸದ್ದಿಗೆ ಹೆಜ್ಜೆ :**

ಮಹಿಳೆಯರು, ಮಕ್ಕಳು, ಯುವಕ, ಯುವತಿಯರು, ವೃದ್ಧರಾದಿಯಾಗಿ ಯಾವುದೇ ಬೇಧಭಾವವಿಲ್ಲದೆ ಎಲ್ಲರೂ ಕಲೆತು ಒಗ್ಗಟ್ಟು ಪ್ರದರ್ಶಿಸಿದರಲ್ಲದೆ, ಸಾಂಪ್ರದಾಯಿಕ ಮೆರವಣಿಗೆಗೆ ವಿಶೇಷ ಮೆರಗು ತುಂಬಿದರು.

ವಿಧಾನ ಪರಿಷತ್ ಸದಸ್ಯ ಸಿ.ಟಿ.ರವಿ, ಬಜರಂಗದಳದ ಮುಖಂಡ ರಘು ಸಕಲೇಶಪುರ, ವಿಶ್ವಹಿಂದೂ ಪರಿಷತ್, ಬಜರಂಗದಳ, ಬಿಜೆಪಿ ಮುಖಂಡರು ಕಾರ್ಯಕರ್ತರು ಭಾಗವಹಿಸಿದ್ದರು.

ಡಿಜೆ ಸದ್ದು, ಕಣ್ಣು ಕುಕ್ಕುವ ಬಣ್ಣ ಬಣ್ಣದ ವಿದ್ಯುತ್ ಬೆಳಕಿನಡಿ ಯುವಕ, ಯುವತಿಯರು ಕುಣಿಯುತ್ತಾ ಸಾಗಿದರು. ದಾರಿಯುದ್ದಕ್ಕೂ ನಿವಾಸಿಗಳು ಗಣಪನಿಗೆ ಪೂಜೆ, ಮಂಗಳರಾತಿ ಮಾಡಿಸಿದರು. ರಸ್ತೆಗೆ ನೀರು ಹಾಕಿ ಶ್ರೀಯವರನ್ನು ಬರಮಾಡಿಕೊಂಡ ಜನರು ಈಡುಗಾಯಿ ಹೊಡೆದು ಭಕ್ತಿ ಸಮರ್ಪಿಸಿದರು.

ಮೆರವಣಿಗೆಯಲ್ಲಿ ಸಾಗಿ ಬಂದ ಬೃಹತ್ ಶ್ರೀರಾಮನ ವಿಗ್ರಹ ವಿಶೇಷ ಆಕರ್ಷಣೆ ಆಗಿತ್ತು. ಸಾವಿರಾರು ಜನರು ರಾಮನ ಮೂರ್ತಿ ಬಳಿ ನಿಂತು ಸೆಲ್ಫಿ, ಫೋಟೋ ತೆಗೆಸಿಕೊಳ್ಳುತ್ತಿದ್ದುದು ಮಾಮೂಲಾಗಿತ್ತು. ಪುತ್ತೂರಿನ ನಾಸಿಕ್ ಡೋಲಿನ ಸದ್ದು ಯುವಕರನ್ನು ಹುಚ್ಚೆದ್ದು ಕುಣಿಯುವಂತೆ ಮಾಡಿತು. ಬೊಂಬೆ ಕುಣಿತ ಇನ್ನಿತರೆ ಸಾಂಸ್ಕೃತಿಕ ಕಲಾ ತಂಡಗಳು ಮೆರವಣಿಗೆಯ ಸೊಬಗು ಹೆಚ್ಚಿಸಿದವು.

ಓಂಕಾರೇಶ್ವರ ದೇವಸ್ಥಾನದಿಂದ ಆರಂಭಗೊಂಡ ವಿಸರ್ಜನಾ ಮೆರವಣಿಗೆ ಆಶೀರ್ವಾದ ಸರ್ಕಲ್, ವಿಜಯಪುರ ಮುಖ್ಯ ರಸ್ತೆ, ಪೂಜಾ ಸರ್ಕಲ್, ಮಲ್ಲಂದೂರು ರಸ್ತೆ ವಿಜಯಪುರ ಪೆಂಡಾಲ್, ಫುಡ್ ಪ್ಯಾಲೇಸ್, ರಾಘವೇಂದ್ರ ಮಠದ ರಸ್ತೆ, ಶ್ರೀಕಂಠಪ್ಪ ಸರ್ಕಲ್, ಬಸವನಹಳ್ಳಿ ಮುಖ್ಯ ರಸ್ತೆ, ಹನುಮಂತಪ್ಪ ಸರ್ಕಲ್, ಎಂಜಿ ರಸ್ತೆ, ಆಜಾದ್ ಪಾರ್ಕ್ ಸರ್ಕಲ್ ಮೂಲಕ ಸಾಗಿ ಕೋಟೆ ಕೆರೆಯಲ್ಲಿ ವಿಸರ್ಜಿಸಲಾಯಿತು.

13 ದಿನಗಳ ಕಾಲ ವಿವಿಧ ಧಾರ್ಮಿಕ ಕಾರ್ಯಕ್ರಮಗಳು, ಸ್ಪರ್ಧಾ ಚಟುವಟಿಕೆಗಳು, ನಿತ್ಯಪ್ರಸಾದ ವಿತರಣೆ, ಪೂಜಾ ಕೈಂಕರ್ಯಗಳೊಂದಿಗೆ ಸಾಗಿದ ಗಣೇಶೋತ್ಸವಕ್ಕೆ ಸಹಸ್ರಾರು ಜನರ ಭಕ್ತಿ ಭಾವ ಸಮರ್ಪಣೆಯೊಂದಿಗೆ ಶಾಂತಿಯುತವಾಗಿ ತೆರೆ ಬಿತ್ತು.

ಹಿಂದೂ ಮಹಾ ಗಣಪತಿ ಸಮಿತಿ ಅಧ್ಯಕ್ಷ ಆಟೋ ಶಿವಣ್ಣ, ಪದಾಧಿಕಾರಿಗಳಾದ ಕೃಷ್ಣ, ಸಂತೋಷ್ ಕೋಟ್ಯಾನ್, ಪ್ರದೀಪ್ ರಾವ್, ಶ್ಯಾಂ ವಿ ಗೌಡ, ಸೇರಿದಂತೆ ನೂರಾರು ಮಂದಿ ಮೆರವಣಿಗೆ ಯಶಸ್ವಿಗೆ ಶ್ರಮಿಸಿದರು.

# ಇಂದು ಮೂಡಿಗೆರೆಯಲ್ಲಿ ಶಿಕ್ಷಕರ ದಿನಾಚರಣೆ

**ಚಿಕ್ಕಮಗಳೂರು, ಸೆ.8:** ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ ಹಾಗೂ ಶಾಲಾ ಶಿಕ್ಷಣ ಇಲಾಖೆಯ ಸಂಯುಕ್ತ ಆಶ್ರಯದಲ್ಲಿ ಸೆಪ್ಟಂಬರ್ 9 ರಂದು ಬೆಳಿಗ್ಗೆ 10 ಗಂಟೆಗೆ ಮೂಡಿಗೆರೆಯ ರೈತ ಭವನದಲ್ಲಿ ಜಿಲ್ಲಾ ಮತ್ತು ತಾಲ್ಲೂಕು ಮಟ್ಟದ ಶಿಕ್ಷಕರ ದಿನಾಚರಣೆ, ಜಿಲ್ಲಾ ಅತ್ಯುತ್ತಮ ಶಿಕ್ಷಕ ಪ್ರಶಸ್ತಿ ಪ್ರದಾನ ಹಾಗೂ ನಿವೃತ್ತ ಶಿಕ್ಷಕರಿಗೆ ಸನ್ಮಾನ ಸಮಾರಂಭ ನಡೆಯಲಿದೆ.

ಮಾನ್ಯ ಇಂಧನ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಶ್ರೀ ಕೆ.ಜೆ.ಜಾರ್ಜ್ ಅವರು ಕಾರ್ಯಕ್ರಮವನ್ನು ಉದ್ಘಾಟಿಸಲಿದ್ದಾರೆ. ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ಸಚಿವ ಶ್ರೀ ಎಸ್.ಮಧು ಬಂಗಾರಪ್ಪ, ವಿಧಾನ ಪರಿಷತ್ ಮಾನ್ಯ ಉಪ ಸಭಾಪತಿ ಶ್ರೀ ಎಂ.ಕೆ.ಪ್ರಾಣೇಶ್, ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಗಮದ ಅಧ್ಯಕ್ಷ ಹಾಗೂ ಶಾಸಕ ಟಿ.ಡಿ.ರಾಜೇಗೌಡ, ಅನಿವಾಸಿ ಭಾರತೀಯ ಕೋಶದ ಉಪಾಧ್ಯಕ್ಷೆ ಡಾ.ಆರತಿ ಕೃಷ್ಣ, ರಾಜ್ಯ ಪ್ರವಾಸೋದ್ಯಮ ಅಭಿವೃದ್ಧಿ ನಿಗಮದ ಅಧ್ಯಕ್ಷ ಎಂ.ಶ್ರೀನಿವಾಸ್ ಭಾಗವಹಿಸಲಿದ್ದಾರೆ.

ಮೂಡಿಗೆರೆ ಕ್ಷೇತ್ರದ ಶಾಸಕರಾದ ನಯನ ಮೋಟಮ್ಮ ಅಧ್ಯಕ್ಷತೆ ವಹಿಸಲಿದ್ದು, ಉಡುಪಿ-ಚಿಕ್ಕಮಗಳೂರು ಲೋಕಸಭಾ ಕ್ಷೇತ್ರದ ಸಂಸದರಾದ ಕೋಟ ಶ್ರೀನಿವಾಸ ಪೂಜಾರಿ, ರಾಜ್ಯಸಭೆ ಸದಸ್ಯರಾದ ಜೈರಾಮ್ ರಮೇಶ್, ಹಾಸನ ಲೋಕಸಭಾ ಕ್ಷೇತ್ರದ ಸಂಸದರಾದ ಶ್ರೇಯಸ್ ಎಂ. ಪಟೇಲ್, ವಿಧಾನ ಪರಿಷತ್ ಸದಸ್ಯರಾದ ಎಸ್.ಎಲ್.ಭೋಜೇಗೌಡ, ಶಾಸಕರುಗಳಾದ ಜಿ.ಹೆಚ್.ಶ್ರೀನಿವಾಸ್, ಕೆ.ಎಸ್. ಆನಂದ್, ಹೆಚ್.ಡಿ.ತಮ್ಮಯ್ಯ, ವಿಧಾನ ಪರಿಷತ್ ಸದಸ್ಯರುಗಳಾದ ಸಿ.ಟಿ.ರವಿ, ಡಾ.ಧನಂಜಯ ಸರ್ಜಿ, ಭದ್ರಾ ಕಾಡಾ ಅಧ್ಯಕ್ಷರಾದ ಡಾ. ಕೆ.ಪಿ.ಅಂಶುಮಂತ್, ಕ.ರಾ.ಕೃಷಿ ಉತ್ಪನ್ನ ಸಂಸ್ಕರಣೆ ಮತ್ತು ರಫ್ತು ನಿಗಮದ ಅಧ್ಯಕ್ಷರಾದ ಬಿ.ಹೆಚ್. ಹರೀಶ್, ಹಳೆಮೂಡಿಗೆರೆ ಗ್ರಾ.ಪಂ ಅಧ್ಯಕ್ಷರಾದ ರಂಜಿತ, ಪಟ್ಟಣ ಪಂಚಾಯಿತಿ ಅಧ್ಯಕ್ಷ ಕೆ.ವೆಂಕಟೇಶ್ ಉಪಾಧ್ಯಕ್ಷ ಹೊಸಕೆರೆ ರಮೇಶ್ ಮತ್ತಿತರರು ಭಾಗವಹಿಸುವರು.

ಸ್ವಾಮಿ ವಿವೇಕಾನಂದ ಯೂತ್ ಮೂವ್‌ಮೆಂಟ್‌ನ ಸೀನಿಯರ್ ಮ್ಯಾನೇಜರ್ ಸಂದೀಪ್ ಎಸ್.ವಸಿಷ್ಠ ಪ್ರಧಾನ ಉಪನ್ಯಾಸ ನೀಡುವರು.

ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ರಾಜೇಂದ್ರ ಕುಮಾರ್ ಕಠಾರಿಯಾ, ಜಿಲ್ಲಾಧಿಕಾರಿ ಸಿ.ಎನ್.ಮೀನಾ ನಾಗರಾಜ್, ಜಿ.ಪಂ. ಮುಖ್ಯಕಾರ್ಯ ನಿರ್ವಹಣಾಧಿಕಾರಿ ಹೆಚ್.ಎಸ್.ಕೀರ್ತನಾ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ.ವಿಕ್ರಮ್ ಅಮಟೆ ಪಾಲ್ಗೊಳ್ಳುವರು.

# ಪದವೀಧರರ ಸಂಘಕ್ಕೆ 14.71 ಲಕ್ಷ ರೂ.ಗಳ ನಿವ್ವಳ ಲಾಭ : ಲೋಕಪ್ಪಗೌಡ



**ಚಿಕ್ಕಮಗಳೂರು :** ಸಹಕಾರಿ ರಂಗದಲ್ಲಿನ ಬಹಳಷ್ಟು ಸವಾಲುಗಳ ನಡುವೆ ಪದವೀಧರರ ಸಂಘ ಹತ್ತು ವರ್ಷದಿಂದ ಸದಸ್ಯರಿಗೆ ಶೇ.10 ಡಿವಿಡೆಂಟ್ ಒದಗಿಸಿಕೊಡುವ ಮೂಲಕ ಶ್ರೇಯೋಭಿವೃದ್ಧಿಗೆ ಶ್ರಮಿಸುತ್ತಿದೆ ಎಂದು ಜಿಲ್ಲಾ ಪದವೀಧರರ ಪತ್ತಿನ ಸಹಕಾರ ಸಂಘದ ಅಧ್ಯಕ್ಷ ಬಿ.ಸಿ.ಲೋಕಪ್ಪಗೌಡ ಹೇಳಿದರು.

ನಗರದ ಬಸವನಹಳ್ಳಿ ಸಮೀಪದ ಜಿಲ್ಲಾ ಪದವೀಧರರ ಪತ್ತಿನ ಸಹಕಾರ ಸಂಘದ ಕಚೇರಿಯಲ್ಲಿ ಶನಿ ವಾರ ಸರ್ವಸದಸ್ಯರ 25ನೇ ವಾರ್ಷಿಕ ಮಹಾಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು ಪ್ರಸಕ್ತ ಸಾಲಿನಲ್ಲಿ 14.71 ಲಕ್ಷ ರೂ. ನಿವ್ವಳ ಲಾಭ ಗಳಿಸುವ ಮೂಲಕ ಆರ್ಥಿಕವಾಗಿ ಗಟ್ಟಿಯಾಗಿದೆ ಎಂದು ತಿಳಿಸಿದರು.

ಸದಸ್ಯರಿಗೆ ವೈಯಕ್ತಿಕ 2 ಲಕ್ಷ ರೂ.ಗಳ ಸಾಲಸೌಲಭ್ಯದ ವ್ಯವಸ್ಥೆಯನ್ನು ಸಕಲ ಭದ್ರತೆಯಡಿ ಹೆಚ್ಚಳಗೊ ಳಿಸುವ ವಿಚಾರವನ್ನು ತೀರ್ಮಾನಿಸಲಾಯಿತು. ಅಲ್ಲದೇ 75 ಲಕ್ಷ ಸಾಲಸೌಲಭ್ಯವನ್ನು ಮುಂದೆ ಹೆಚ್ಚಳಗೊಳಿ ಸುವ ಗುರಿಯಿದೆ. ಜೊತೆಗೆ ಪದವಿಧರರ ಸಂಘದ ಸದಸ್ಯರಾಗಿ ಠೇವಣಿ ಹೂಡಿಸಿದ್ದಲ್ಲಿ ಸದಸ್ಯರಿಗೂ ಅನುಕೂಲವಾಗುವ ಜೊತೆಗೆ ಸಂಘವು ಆರ್ಥಿಕವಾಗಿ ಪ್ರಗತಿ ಸಾಧಿಸಲಿದೆ ಎಂದು ತಿಳಿಸಿದರು.


ಸಾಲಸೌಲಭ್ಯ ಒದಗಿಸುವ ಜೊತೆಗೆ ವಸೂಲಾತಿ ಕಾರ್ಯವು ಯಶಸ್ಸಿನಿಂದ ಸಾಗುತ್ತಿದೆ. ಇತರೆ ಸಹಕಾ ರಿ ಸಂಘ, ಬ್ಯಾಂಕ್‌ಗಳು ಹೊರತಾಗಿ ಪದವೀಧರರ ಸಂಘವು ಸದಸ್ಯರಿಗೆ ಹೆಚ್ಚು ಸ್ಪಂದಿಸುತ್ತಿದೆ. ಅಲ್ಲದೇ ಎಲ್ಲಾ ರೀತಿಯ ಸೌಕರ್ಯವು ಕಲ್ಪಿಸುತ್ತಿರುವ ಪರಿಣಾಮ ಪದವೀಧರರ ಸಂಘವು ಮುಂಚೂಣಿಯಲ್ಲಿರಲು ಸಾಧ್ಯವಾಗಿದೆ ಎಂದು ಹೇಳಿದರು.

ನಗರದ ಬಹುತೇಕ ಸಹಕಾರಿ ಸಂಘದ ಆಡಳಿತ ಮಂಡಳಿ ಮನೆ ಮನೆ ತಿರುಗಿ ಸಂಘದ ಧ್ಯೇಯೋ ದ್ದೇಶವನ್ನು ಜನತೆಗೆ ಮನವರಿಕೆ ಮಾಡಿಕೊಟ್ಟಿರುವುದರಿಂದ ರಾಜ್ಯಮಟ್ಟದಲ್ಲಿ ಗುರುತಿಸಿಕೊಳ್ಳಲು ಸಾಧ್ಯವಾಗಿದೆ. ಆ ನಿಟ್ಟಿನಲ್ಲಿ ಪದವೀಧರರ ಸಂಘವು ಹೆಚ್ಚಿನ ಶ್ರಮವಿಟ್ಟು ಕಾರ್ಯನಿರ್ವಹಿಸಿ ಸಂಘದ ಬೆಳವಣಿಗೆಗೆ ಕಾರ್ಯಪ್ರವೃತ್ತವಾಗಿದೆ ಎಂದು ಹೇಳಿದರು.

ಸಂಘದ ನಿರ್ದೇಶಕ ಡಾ|| ಡಿ. ಎಲ್.ವಿಜಯ್‌ಕುಮಾರ್ ಮಾತನಾಡಿ ಸದಸ್ಯರುಗಳ ಸಹಕಾರದಿಂದ ಸ ಂಘವು ಆರ್ಥಿಕ, ಶೈಕ್ಷಣಿಕವಾಗಿ ಬೆಳವಣಿಗೆ ಹೊಂದುತ್ತಿದೆ. ಸಂಘದಲ್ಲಿ ಯಾವುದೇ ರೀತಿಯ ಪ್ರಶ್ನೆಗಳಿದ್ದಲ್ಲಿ ನೇರವಾಗಿ ಸಂಪರ್ಕಿಸಿ ಬಗೆಹರಿಸಿಕೊಂಡಲ್ಲಿ ಸಂಘವು ಸಮಾಜದ ಮುಂದೆ ಶಕ್ತಿಶಾಲಿಯಾಗಿ ಹೊರಹೊಮ್ಮಲು ಸಾಧ್ಯವಾಗಲಿದೆ ಎಂದರು.

ಇದೇ ವೇಳೆ ಸಂಘದ ವ್ಯವಸ್ಥಾಪಕ ಸಿ.ಎಂ.ನಾರಾಯಣಸ್ವಾಮಿ ವಾರ್ಷಿಕ ಲೆಕ್ಕ ಪರಿಶೋಧನೆಯನ್ನು ಮಂಡಿಸಿದರು. ಈ ಸಂದರ್ಭದಲ್ಲಿ ಸಂಘದ ಉಪಾಧ್ಯಕ್ಷ ಹೆಚ್. ಆರ್.ಮರುಳಪ್ಪ, ನಿರ್ದೇಶಕರುಗಳಾದ ಎಂ. ಸಿ.ಶಿವಾನಂದಸ್ವಾಮಿ, ಸಿ. ಆರ್.ಪ್ರೇಮ್‌ಕುಮಾರ್. ಎ.ಎನ್.ಮಹೇಶ್, ಯು.ಟಿ.ನಾಗರಾಜ್, ಕೆ.ವೆಂಕಟೇಶ್ ಪೈ, ಬಿ.ಹೆಚ್.ಶಂಕರ್, ಎಂ.ಪಿ.ಗಂಗೇಗೌಡ, ಸಿ.ಪಿ.ದುಗ್ಗೇಗೌಡ, ಗೋವಿಂದೇಗೌಡ ಮತ್ತಿತರರಿದ್ದರು.

# ಯುವ ಸಮೂಹದ ಆರ್ಥಿಕ ಶಕ್ತಿಗೆ ಯುವನಿಧಿ ಸಹಕಾರಿ : ತಮ್ಮಯ್ಯ



**ಚಿಕ್ಕಮಗಳೂರು:** ರಾಜ್ಯದ ಬಡವರ್ಗದ ಜನರಿಗೆ ಹಾಗೂ ನಿರುದ್ಯೋಗ ಯುವಸಮೂಹದ ಕಲ್ಯಾಣಕ್ಕಾಗಿ ಪಂಚ ಗ್ಯಾರಂಟಿ ಯೋಜನೆಗಳು ಅನುಷ್ಠಾನಗೊಳಿಸುವ ಮೂಲಕ ರಾಜ್ಯಸರ್ಕಾರ ಜನತೆಗೆ ಆರ್ಥಿಕ ಶಕ್ತಿ ತುಂಬಿದೆ ಎಂದು ಶಾಸಕ ಹೆಚ್.ಡಿ.ತಮ್ಮಯ್ಯ ಹೇಳಿದರು.

ನಗರದ ಮಲೆನಾಡು ವಿದ್ಯಾಸಂಸ್ಥೆಯಲ್ಲಿ ಶನಿವಾರ ವಿದ್ಯಾರ್ಥಿಗಳಿಗೆ ಏರ್ಪಡಿಸಿದ್ಧ ಯುವನಿಧಿ ಕಾರ್ಯಕ್ರಮದ ಅಂಗವಾಗಿ ಶನಿವಾರ ಯುವನಿಧಿ ಕೈಪಿಡಿ ಬಿಡುಗಡೆಗೊಳಿಸಿ ಅವರು ಮಾತನಾಡಿದರು.

ಪ್ರಸ್ತುತು ಜಿಲ್ಲೆಯಲ್ಲಿ ಯುವನಿಧಿ ಯೋಜನೆಯಡಿ ಒಟ್ಟು 14 ಸಾವಿರ ಯುವಕ-ಯುವತಿಯರು ಅರ್ಜಿ ಸಲ್ಲಿಸಿ ಸರ್ಕಾರದ ಸೌಲಭ್ಯ ಪಡೆದುಕೊಳ್ಳುತ್ತಿದ್ದು ಚಿಕ್ಕಮಗಳೂರು ತಾಲ್ಲೂಕಿನಲ್ಲಿ 3400ಕ್ಕೂ ಹೆಚ್ಚು ಪದವಿ ಹಾಗೂ ಡಿಪ್ಲೋಮಾ ಪದವಿದರರು ಉದ್ಯೋಗದ ಸಂದರ್ಶನಕ್ಕಾಗಿ ಯುವನಿಧಿ ಬಳಸಿಕೊಳ್ಳುತ್ತಿದ್ದಾರೆ ಎಂದು ಹೇಳಿದರು.

ದೇಶದ ಭವಿಷ್ಯದ ಪ್ರಜೆಗಳಾದ ಯುವಕರು ಉದ್ಯೋಗದ ಜೊತೆಗೆ ಜೀವನದಲ್ಲಿ ರಾಷ್ಟ್ರಪ್ರೇಮವನ್ನು ಬೆಳೆಸಿಕೊಳ್ಳಬೇಕು. ಭವಿಷ್ಯದಲ್ಲೇ ಎಲ್ಲೇ ಉದ್ಯೋಗಕ್ಕೆ ತೆರಳಿದರೂ ದೇಶ ಹಾಗೂ ತಾಯ್ನಾಡಿನ ಊರನ್ನು ಮರೆಯಬಾರದು. ಇದೀಗ ಕೆಲವೇ ವರ್ಷಗಳಲ್ಲಿ ಪದವಿಧರರಾಗುವ ಕಾಲೇಜಿನ ವಿದ್ಯಾರ್ಥಿಗಳು ಸರ್ಕಾ ರದ ಸವಲತ್ತನ್ನು ಪಡೆದುಕೊಳ್ಳಬೇಕು ಎಂದು ಕಿವಿಮಾತು ಹೇಳಿದರು.

ಜಿಲ್ಲಾ ಗ್ಯಾರಂಟಿ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಎಂ.ಸಿ.ಶಿವಾನಂದಸ್ವಾಮಿ ಮಾತನಾಡಿ ಪದವಿದರ ರಾದ ವಿದ್ಯಾರ್ಥಿಗಳಿಗೆ 3000 ಹಾಗೂ ಡಿಪ್ಲೋಮಾ ವಿದ್ಯಾರ್ಥಿಗಳಿಗೆ 1500ರಂತೆ ಎರಡು ವರ್ಷಗಳ ಕಾಲ ಗಳದವರೆಗೆ ಸರ್ಕಾರವು ಮಾಶಾಸನವು ನೀಡುತ್ತಿದ್ದು ಸಮರ್ಪಕವಾಗಿ ಸದ್ಬಳಕೆ ಮಾಡಿಕೊಳ್ಳಬೇಕು ಎಂದು ಸಲಹೆ ಮಾಡಿದರು.

ತಾಲ್ಲೂಕು ಗ್ಯಾರಂಟಿ ಪ್ರಾಧಿಕಾರದ ಅಧ್ಯಕ್ಷ ಎಂ.ಮಲ್ಲೇಶ್‌ಸ್ವಾಮಿ ಮಾತನಾಡಿ ನಿರುದ್ಯೋಗದಿಂದ ಯು ವಜನಾಂಗ ಬಳಲಬಾರದೆಂಬ ದೃಷ್ಟಿಯಿಂದ ರಾಜ್ಯಸರ್ಕಾರ ಉದ್ಯೋಗ ಲಭಿಸುವವರೆಗೂ ಆರ್ಥಿಕ ಸಹಾ ಯಧನ ಕಲ್ಪಿಸಿದ್ದು ತಾಲ್ಲೂಕಿನಲ್ಲಿ ಒಟ್ಟು 3400ಕ್ಕೂ ಹೆಚ್ಚು ಯುವಜನಾಂಗದ ಸೌಲಭ್ಯದ ಪಡೆದುಕೊಂಡು ಯೋಜನೆ ಉಪಯೋಗ ಪಡೆದುಕೊಂಡಿದ್ದಾರೆ ಎಂದರು.

ಮಲೆನಾಡು ವಿದ್ಯಾಸಂಸ್ಥೆ ಗೌರವ ಕಾರ್ಯದರ್ಶಿ ಡಾ|| ಡಿ. ಎಲ್.ವಿಜಯ್‌ಕುಮಾರ್ ಮಾತನಾಡಿ ಜಿ ಲ್ಲೆ, ರಾಜ್ಯ ಅಥವಾ ಹೊರರಾಜ್ಯಗಳಲ್ಲಿ ಉದ್ಯೋಗ ಹರಸಿ ತೆರಳುವ ವಿದ್ಯಾರ್ಥಿಗಳಿಗೆ ಸಣ್ಣಪುಟ್ಟ ಖರ್ಚು ವೆಚ್ಚಗಳಿಗೆ ಯುವನಿಧಿ ಸೂಕ್ತವಾಗಿದೆ. ಆ ನಿಟ್ಟಿನಲ್ಲಿ ವಿದ್ಯಾರ್ಥಿಗಳು ಯೋಜನೆಯ ಶಕ್ತಿ ಪಡೆದು ಪಾಲಕರ ಉದ್ಯೋಗದ ಕನಸನ್ನು ಈಡೇರಿಸಬೇಕು ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಮಲೆನಾಡು ವಿದ್ಯಾಸಂಸ್ಥೆ ಕಾಲೇಜಿನ ಪ್ರಾಂಶುಪಾಲ ಹಸೀನಾಬಾನು, ಶೈಕ್ಷಣಿಕ ಸಲ ಹೆಗಾರ ಮಂಜುನಾಥ್‌ಭಟ್, ಉದ್ಯೋಗ ಕಚೇರಿ ಅಧಿಕಾರಿ ಮಂಜುನಾಥ್ ಮತ್ತಿತರರಿದ್ದರು.

ಹಿಂದೂ ಮಹಾಗಣಪತಿ

# ರಂಗಪೂಜೆ ಸಂಪನ್ನ



ಚಿಕ್ಕಮಗಳೂರು : ಹಿಂದೂ ಮಹಾಗಣಪತಿ ಹನ್ನೇರಡನೇ ವರ್ಷದ ಪ್ರತಿಷ್ಟಾಪನೆಯ ಪ್ರಯುಕ್ತ ಶುಕ್ರವಾರ ಸಂಜೆ ಶ್ರೀಯವರ ಅಭಿಮುಖದಲ್ಲಿ ರಂಗಪೂಜಾ ಕೈಂಕರ್ಯವು ಭಕ್ತಾಧಿಗಳು ಸಮ್ಮುಖದಲ್ಲಿ ಶ್ರದ್ಧಾಭಕ್ತಿಯಿಂದ ಸಂಪನ್ನಗೊಂಡಿತು. ಮಹಾಮಂಗಳಾರತಿ ನಂತರ ಭಕ್ತಾಧಿಗಳಿಗೆ ಪ್ರಸಾದ ವಿನಿ ಯೋಗ ಮಾಡಲಾಯಿತು.

# ಕೃಷ್ಣಾನದಿ ನೀರು ಹಂಚಿಕೆ ಕುರಿತ ಅಂತಿಮ ಅದಿಸೂಚನೆಗೆ ಕೇಂದ್ರದ ಸಿದ್ಧತೆ

**ಬೆಂಗಳೂರು:** ಕೃಷ್ಣಾ ನದಿ ನೀರು ಹಂಚಿಕೆ ಕುರಿತಾಗಿ ರಚನೆಯಾಗಿರುವ ನ್ಯಾಯಮಂಡಳಿ ನೀಡಿರುವ ಅಂತಿಲ್ಲ ತೀರ್ಪನ್ನು ಅಧಿಸೂಚನೆ ಮೂಲಕ ಪ್ರಕಟಿಸಲು ಮುಂದಾಗಿರುವ ಕೇಂದ್ರ ಸರ್ಕಾರ ಈ ಕುರಿತು ಎಲ್ಲಾ ರಾಜ್ಯಗಳ ನಡುವೆ ಒಮ್ಮತ ಮೂಡಿಸಲು ಸಭೆ ಕರೆಯಲು ತೀರ್ಮಾನಿಸಿದೆ.

ಸದ್ಯದಲ್ಲಿಯೇ ಈ ಕುರಿತಂತೆ ಸಭೆಗೆ ದಿನಾಂಕ ನಿಗದಿಪಡಿಸಿ ಮಾಹಿತಿ ನೀಡಲಾಗುವುದು ಸಭೆಗೆ ತಪ್ಪದೆ ಹಾಜರಾಗುವಂತೆ ಕೇಂದ್ರ ಜಲಸಂಪನ್ಮೂಲ ಸಚಿವರು ತಮಗೆ ಮನವಿ ಮಾಡಿದ್ದಾರೆ ಅದರಂತೆ ತಾವು ಅವರು ಸೂಚಿಸಿದ ದಿನ ಸಭೆಗೆ ಹಾಜರಾಗುತ್ತೇನೆ

Published and Owned by : **PRATHIBHA M.S.,** Published at : No. 900/A2, Opp-Banashankri Temple Arch, Main Road, Shakti Nagara, Davanagere, Karnataka-577004. Printed by : **MALLIKARJUNAPPA H.G.** Printed at : SHIVA MEDIA HOUSE, No.900/A2, Opp-Banashankari Temple Arch, Main Road, Davanagere, Karnataka-577004. Editor: **MALLIKARJUNAPPA H.G.**